ಸಂಪುಟ: 04 ಸಂಚಿಕೆ: 268 ಪುಟಗಳು: 08 ಬುಧವಾರ 11 ಡಿಸೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ಜೀವನ ಯಾಕ್ ಹೀಗಿದೆ ಅಂತ ಯೋಚನೆ ಮಾಡಬೇಡಿ, ಜೀವನ ಯಾಕ್ ಹೀಗಿರ್ಬಾರ್ದು ಅಂತ ಯೋಚನೆ ಮಾಡಿ. ನೀವು ಅಂದು ಕೊಂಡ ಜೀವನ ನಿಮ್ಮದಾಗುತ್ತೆ...

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಎಸ್.ಎಂ. ಕೃಷ್ಣ ನಿಧನಕ್ಕೆ ಕಂಬನಿ ಮಿಡಿದ ದೇವೇಗೌಡರು

• ಉದಯವಾಹಿನಿ, ಬೆಂಗಳೂರು

ಮಾಜಿ ಮುಖ್ಯಮಂತ್ರಿ, ಮಾಜಿ ರಾಜ್ಯಪಾಲ ಎಸ್.ಎಂ. ಕೃಷ್ಣ ಅವರ ನಿಧನಕ್ಕೆ ಮಾಜಿ ಪ್ರಧಾನಮಂತ್ರಿ ಹೆಚ್. ಡಿ. ದೇವೇಗೌಡರು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸಂತಾಪ ಸೂಚಿಸಿದ್ದಾರೆ. ಮಾಜಿ ಮುಖ್ಯಮಂತ್ರಿಗಳು, ಮಾಜಿ ರಾಜ್ಯಪಾಲರು, ಮಾಜಿ ವಿದೇಶಾಂಗ ಸಚಿವರು ಹಾಗೂ ಪದ್ಮವಿಭೂಷಣ ಪ್ರಶಸ್ತಿ ಪುರಸ್ಕೃತರಾದ ಎಸ್.ಎಂ. ಕೃಷ್ಣ ಅವರ ನಿಧನದ ಸುದ್ದಿ ಕೇಳಿ ತೀವ್ರ ಆಘಾತವಾಯಿತು ಎಂದು ಗೌಡರು xನಲ್ಲಿ ತಿಳಿಸಿದ್ದಾರೆ.

## ಇಂದು ರಾಜ್ಯಾದ್ಯಂತ ಸರ್ಕಾರಿ ರಜೆ ಘೋಷಣೆ

• ಉದಯವಾಹಿನಿ, ಬೆಂಗಳೂರು

ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರ ನಿಧನದ ಹಿನ್ನಲೆಯಲ್ಲಿ ರಾಜ್ಯದಲ್ಲಿ ಮೂರು ದಿನ ಶೋಕಾಚರಣೆ ಘೋಷಣೆ ಮಾಡಲಾಗಿದೆ. ಜೊತೆಗೆ ನಾಳೆ ಒಂದು ದಿನ ಸರ್ಕಾರಿ ರಜೆಯನ್ನು ಘೋಷಿಸಿ ಡಿಸಿಎಂ ಡಿ.ಕೆ ಶಿವಕುಮಾರ್ ಆದೇಶಿಸಿದ್ದಾರೆ.

ಪ್ರಯಾಣ ಇಂದು ತಡರಾತ್ರಿ, ಮಾಜಿ ಮುಖ್ಯಮಂತ್ರಿ ಎಸ್ ಎಂ ಕೃಷ್ಣ ಅವರು ಹೃದಯಾಘಾತದಿಂದ ನಿಧನರಾಗಿದ್ದರು.

ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಧಾನಿ ಮೋದಿ, ರಾಷ್ಟ್ರಪತಿ ಮುರ್ಮು ಸೇರಿದಂತೆ ಹಲವು ಗಣ್ಯರು ಕಂಬನಿ ಮಿಡಿದು, ಸಂತಾಪ ಸೂಚಿಸಿದ್ದಾರೆ.

ಇಂದು ಅವರ ಹುಟ್ಟೂರಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆಗೆ ಸರ್ಕಾರ ಆದೇಶಿಸಿದೆ. ಜೊತೆಗೆ ನಾಳೆ ಒಂದು ದಿನ ರಾಜ್ಯಾದ್ಯಂತ ಸರ್ಕಾರಿ ರಜೆಯನ್ನು ಎಸ್ ಎಂ ಕೃಷ್ಣ ಅವರ ನಿಧನದ ಹಿನ್ನಲೆಯಲ್ಲಿ ಘೋಷಿಸಲಾಗುತ್ತಿದೆ ಎಂಬುದಾಗಿ ಡಿಸಿಎಂ ಡಿ.ಕೆ ಶಿವಕುಮಾರ್ ತಿಳಿಸಿದ್ದಾರೆ.

## ವಿಧಾನಸೌಧದಲ್ಲಿ ಎಸ್.ಎಂ ಕೃಷ್ಣ ಪುತ್ಥಳಿ ನಿರ್ಮಾಣ ಆಗಬೇಕು

• ಉದಯವಾಹಿನಿ, ಬೆಳಗಾವಿ

ಮಾಜಿ ಮುಖ್ಯಮಂತ್ರಿ ಎಸ್ ಎಂ ಕೃಷ್ಣ ಅವರು ತಡರಾತ್ರಿ ಹೃದಯಾಘಾತದಿಂದ ಬೆಂಗಳೂರಿನ ತಮ್ಮ ಸದಾಶಿವನಗರದಲ್ಲಿ ಸಾವನ್ನಪ್ಪಿದ್ದಾರೆ. ಈ ವೇಳೆ ಬೆಳಗಾವಿಯ ಅಧಿವೇಶನದ ಕಲಾಪದಲ್ಲಿ ಕಾನೂನು ಸಚಿವ ಎಚ್ ಕೆ ಪಾಟೀಲ್ ಸಂತಾಪ ಸೂಚಿಸಿ, ವಿಧಾನಸೌಧದಲ್ಲಿ ಎಸ್ಎಂ ಕೃಷ್ಣ ಅವರ ಪುತ್ಥಳಿ ನಿರ್ಮಾಣ ಆಗಬೇಕು ಎಂದು ತಿಳಿಸಿದರು. ಸಂತಾ ಪ ಸೂಚನೆಯ ನಿರ್ಣಯದ ಮೇಲೆ ಮಾತನಾಡಿದ ಅವರು, ವಿಧಾನಸೌಧದಲ್ಲಿ ಎಸ್.ಎಮ್ ಕೃಷ್ಣ ಪುತ್ತಳಿ ಆಗಬೇಕು ಎಂದು ವಿಧಾನಸಭೆ ಕಲಾಪದಲ್ಲಿ ಸಚಿವ ಎಚ್ ಕೆ ಪಾಟೀಲ್ ಪ್ರಸ್ತಾಪಿಸಿದ್ದಾರೆ. ಕೃಷ್ಣ ನೀರಾವರಿ ಯೋಜನೆ ಪ್ರದೇಶದಲ್ಲಿ ಸ್ಮಾರಕ ಆಗಬೇಕು. ಆಲಮಟ್ಟಿ ಕೃಷ್ಣ ನೀರಾವರಿ ಯೋಜನೆ ಪ್ರದೇಶದಲ್ಲಿ ಪುತ್ತಳಿ ನಿರ್ಮಾಣ ಆಗಬೇಕು. ಎಸ್ಎಮ್ ಕೃಷ್ಣ ಅವರ ನೆನಪು ನಮಗೆ ಉಳಿಯಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಎಚ್ ಕೆ ಪಾಟೀಲ್ ಮನವಿ ಮಾಡಿದರು.

## ಎಸ್.ಎಂ ಕೃಷ್ಣ ನಿಧನಕ್ಕೆ ಕೋಡಿಶ್ರೀ ಸಂತಾಪ

• ಉದಯವಾಹಿನಿ, ಮಂಡ್ಯ


ಮಾಜಿ ಸಿಎಂ ಹಾಗೂ ಮಾಜಿ ವಿದೇಶಾಂಗ ಸಚಿವ ಎಸ್.ಎಂ ಕೃಷ್ಣ ಅವರು ಇಂದು ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ. ಈಗಾಗಲೇ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ. ಇದೀಗ ಕೋಡಿ ಶ್ರೀಗಳು ಸಹ ಎಸ್.ಎಂ ಕೃಷ್ಣ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

ಮಂಡ್ಯ ಜಿಲ್ಲೆಯ ಕೆ.ಆರ್ ಪೇಟೆಯಲ್ಲಿ ಮಾತ ನಾಡಿದ ಅವರು, ಸರ್ಕಾರ ಆರ್ಥಿಕ ಅವಲಂಬನೆ ಹೆಚ್ಚಾಗಿರೋಕೆ ಎಸ್.ಎಂ.ಕೃಷ್ಣ ದೂರ ದೃಷ್ಟಿಯೇ ಕಾರಣ. ವರನಟ ಡಾ. ರಾಜಕುಮಾರ್ ಅಪಹರಣ ಆದಾಗ ಎಸ್.ಎಂ.ಕೃಷ್ಣ ನನ್ನನ್ನ ಮನೆಗೆ ಕರೆಸಿದ್ದರು. ಆ ವೇಳೆ ಎಸ್.ಎಂ.ಕೃಷ್ಣ ದಂಪತಿ ಚಿಂತಾಕ್ರಾಂತರಾಗಿದ್ದರು. 107 ದಿನಗಳ ಬಳಿಕ ರಾಜ್ ಕುಮಾರ್ ಬಿಡುಗಡೆ ಆಗ್ತಾರೆ ಎಂದು ಭವಿಷ್ಯ ನುಡಿದಿದ್ದೆ. ಆದ್ದರಿಂದ ಕೃಷ್ಣರೊಂದಿಗೆ ನಿಕಟ ಹಾಗೂ ಪ್ರೀತಿ ಸಂಪರ್ಕವಿತ್ತು ಎಂದು ಶ್ರೀಗಳು ಅವರ ಜತೆಗಿನ ನೆನಪನ್ನು ಮೆಲುಕು ಹಾಕಿದ್ದಾರೆ. ನಾನು ಬೆಂಗಳೂರಿನಲ್ಲಿ ಓದುವಾಗ ಕಾನೂನು ಕಾಲೇಜಿನಲ್ಲಿ ಎಸ್.ಎಂ.ಕೃಷ್ಣ ಅವರು ಪ್ರಾಧ್ಯಪಕಾರಾಗಿ ಕೆಲಸ ಮಾಡ್ತಿದ್ದರು. ಅದಾದ ಬಳಿಕ ಮೂರು ಬಾರಿ ಮಠಕ್ಕೆ ಭೇಟಿ ನೀಡಿದ್ರು. ಅವರು ಡಿಸಿಎಂ ಆಗಿದ್ದಾಗ ನೀವು ಸಿಎಂ ಆಗ್ತಿರಾ ಅಂತ ನಾನು ಹೇಳಿದೆ.

ಬಾಂಬೆಯಲ್ಲಿ ಗೌರ್ನರ್ ಆಗಿದ್ದಾಗ ನನ್ನನ್ನ ಕರೆಸಿಕೊಂಡಿದ್ರು. ಎಸ್.ಎಂ.ಕೃಷ್ಣ ಅವರ ಸಾವಿನಿಂದ ಬಹಳಷ್ಟು ನಷ್ಟವಾಗಿದೆ. ಸರ್ಕಾರ ಆರ್ಥಿಕ ಅವಲಂಬನೆ ಹೆಚ್ಚಾಗಿರೋಕೆ ಎಸ್.ಎಂ.ಕೃಷ್ಣ ದೂರ ದೃಷ್ಟಿಯೇ ಕಾರಣ ಎಂದು ಎಸ್.ಎಂ.ಕೆ ಸಾಧನೆಗಳನ್ನ ಕೋಡಿಮಠದ ಶ್ರೀಗಳು ಮೆಲುಕು ಹಾಕಿದ್ದಾರೆ.

# ಕೇಳಿದ್ದು ಮೀಸಲಾತಿ ಕೊಟ್ಟಿದ್ದು ಲಾಠಿ ಏಟು

● ಕುಂದಾನಗರಿ ಕೊತ-ಕೊತ..! ● ಹಿಂಸಾಚಾರಕ್ಕೆ ತಿರುಗಿದ ಪಂಚಮಸಾಲಿ ಹೋರಾಟ ● ಲಾಠಿ ಚಾರ್ಜ್, ಕಲ್ಲು ತೂರಾಟ; ಜಯಮೃತ್ಯುಂಜಯ ಸ್ವಾಮೀಜಿ ವಶಕ್ಕೆ



### ಸ್ವಾಮೀಜಿ ನೇತೃತ್ವದಲ್ಲಿ ಸುವರ್ಣ ಸೌಧಕ್ಕೆ ಮುತ್ತಿಗೆ

ಪಂಚಮಸಾಲಿ ಸಮುದಾಯವನ್ನು 2ಎಗೆ ಸೇರ್ಪಡೆ ಮಾಡಬೇಕು ಎಂದು ಆಗ್ರಹಿಸಿ ಪಂಚಮಸಾಲಿ ಪೀಠದ ಜಯ ಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಬೆಳಗಾವಿಗೆ ಟ್ರ್ಯಾಕ್ಟರ್ ರ‍್ಯಾಲಿ ಮೂಲಕ ಪ್ರತಿಭಟನೆಗೆ ಸ್ವಾಮೀಜಿ ಕರೆ ಕೊಟ್ಟಿದ್ದರು. ಸರ್ಕಾರ ಇದಕ್ಕೆ ಅನುಮತಿ ಕೊಟ್ಟರಲಿಲ್ಲ. ಹೀಗಿದ್ದರೂ ಪಂಚಮಸಾಲಿ ಲಿಂಗಾಯತ ಸಮುದಾಯ ಮೀಸಲಾತಿಗಾಗಿ ಹೋರಾಟ ನಡೆಸುತ್ತಿರುವ ಪ್ರತಿಭಟನಾಕಾರರು ಸುವರ್ಣ ಸೌಧದತ್ತ ಬಂದಾಗ ರಸ್ತೆ ಮಧ್ಯೆ ಪೊಲೀಸರು ತಡೆದರು.



■ ಪಂಚಮಸಾಲಿ ಮೀಸಲಾತಿ: ಮಾತುಕತೆಗೆ ಬನ್ನಿ ಅಂತ ಕರೆದಿದ್ದೆ, ಯಾರೂ ಬರಲಿಲ್ಲ'- ಸಿಎಂ ಸಿದ್ದರಾಮಯ್ಯ

■ ಹೀರೆಬಾಗೇವಾಡಿಯಲ್ಲೇ ಮುಖಂಡರು ಪೊಲೀಸ್ ವಶಕ್ಕೆ

■ ಟ್ರ್ಯಾಕ್ಟರ್ ಮೂಲಕ ಸುವರ್ಣ ಸೌಧ ಮುತ್ತಿಗೆಗೆ ಪ್ಲಾನ್



### ಹಿಟ್ಲರ್ ಸರ್ಕಾರ

ಪಂಚಮಸಾಲಿ ಬಂಧುಗಳ ಹೋರಾಟವನ್ನು ಹತ್ತಿಕ್ಕಲು ರಾಜ್ಯ ಕರ್ನಾಟಕ ಸರ್ಕಾರವು ಅಡಾಲ್ಫ್ ಹಿಟ್ಲರ್ ಮಾರ್ಗವನ್ನು ಆಯ್ಕೆ ಮಾಡಿಕೊಂಡಿರುವುದು ಅತ್ಯಂತ ದುರದೃಷ್ಟಕರ. ಸಂತರು, ಪಂಚಮಸಾಲಿ ಸಮುದಾಯ ಜಗದ್ಗುರುಗಳಾದ ಶ್ರೀಬಸವ ಮೃತ್ಯುಂಜಯ ಮಹಾಸ್ವಾಮೀಜಿಗಳನ್ನು ಅತ್ಯಂತ ಹೇಯವಾಗಿ ನಡೆಸಿಕೊಂಡಿರುವುದು ನನಗೆ ಅತೀವ ನೋವುಂಟು ಮಾಡಿದೆ. ಇದು ಶಿಲಾಯುಗ ಕಾಲದ ಮನಃಸ್ಥಿತಿಯ ಸರ್ಕಾರ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಕಿಡಿಕಾರಿದ್ದಾರೆ.

• ಉದಯವಾಹಿನಿ, ಬೆಳಗಾವಿ

2ಎ ಮೀಸಲಾತಿಗೆ ಆಗ್ರಹಿಸಿ ಲಿಂಗಾಯತ ಪಂಚಮಸಾಲಿ ಸಮುದಾಯದ ಹೋರಾಟ ಮಂಗಳವಾರ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಬೆಳಗಾವಿಯ ಸುವರ್ಣಸೌಧಕ್ಕೆ ಮುತ್ತಿಗೆ ಹಾಕಲು ಯತ್ನಿಸಿದರು. ಈ ವೇಳೆ ಪೊಲೀಸರು ಪ್ರತಿಭಟನಾಕಾರರನ್ನು ನಿಯಂತ್ರಿಸಲು ಲಾಠಿ ಚಾರ್ಜ್ ನಡೆಸಿದರು. ವಿಧಾನಮಂಡಲ ಚಳಿಗಾಲದ ಅಧಿವೇಶನ ನಡೆಯುತ್ತಿರುವ ಸುವರ್ಣ ವಿಧಾನಸೌಧದ ಸುತ್ತ ಪೊಲೀಸರು ಬ್ಯಾರಿಕೇಡ್‌ಗಳನ್ನು ಹಾಕಿದ್ದರು.

ಪ್ರತಿಭಟನೆಕಾರರು ಬ್ಯಾರಿಕೇಡ್‌ಗಳನ್ನು ತಳ್ಳಿ ಸುವರ್ಣ ಸೌಧಕ್ಕೆ ನುಗ್ಗಲು ಯತ್ನಿಸಿದರು. ಇದರಿಂದ ಸುವರ್ಣಸೌಧ ಮುಂಭಾಗ ಭಾರೀ ಹೈಡ್ರಾಮಾ ಸೃಷ್ಟಿಯಾಗಿದ್ದು, ಪೊಲೀಸರಿಗೆ ಹಾಗೂ ಪ್ರತಿಭಟನೆಕಾರರಿಗೆ ಗಾಯಗಳಾಗಿದ್ದು, ಪರಿಸ್ಥಿತಿ ಉದ್ವಿಗ್ನಗೊಂಡಿದೆ. ಬಸವ ಜಯ ಮೃತ್ಯುಂಜಯ ಸ್ವಾಮಿ ನೇತೃತ್ವದಲ್ಲಿ ಪಂಚಮಸಾಲಿ ಸಮಾಜ 2ಎ ಮೀಸಲಾತಿಗೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದು, ಟ್ರ್ಯಾಕ್ಟರ್ ರ‍್ಯಾಲಿಯ ಮೂಲಕ ಸುವರ್ಣಸೌಧಕ್ಕೆ ಮುತ್ತಿಗೆ ಹಾಕಲು ಯತ್ನಿಸಿದರು.

ಈ ವೇಳೆ ಪೊಲೀಸರು, ಪಂಚಮಸಾಲಿ ಸಮಾಜದವರ ನಡುವೆ ತಳ್ಳಾಟ ನೂಕಾಟ ನಡೆದಿದೆ. ಆಕ್ರೋಶಗೊಂಡ ಪ್ರತಿಭಟನಾಕಾರರು ಸರ್ಕಾರಿ ವಾಹನಗಳು, ಶಾಸಕರು, ಎಂಎಲ್‌ಸಿಗಳಿಗೆ ಸೇರಿದ ವಾಹನಗಳ ಮೇಲೆ ಕಲ್ಲು ತೂರಾಟ ನಡೆಸಿದರು. ಕಲ್ಲು ತೂರಾಟದಲ್ಲಿ ಇಪ್ಪತ್ತಕ್ಕೂ ಅಧಿಕ ಪೊಲೀಸರಿಗೆ ಗಾಯಗಳಾಗಿದ್ದರೆ, ಐವತ್ತಕ್ಕೂ ಅಧಿಕ ಹೋರಾಟಗಾರರು ಗಾಯಗೊಂಡಿದ್ದಾರೆ. ಪರಿಸ್ಥಿತಿ ಕೈಮೀರುತ್ತಿರುವುದನ್ನು ಗಮನಿಸಿದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಆರ್ ಹಿತೇಂದ್ರ ಅವರು ಲಾಠಿ ಚಾರ್ಜ್‌ಗೆ ಆದೇಶಿಸಿದರು. ಲಾಠಿ ಚಾರ್ಜ್ ನಲ್ಲಿ ಹಲವಾರು ಪ್ರತಿಭಟನಾಕಾರರು ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ರವಾನಿಸಲಾಗಿದೆ.ಈ ಹೋರಾಟ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಪರಿಸ್ಥಿತಿ ಕೈಮೀರುವ ಹಂತಕ್ಕೆ ಹೋಗಿದೆ. ಹೀಗಾಗಿ ಪ್ರತಿಭಟನೆಯ ನೇತೃತ್ವವಹಿಸಿರುವ ಕೂಡಲ ಸಂಗಮದ ಬಸವ ಜಯಮೃತ್ಯುಂಜಯ ಸ್ವಾಮೀಜಿ ಅವರನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಹೆಚ್ಚುವರಿ ಎಸ್ಪಿ ನಾರಾಯಣ್ ಬರಮಣಿ ಅವರು ಸ್ವಾಮೀಜಿ ಅವರನ್ನು ಇನ್ನೋವಾ ಕಾರಿನಲ್ಲಿ ಕರೆದುಕೊಂಡು ಹೋದರು. ಬಸನಗೌಡ ಪಾಟೀಲ್ ಯತ್ನಾಳ್, ಈರಣ್ಣ ಕಡಾಡಿ, ಅರವಿಂದ್ ಬೆಲ್ಲದ್ ಸೇರಿದಂತೆ ಹಲವರನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.



ಹೋರಾಟ ಹತ್ತಿಕ್ಕಲು ಕಾಂಗ್ರೆಸ್ ಸರ್ಕಾರದಲ್ಲಿರುವ ನಮ್ಮದೇ ಸಮಾಜದ ಕೆಲ ಕಿಡಿಗೇಡಿಗಳು ಮಾಡಿಸಿದ ಕೆಲಸವಿದು. ಮುಂದಿನ ಹೋರಾಟದ ಬಗ್ಗೆ ಸ್ವಾಮೀಜಿ ತೆಗೆದುಕೊಳ್ಳುವ ನಿರ್ಧಾರಕ್ಕೆ ಬದ್ಧ

– ಬಸನಗೌಡ ಪಾಟೀಲ್ ಯತ್ನಾಳ್, ಶಾಸಕ



ಕಾಂಗ್ರೆಸ್ ಆಡಳಿತವನ್ನು ಸಮುದಾಯ ನೆನಪಿಟ್ಟುಕೊಳ್ಳುತ್ತದೆ. ಅದಕ್ಕೆ ತಕ್ಕ ಶಾಸ್ತಿ ಕಲಿಸುತ್ತದೆ. ಲಿಂಗಾಯತ ಪಂಚಮಸಾಲಿ ಸಮುದಾಯದ ಪರವಾಗಿ ನನ್ನ ನೋವನ್ನು ವ್ಯಕ್ತಪಡಿಸುತ್ತಿದ್ದೇನೆ. ಬೇರೆ ಸಮಾಜಕ್ಕೆ ಮೀಸಲಾತಿ ಇದೆ. ಆದರೆ ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ ಏಕೆ ಮೀಸಲಾತಿ ಇಲ್ಲ ಎಂದು ಕೇಳುತ್ತಿದ್ದೇವೆ


–ಅರವಿಂದ ಬೆಲ್ಲದ್, ಶಾಸಕ

### ಅಮಾಯಕರ ಮೇಲೆ ದೌರ್ಜನ್ಯ



ಬಸವಜಯ ಮೃತ್ಯುಂಜಯ ಸ್ವಾಮೀಜಿ ಮಾತನಾಡಿ, ಈ ರೀತಿ ಸಮಾಜ ಬಾಂಧವರ ಮೇಲೆ ಲಾಠಿ ಚಾರ್ಜ್ ಮಾಡಿದ್ದು ಸರಿಯಲ್ಲ. ಅಮಾಯಕರ ಮೇಲೆ ದೌರ್ಜನ್ಯ ಮಾಡಿದ್ದಾರೆ. ಇದು ಬ್ರಿಟಿಷ್ ಸರ್ಕಾರ. ಪೊಲೀಸರ ಮೂಲಕ ಹೋರಾಟ ಹತ್ತಿಕ್ಕಲಾಗಿದೆ. ಸರ್ಕಾರ ಕೂಡಲೇ ಕ್ಷಮೆ ಕೇಳಬೇಕು. ಇದು ಕಾನೂನಿಗೆ ವಿರುದ್ಧವಾಗಿದ್ದು, ಸಂವಿಧಾನಕ್ಕೆ ಮಾಡಿದ ಅಪಮಾನವಾಗಿದೆ. ನಮ್ಮ ಹೋರಾಟದ ಶಕ್ತಿ ಕುಂದಿಸಲು ಸಾಧ್ಯವಿಲ್ಲ ಎಂದರು.

### ಪಂಚಮಸಾಲಿ ಹೋರಾಟಗಾರರ ಮೇಲೆ ಲಾಠಿಚಾರ್ಜ್ ಮಾಡಿದ್ದಕ್ಕೆ ಸರ್ಕಾರ ತಕ್ಕ ಬೆಲೆ ತೆರಬೇಕಾಗುತ್ತದೆ



ಪಂಚಮಸಾಲಿ ಸಮುದಾಯದವರು 2 ಎ ಮೀಸಲಾತಿಗಾಗಿ ನಡೆಸುತ್ತಿದ್ದ ಶಾಂತಿಯುತ ಪ್ರತಿಭಟನೆ ಮೇಲೆ ರಾಜ್ಯ ಸರ್ಕಾರ ಪೊಲೀಸರ ಮೂಲಕ ಲಾಠಿಚಾರ್ಜ್ ಮಾಡಿಸುವ ಮೂಲಕ ಕ್ಷಮಿಸಲಾರದ ತಪ್ಪು ಮಾಡಿದ್ದು, ಇದಕ್ಕೆ ಬೆಲೆ ತೆರಬೇಕಾಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಇದು ಜನ ವಿರೋಧಿ ಸರ್ಕಾರ ಅಂತ ಮತ್ತೆ ಮತ್ತೆ ಸಾಬೀತು ಮಾಡುತ್ತಿದೆ. ಕರ್ನಾಟಕ ವಿಶೇಷವಾಗಿ ರೈತರ ವಿರುದ್ಧ ಹಲವಾರು ಕ್ರಮಗಳನ್ನು ತೆಗೆದುಕೊಂಡಿದ್ದಾರೆ. ಕಾಲಕಾಲಕ್ಕೆ ಪ್ರವಾಹ, ಬರಗಾಲದ ಪರಿಹಾರ ಕೊಟ್ಟಿಲ್ಲ, ನಾವು ಜಾರಿ ತಂದ ಯೋಜನೆಗಳಿಗೆ ತಿಲಾಂಜಲಿ ಇಟ್ಟಿದ್ದಾರೆ. ರಾಜ್ಯ ಸರ್ಕಾರ ನೀಡುತ್ತಿದ್ದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ ಸ್ಥಗಿತಗೊಳಿಸಿದ್ದಾರೆ. ನಾನು ಸಿಎಂ ಆಗಿದ್ದಾಗ ರೈತರ ಮಕ್ಕಳಿಗಾಗಿ ಜಾರಿಗೆ ತಂದಿದ್ದ ರೈತ ವಿದ್ಯಾನಿಧಿ ಯೋಜನೆ ನಿಲ್ಲಿಸಿದ್ದಾರೆ. ಒಂದು ರೀತಿಯಲ್ಲಿ ರೈತ ವಿರೋಧಿ ಮತ್ತು ಜನ ವಿರೋಧಿ ಸರ್ಕಾರ ಇದಾಗಿದೆ ಎಂದು ವಾಗ್ದಾಳಿ ನಡೆಸಿದರು. ಸಾಮಾಜಿಕ ನ್ಯಾಯದ ಬಗ್ಗೆ ಮಾತನಾಡುವ ಮುಖ್ಯಮಂತ್ರಿಗಳು ಅದೇ ಹಿಂದುಳಿದ ವರ್ಗ ಹೆಚ್ಚಿನ ಮೀಸಲಾತಿ ಕೇಳುತ್ತಿರುವ ಸಂದರ್ಭದಲ್ಲಿ ಸಮಾಧಾನದಿಂದ ನ್ಯಾಯಸಮ್ಮತ ತೀರ್ಮಾನ ಮಾಡಬೇಕಿತ್ತು. ಪಂಚಮಸಾಲಿ ಪೀಠದ ಸ್ವಾಮೀಜಿವರು ತಮ್ಮನ್ನು ಸರ್ಕಾರ ನಿರ್ಲಕ್ಷ್ಯ ಮಾಡುತ್ತಿದೆ ಎಂದು ಪದೇ ಪದೇ ಹೇಳುತ್ತಿದ್ದಾರೆ. ಈಗ ಪ್ರತಿಭಟನೆ ಮಾಡುವವರ ಮೇಲೆ ಲಾಠಿ ಚಾರ್ಜ್ ಮಾಡಿ ರಕ್ತ ಬರುವಂತೆ ಮಾಡಿದ್ದು, ಕ್ಷಮಿಸಲಾರದಂತಹ ಅಪರಾಧ. ಇದಕ್ಕೆ ರಾಜ್ಯ ಸರ್ಕಾರ ತಕ್ಕ ಬೆಲೆ ತೆರಬೇಕಾಗುತ್ತದೆ. ಪೊಲೀಸ್ ಆಡಳಿತ, ದೌರ್ಜನ್ಯ ಬಹಳ ದಿನ ನಡೆಯುವುದಿಲ್ಲ ಎಂದು ಎಚ್ಚರಿಸಿದರು.

## ನಿಮ್ಹಾನ್ಸ್ ಪಾಲಿಟ್ರಾಮಾ ಕೇಂದ್ರಕ್ಕೆ ಅನುಮೋದನೆ: ಹಣಕಾಸು ಸಚಿವರಿಗೆ ಮನವಿ

• ಉದಯವಾಹಿನಿ, ನವದೆಹಲಿ



ನಿಮ್ಹಾನ್ಸ್ ಬೆಂಗಳೂರು ಉತ್ತರ ಕ್ಯಾಂಪಸ್‌ನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ 300 ಹಾಸಿಗೆಗಳ ಸಾಮರ್ಥ್ಯದ ಪಾಲಿಟ್ರಾಮಾ ಕೇಂದ್ರದ ಪ್ರಸ್ತಾವಕ್ಕೆ ಶೀಘ್ರವೇ ಅನುಮೋದನೆ ನೀಡಬೇಕು ಎಂದು ಒತ್ತಾಯಿಸಿ ಬೆಂಗಳೂರು ಗ್ರಾಮಾಂತರ ಸಂಸದ ಡಾ.ಸಿ.ಎನ್. ಮಂಜುನಾಥ್ ಅವರು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಮಂಗಳವಾರ ಮನವಿ ಸಲ್ಲಿಸಿದರು. 'ನಿಮ್ಹಾನ್ಸ್ ಆರಂಭವಾದಾಗ ಪ್ರತಿದಿನ ಅಲ್ಲಿಗೆ ಬರುವ ರೋಗಿಗಳ ಸಂಖ್ಯೆ 250ರಷ್ಟು ಇತ್ತು. ಆದರೆ, ಈಗ ಆ ಸಂಖ್ಯೆ 2,500ಕ್ಕಿಂತಲೂ ಹೆಚ್ಚು. ದೇಶದಲ್ಲಿ ಸಂಭವಿಸುವ ಸಾವುಗಳಿಗೆ ರಸ್ತೆ ಅಪಘಾತವು ಐದನೇ ಅತಿದೊಡ್ಡ ಕಾರಣವಾಗಿದೆ. ಅಪಘಾತಗಳಲ್ಲಿ ತೀವ್ರವಾಗಿ ಗಾಯಗೊಂಡವರಿಗೆ 'ಗೋಲ್ಡನ್ ಅವರ್'ನಲ್ಲಿಯೇ ಚಿಕಿತ್ಸೆ ನೀಡಿದರಷ್ಟೇ ಅವರನ್ನು ಉಳಿಸಿಕೊಳ್ಳಲು ಸಾಧ್ಯವಾಗುತ್ತದೆ.

ಆದರೆ, ಜಾಗದ ಕೊರತೆ ಮತ್ತು ಪಾಲಿಟ್ರಾಮಾ ಕೇಂದ್ರ ಇಲ್ಲದೇ ಇರುವುದರಿಂದ ಹಲವು ರೋಗಿಗಳನ್ನು ಬೇರೆ ಆಸ್ಪತ್ರೆಗೆ ಕಳುಹಿಸಲಾಗುತ್ತಿದೆ. ಹೀಗಾಗಿ, ಕೇಂದ್ರ ಸ್ಥಾಪನೆಗೆ ಶೀಘ್ರ ಅನುಮೋದನೆ ನೀಡಬೇಕು ಎಂದು ಅವರು ಆಗ್ರಹಿಸಿದರು. ಈ ಕೇಂದ್ರದ ಸ್ಥಾಪನೆಗೆ ರಾಜ್ಯ ಸರ್ಕಾರವು ಈಗಾಗಲೇ ಭೂಮಿ ಮಂಜೂರು ಮಾಡಿದೆ.

ಪಾಲಿಟ್ರಾಮಾ ಕೇಂದ್ರದ ವಿನ್ಯಾಸವನ್ನು ಒಳಗೊಂಡ ಪ್ರಸ್ತಾವವನ್ನು ಹಲವು ಬಾರಿ ಪರಿಷ್ಕರಿಸಲಾಗಿದೆ. ಅದಕ್ಕೆ ಸಂಸ್ಥೆಯ ಆಡಳಿತ ಮಂಡಳಿಯೂ ಒಪ್ಪಿಗೆ ನೀಡಿದೆ' ಎಂದು ಅವರು ತಿಳಿಸಿದರು. ಕೇಂದ್ರ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ' ಎಂದು ಅವರು ತಿಳಿಸಿದರು.

## ಕಳಂಕಿತರಿಂದ ವಿಜಯೇಂದ್ರ ದೂರವಿರಲಿ: ಮಹೇಶ್ ಒತ್ತಾಯ

• ಉದಯವಾಹಿನಿ, ದಾವಣಗೆರೆ

ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಜಿಲ್ಲೆಯ ಭ್ರಷ್ಟ, ಕಳಂಕಿತ ರಾಜಕಾರಣಿಗಳಿಂದ ಅಂತರ ಕಾಯ್ದುಕೊಳ್ಳುವುದು ಒಳಿತು ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಎಂ.ಆರ್. ಮಹೇಶ್ ಸಲಹೆ ನೀಡಿದರು. ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಹಾಗೂ ಮಾಡಾಳ್ ಕುಟುಂಬದ ಭ್ರಷ್ಟಾಚಾರದ ಬಗ್ಗೆ ಜಿಲ್ಲೆಯ ಜನರಿಗೆ ಗೊತ್ತಿದೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಇವರನ್ನು ಆಯ್ಕೆ ಮಾಡಿ ಕಳುಹಿಸಿ ಎಂದು ವಿಜಯೇಂದ್ರ ಅವರು ಹೇಳಿದ್ದು ಸರಿಯಲ್ಲ ಹೊನ್ನಾಳಿ ಹಾಗೂ ಚನ್ನಗಿರಿ ಕ್ಷೇತ್ರದ ಜನರಿಗೆ ಇದರಿಂದ ತಪ್ಪು ಸಂದೇಶ ರವಾನೆಯಾಗಿದೆ ಎಂದು ಮಂಗಳವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ರೇಣುಕಾಚಾರ್ಯ ಅವರು ಕಾಂಗ್ರೆಸ್ ಮನಸ್ಥಿತಿ ಹೊಂದಿದ್ದಾರೆ. ಮಾಜಿ ಸಂಸದ ಜಿ.ಎಂ.ಸಿದ್ದೇಶ್ವರ ಹಾಗೂ ಶಾಸಕ ಬಿ.ಪಿ.ಹರೀಶ್ ಬಗ್ಗೆ ಅಸಭ್ಯವಾಗಿ ಟೀಕೆ ಮಾಡಿದ್ದಾರೆ. ಇಂತಹ ಬೆಳವಣಿಗೆಯಿಂದ ಪಕ್ಷದ ನಿಷ್ಠಾವಂತ ಕಾರ್ಯಕರ್ತರಿಗೆ ಮುಜುಗರ ಉಂಟಾಗುತ್ತಿದೆ. ಪಕ್ಷದ ಹೈಕಮಾಂಡ್ ಇದನ್ನು ಗಂಭೀರವಾಗಿ ಪರಿಗಣಿಸಬೇಕು. ರೇಣು ಕಾಚಾರ್ಯ ಅವರನ್ನು ಪಕ್ಷದಿಂದ ಉಚ್ಚಾಟಿಸಬೇಕು ಎಂದು ಆಗ್ರಹಿಸಿದರು.

## ಎಸ್.ಎಂ.ಕೃಷ್ಣ ಅವರ ರಾಜಕೀಯ ಕೊಡುಗೆ ನಾಡು ಮರೆಯಲು ಸಾಧ್ಯವಿಲ್ಲ: ಹೆಚ್‌ಡಿಕೆ

• ಉದಯವಾಹಿನಿ, ನವದೆಹಲಿ

ಎಸ್.ಎಂ.ಕೃಷ್ಣ ಅವರ ನಿಧನ ನನಗೆ ವೈಯಕ್ತಿಕವಾಗಿ ನೋವು ತಂದಿದೆ. ಅವರು ಅಜಾತಶತ್ರುವಾಗಿದ್ದರು ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಂಬನಿ ಮಿಡಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶಕ್ಕೆ ರಾಜ್ಯಕ್ಕೆ ಅವರು ದೊಡ್ಡ ಮಟ್ಟದ ಕೊಡುಗೆ ನೀಡಿದ್ದಾರೆ. ರಾಜ್ಯದಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಅವರು ಗಣನೀಯವಾಗಿ ಕೆಲಸ ಮಾಡಿದ್ದಾರೆ.

ಅವರು ನಾಡಿಗೆ ಸಲ್ಲಿಸಿರುವ ಸೇವೆಯನ್ನು ನಾವು ಮರೆಯಲು ಸಾಧ್ಯವಿಲ್ಲ. ಮಾದರಿ ರಾಜಕಾರಣಿಯಾದ ಅವರ ಅಗಲಿಕೆ ನನಗೆ ನೋವು ತಂದಿದೆ. ನಾನು ಕೃಷ್ಣ ಅವರ ಅಂತ್ಯಕ್ರಿಯೆಯಲ್ಲಿ ಭಾಗಿಯಾಗಲಿದ್ದೇನೆ. ಮದ್ದೂರಿನ ಸೋಮನಹಳ್ಳಿಗೆ ನಾನೇ ಹೋಗುವೆ ಎಂದು ತಿಳಿಸಿದರು ಹಲವಾರು ಸಲ ಕೃಷ್ಣ ಅವರನ್ನು ನಾನು ಭೇಟಿಯಾಗಿದ್ದೇನೆ. ನಾನು ಮೊದಲು ಲೋಕಸಭೆ ಚುನಾವಣೆಗೆ ಸ್ಪರ್ಧಿಸಿದಾಗ ಅವರು ರಾಜ್ಯಸಭೆ ಸದಸ್ಯರಾಗಿದ್ದರು. ಮಾಜಿ ಸಚಿವರಾಗಿದ್ದ ಹೆಚ್.ಎನ್.ನಂಜೇಗೌಡರ ಮನೆಯಲ್ಲಿ ಭೇಟಿಯಾಗಿ ಆಶೀರ್ವಾದ ಪಡೆದಿದ್ದು ಈಗಲೂ ನೆನಪಿದೆ ಎಂದರು.

ಮಂಡ್ಯ ಲೋಕಸಭೆ ಚುನಾವಣೆಗೆ ಎನ್‌ಡಿಎ ಅಭ್ಯರ್ಥಿಯಾದ ಮೇಲೆ ಸದಾಶಿವನಗರದ ಅವರ ನಿವಾಸದಲ್ಲಿ ಭೇಟಿಯಾಗಿ ಆಶೀರ್ವಾದ ಪಡೆದು ಕೊಂಡಿದೆ. ಎರಡು ಬಾರಿ ಸಿಎಂ ಆಗಿದ್ದಾಗ ಅವರ ಆರ್ಶೀವಾದ ಪಡೆದಿದ್ದೇನೆ ಎಂದು ನೆನಪಿಸಿಕೊಂಡರು. ಬಹುಶಃ ಎಲ್ಲಾ ರಾಜಕಾರಣಿಗಳಿಗೂ ಅವರಷ್ಟು ಸುದೀರ್ಘ ರಾಜಕೀಯ ಅವಕಾಶ ಸಿಗುವುದು ಕಷ್ಟ. ಅವರಿಂದ ಹಲವು ರೀತಿಯಲ್ಲಿ ಮಾರ್ಗದರ್ಶನ ಪಡೆದಿದ್ದೇನೆ. ಬೆಂಗಳೂರು ನಗರ ಅಭಿವೃದ್ಧಿ, ಐಟಿ ಬಿಟಿ ಕೊಡುಗೆ ಅಪಾರ. ನಮ್ಮ ರಾಜ್ಯದ ಇತಿಹಾಸದಲ್ಲಿ ಕೃಷ್ಣ ಅವರು ಚಿರಸ್ಥಾಯಿಯಾಗಿ ಉಳಿಯಲಿದ್ದಾರೆ ಎಂದು ಅವರು ನುಡಿದರು.

# ಎಎಪಿ ಭದ್ರಕೋಟೆಗೆ ನುಗ್ಗುವುದಕ್ಕೆ ಬಿಜೆಪಿ ರೆಡಿ..!


▶▶ ಬಿಜೆಪಿ ಪಕ್ಷಗಳ ನಡುವೆ ಈ ಬಾರಿ ತ್ರಿಕೋನ ಸ್ಪರ್ಧೆ ▶▶ ಎಎಪಿಯ ಭದ್ರಕೋಟೆ ದೆಹಲಿಯಿಂದಲೇ ಎಎಪಿಯ ರಾಜಕೀಯ ಭವಿಷ್ಯ ಶುರು

• ಉದಯವಾಹಿನಿ, ದೆಹಲಿ



ದೇಶದಲ್ಲಿ ಇನ್ನೊಂದು ವಿಧಾನಸಭೆ ಚುನಾವಣೆ ಸನ್ನಿಹಿತವಾಗುತ್ತಿದೆ. ದೆಹಲಿ ವಿಧಾನಸಭೆ ಚುನಾವಣೆ ಸಮೀಪಿಸುತ್ತಿದ್ದು, ಆಮ್ ಆದ್ಮಿ ಪಾರ್ಟಿ, ಕಾಂಗ್ರೆಸ್ ಹಾಗೂ ಬಿಜೆಪಿ ಪಕ್ಷಗಳ ನಡುವೆ ಈ ಬಾರಿ ತ್ರಿಕೋನ ಸ್ಪರ್ಧೆ ಏರ್ಪಡುತ್ತಿದೆ. ಇಂಡಿಯಾ ಮೈತ್ರಿಕೂಟದ ಭಾಗವಾಗಿದ್ದರೂ, ಏಕಾಂಗಿಯಾಗಿ ಸ್ಪರ್ಧೆ ಮಾಡುವುದಾಗಿ ಈಗಾಗಲೇ ಆಮ್ ಆದ್ಮಿ ಪಾರ್ಟಿ (ಎಎಪಿ) ಹೇಳಿದೆ. ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಈ ಬಾರಿ ತ್ರಿಕೋನ ಸ್ಪರ್ಧೆ ಏರ್ಪಡುತ್ತಿದೆ. ಆದರೆ, ಇಲ್ಲಿ ಬಿಜೆಪಿ ಹಾಗೂ ಎಎಪಿಯ ನಡುವೆಯೇ ಭಾರೀ ಪೈಪೋಟಿ ಇದೆ. ಕಳೆದ ಬಾರಿ ನಡೆದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಶೂನ್ಯ ಸಾಧನೆ ಮಾಡಿತ್ತು. ಹರಿಯಾಣ, ಮಹಾರಾಷ್ಟ್ರ ರಾಜ್ಯಗಳ ಗೆಲುವು ಹಾಗೂ ಜಾರ್ಖಂಡ್‌ನಲ್ಲಿ ಉತ್ತಮ ಸ್ಥಾನವನ್ನುಗಳಿಸಿದ ಖುಷಿಯಲ್ಲಿ ಬಿಜೆಪಿ ಇದೆ.

ಹುಮ್ಮಸ್ಸಿನಲ್ಲಿ ಬಿಜೆಪಿ ಪಕ್ಷವು ಇದೀಗ ದೆಹಲಿ ವಿಧಾನಸಭೆ ಚುನಾವಣೆಗೆ ನುಗ್ಗಿದೆ. ಹೇಳಿ ಕೇಳಿ ದೆಹಲಿ ಎಎಪಿಯ ಭದ್ರಕೋಟೆ ದೆಹಲಿಯಿಂದಲೇ ಎಎಪಿಯ ರಾಜಕೀಯ ಭವಿಷ್ಯ ಶುರುವಾಯಿತು. ಇದಾದ ಮೇಲೆ ಪಂಜಾಬ್‌ನಲ್ಲೂ ಅಧಿಕಾರಕ್ಕೆ ಬರುವಲ್ಲಿ ಎಎಪಿ ಯಶಸ್ವಿಯಾಯಿತು. ಹರಿಯಾಣದಲ್ಲೂ ಮಿಂಚಲಿದೆ ಎನ್ನುವಷ್ಟರಲ್ಲಿ ಎಎಪಿ ಲೆಕ್ಕಾಚಾರಗಳು ತಲೆಕೆಳ ಗಾಯಿತು. ಮದ್ಯ ನೀತಿ ಹಗರಣದಲ್ಲಿ ದೆಹಲಿ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಸೇರಿದಂತೆ ಪ್ರಮುಖ ನಾಯಕರು, ಸಚಿವರು ಜೈಲು ಸೇರಿದರು. ಇದು ಎಎಪಿಗೆ ಭಾರೀ ಹಿನ್ನಡೆಯನ್ನು ಉಂಟು ಮಾಡಿದೆ. ಅಲ್ಲದೇ ಈ ಬಾರಿ ವಿಧಾನಸಭೆ ಚುನಾವಣೆಯಲ್ಲಿ ಇದೇ ವಿಷಯವನ್ನು ಇರಿಸಿಕೊಂಡು ಚುನಾವಣೆ ಅಖಾಡಕ್ಕೆ ಧುಮುಕಲು ಬಿಜೆಪಿ ಎಲ್ಲಾ ರೀತಿಯ ಸಿದ್ಧತೆಗಳನ್ನೂ ಮಾಡಿಕೊಂಡಿದೆ.



2025ರ ಫೆಬ್ರವರಿಯಲ್ಲಿ ದೆಹಲಿ ವಿಧಾನಸಭೆ ಚುನಾವಣೆ ನಡೆಯಲಿದೆ ಎಂದು ಹೇಳಲಾಗಿದೆ.

ಈ ಸಂಬಂಧ ಇನ್ನಷ್ಟೇ ಭಾರತೀಯ ಚುನಾವಣಾ ಆಯೋಗ ಮಾಹಿತಿ ಹಂಚಿಕೊಳ್ಳಬೇಕಿದೆ. ಈಗಾಗಲೇ ಉತ್ತರ ಭಾರತದ ಪ್ರಮುಖ ರಾಜ್ಯಗಳಲ್ಲಿ ಜಯಭೇರಿ ಬಾರಿಸಿರುವ ಬಿಜೆಪಿಯು ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಗೆಲ್ಲುವುದಕ್ಕೆ ಬೇಕಾದ ಸಕಲ ಸಿದ್ಧತೆಗಳನ್ನು ಶುರು ಮಾಡಿಕೊಂಡಿದೆ. ಕಳೆದು ಹೋಗಿರುವ ವರ್ಚಸ್ಸು ಮರಳಿ ಪಡೆಯುವುದು ಹಾಗೂ ಅಧಿಕಾರ ಉಳಿಸಿಕೊಳ್ಳುವ ಎರಡೂ ಸವಾಲು ಎಎಪಿಯ ಮುಂದಿದೆ.

**ತ್ರಿಕೋನ ಸ್ಪರ್ಧೆ ಏರ್ಪಾಡು**

ಎಎಪಿ ದೆಹಲಿಯಲ್ಲಿ ಆಡಳಿತ ನಡೆಸುತ್ತಿದೆ. ದೆಹಲಿ ವಾಯು ಮಾಲಿನ್ಯ ಪ್ರಮಾಣ ಮಿತಿ ಮೀರಿದೆ. ದೆಹಲಿ ನಿಜಕ್ಕೂ ಗ್ಯಾಸ್ ಚೇಂಬರ್‌ನಂತೆ ಬದಲಾಗಿದೆ. ಇನ್ನು ರಾಷ್ಟ್ರ ರಾಜಧಾನಿ ಹಾಗೂ ಕೇಂದ್ರಾಡಳಿತ ಪ್ರದೇಶವಾಗಿರುವ ದೆಹಲಿ ಸಣ್ಣ ವಿಧಾನಸಭೆಯನ್ನು ಹೊಂದಿದೆ. 70 ಜನ ವಿಧಾನಸಭಾ ಸದಸ್ಯರ ಸಾಮರ್ಥ್ಯ ದೆಹಲಿಗೆ ಇದೆ. ಕಳೆದ ಬಾರಿ ನಡೆದ ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಎಎಪಿಯು ಬರೋಬ್ಬರಿ 62 ಸೀಟುಗಳಲ್ಲಿ ಗೆದಿತ್ತು. ಕಾಂಗ್ರೆಸ್ ಸೊನ್ನೆ ಸುತ್ತಿತ್ತು

–ಅರವಿಂದ್ ಕೇಜ್ರಿವಾಲ್
ದೆಹಲಿ ಮಾಜಿ ಮುಖ್ಯಮಂತ್ರಿ

### ಅಖಾಡಕ್ಕೆ ಭರ್ಜರಿ ಸಿದ್ಧತೆ

ಎಎಪಿಯ ಭದ್ರಕೋಟೆ ಅಂತಲೇ ಖ್ಯಾತಿ ಗಳಿಸಿರುವ ದೆಹಲಿಯಲ್ಲಿ ಈ ಬಾರಿ ಆಮ್ ಆದ್ಮಿ ಪಾರ್ಟಿಗೆ ಪೂರಕ ಹಾಗೂ ಒಳ್ಳೆಯ ವಾತಾವರಣ ಇಲ್ಲ. ಎಎಪಿಯ ನಾಯಕರು ಜೈಲು ಸೇರಿದ್ದು, ಮಳೆ ಅನಾಹುತದಿಂದ ದೆಹಲಿಯಲ್ಲಿ ಸಮಸ್ಯೆ ಆಗಿದ್ದು ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆ ಸೇರಿದಂತೆ ಹಲವು ಆಡಳಿತ ವಿರೋಧಿ ಅಲೆ ಎಎಪಿಗೆ ಇದೆ. ಇದೆಲ್ಲವೂ ಈ ಬಾರಿ ಬಿಜೆಪಿಗೆ ಪ್ಲಸ್ ಪಾಯಿಂಟ್ಸ್ ಆಗಲಿದ್ದು, ಬಿಜೆಪಿ ಪಕ್ಷವು ಎಎಪಿ ಮಾಡಿದೆ ಎನ್ನಲಾಗಿರುವ ಭ್ರಷ್ಟಾಚಾರ ವಿಷಯಗಳನ್ನು ಮುಂದಿಟ್ಟುಕೊಂಡು ಚುನಾವಣೆ ಅಖಾಡಕ್ಕೆ ಭರ್ಜರಿ ಸಿದ್ಧತೆ ಮಾಡಿಕೊಂಡಿದೆ.

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹7,860/Gram24ct ₹7,205/Gram22ct | ಬೆಳ್ಳಿ: ₹96.50/Gram



**ಸಿದ್ಧಸೂಕ್ತಿ**

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ಎಸ್. ಎಂ. ಕೃಷ್ಣ ಇನ್ನಿಲ್ಲ.

ಕರ್ನಾಟಕದ ಮಾಜಿ ಮುಖ್ಯಮಂತ್ರಿ, ಭಾರತದ ಮಾಜಿ ವಿದೇಶಾಂಗ ಸಚಿವ ಶ್ರೀ ಎಸ್. ಎಂ. ಕೃಷ್ಣ ಇಂದು ವಿಧಿವಶರಾದರು. ನಾನು ಕಂಡಂತೆ ಕೃಷ್ಣ ಅವರು ಸಜ್ಜನಿಕೆಯ ಬುದ್ಧಿವಂತ ರಾಜಕಾರಣಿ. ತಮ್ಮ ಅವಧಿಯಲ್ಲಿ ಬರಗಾಲವನ್ನು ಸಮರ್ಥವಾಗಿ ಎದುರಿಸಿದರು. ವರನಟ ಡಾ. ರಾಜಕುಮಾರ್ ಅವರನ್ನು ವೀರಪ್ಪನ್ ಅವರಿಂದ ಸುಖಾಂತ್ಯವಾಗಿ ಬಿಡಿಸಿಕೊಂಡರು. ವಿಧಾನ ಸೌಧದ ಮಾದರಿಯಲ್ಲಿ ವಿಕಾಸ ಸೌಧವನ್ನು ನಿರ್ಮಿಸಿದರು. ಬೆಂಗಳೂರು ನಗರವನ್ನು ಸಿಲಿಕಾನ್ ಸಿಟಿಯಾಗಿಸಿದರು. ಈ ನಗರವನ್ನು ವಿಶ್ವದರ್ಜೆಗೆ ಏರಿಸುವಲ್ಲಿ ಎಸ್. ಎಂ. ಕೃಷ್ಣರ ಪಾತ್ರ ಅತ್ಯಂತ ಹಿರಿದಾದುದು. 2001 ರ ಎಪ್ರಿಲ್ 2 ರಂದು ಬೆಂಗಳೂರಿನ ಅಂಬೇಡ್ಕರ್ ಭವನದಲ್ಲಿ ಶ್ರೀ ಸಿದ್ಧಾರೂಢಮಿಷನ್ ಏರ್ಪಡಿಸಿದ್ದ ಶ್ರೀ ಸಿದ್ಧಾರೂಢರ ಜಯಂತಿಯನ್ನು ಮುಖ್ಯಮಂತ್ರಿಯಾಗಿ ಉದ್ಘಾಟಿಸಿದರು. ಬೆಂಗಳೂರು ಹಾಗೂ ಹುಬ್ಬಳ್ಳಿ ಮಾರ್ಗದಲ್ಲಿ ಸಂಚರಿಸುವ ಇಂಟರ್‌ಸಿಟಿ ರೇಲ್ವೆಗೆ ಸಿದ್ಧಾರೂಢರ ಹೆಸರಿಡುವಂತೆ ಕೇಂದ್ರದ ರೈಲ್ವೆ ಮಂತ್ರಿ ನಿತೀಶಕುಮಾರ್ ಅವರಿಗೆ ಶಿಫಾರಸು ಮಾಡಿದರು. ಎಂಟು ದಶಕ ಸುದೀರ್ಘ ಬಾಳಿ ಇನ್ನಿಲ್ಲವಾಗಿದ್ದಾರೆ. ಅವರ ಹೆಸರು ರಾಜ್ಯ, ರಾಷ್ಟ್ರದಲ್ಲಿ ಶಾಶ್ವತ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂಬ ಪ್ರಾರ್ಥನೆಯೊಂದಿಗೆ ಭಾವಪೂರ್ಣ ಶ್ರದ್ಧಾಂಜಲಿಗಳು.

## 3 ದಿನ ಶೋಕಾಚರಣೆ ಘೋಷಣೆ.!

• **ಉದಯವಾಹಿನಿ, ಬೆಂಗಳೂರು**

ವಯೋಸಹಜ ಕಾಯಿಲೆಗಳಿಂದ ಬಳಲುತ್ತಿದ್ದ ಕರ್ನಾಟಕದ ಮಾಜಿ ಮುಖ್ಯಮಂತ್ರಿ ಎಎಂ ಕೃಷ್ಣ, ಬೆಂಗಳೂರಿನ ಸದಾಶಿವನಗರದ ನಿವಾಸದಲ್ಲಿ ತಡರಾತ್ರಿ ನಿಧನರಾಗಿದ್ದು, ಸಕಲ ಸರ್ಕಾರಿ ಗೌರವಗಳೊಂದಿಗೆ ಡಿಸೆಂಬರ್ 11 ರಂದು ಅಂತ್ಯಕ್ರಿಯೆ ನಡೆಸಲಾಗುವುದು ಎಂದು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳು ಹಾಗೂ ಮಾಜಿ ಕೇಂದ್ರ ಸಚಿವರಾಗಿದ್ದ ಶ್ರೀ ಎಸ್ ಎಂ ಕೃಷ್ಣ ರವರು ದಿನಾಂಕ: 10.12.2024ರ ಮಂಗಳವಾರದಂದು ಪೂರ್ವಾಹ್ನ 02:30ಕ್ಕೆ ನಿಧನರಾದ ವಿಷಯವನ್ನು ಕರ್ನಾಟಕ ರಾಜ್ಯ ಸರ್ಕಾರವು ತೀವ್ರ ಸಂತಾಪದಿಂದ ಈ ಮೂಲಕ ಪ್ರಕಟಿಸಿದೆ. ದಿವಂಗತರ ಅಂತ್ಯಕ್ರಿಯೆಯನ್ನು ದಿನಾಂಕ: 11.12.2024ರಂದು ಬುಧವಾರ ಹುಟ್ಟೂರಾದ ಮಂಡ್ಯ ಜಿಲ್ಲೆಯಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲಾಗುವುದು ಮತ್ತು ದಿನಾಂಕ: 10.12.2024 00 12.12.2024 ? ಮೂರು ದಿನಗಳು ಶೋಕವನ್ನು ಆಚರಿಸಲಾಗುವುದು. ಈ ಅವಧಿಯಲ್ಲಿ ಯಾವುದೇ ಸಾರ್ವಜನಿಕ ಮನೋರಂಜನಾ ಕಾರ್ಯಕ್ರಮಗಳು ಇರುವುದಿಲ್ಲ. ರಾಜ್ಯ ಸರ್ಕಾರದ ಎಲ್ಲಾ ಕಟ್ಟಡಗಳು ಮೇಲೆ ರಾಷ್ಟ್ರ ಧ್ವಜವನ್ನು ಅರ್ಧ ಮಟ್ಟದಲ್ಲಿ ಹಾರಿಸಲಾಗುವುದು.

## ಸಿಎಂ ಎಸ್. ಎಂ ಕೃಷ್ಣ ಅಂತಿಮ ದರ್ಶನ ಪಡೆದ ರಾಜ್ಯಪಾಲ ಥಾವರ್ ಚಂದ್ ಗೆಹೋಟ್

• **ಉದಯವಾಹಿನಿ, ಬೆಂಗಳೂರು**

ವಯೋಸಹಜ ಕಾಯಿಲೆಗಳಿಂದ ಬಳಲುತ್ತಿದ್ದ ಕರ್ನಾಟಕದ ಮಾಜಿ ಮುಖ್ಯಮಂತ್ರಿ ಎಸ್‌ಎಂ ಕೃಷ್ಣ, ಬೆಂಗಳೂರಿನ ಸದಾಶಿವನಗರದ ನಿವಾಸದಲ್ಲಿ ತಡರಾತ್ರಿ ನಿಧನರಾಗಿದ್ದು ಅವರ ನಿವಾಸಕ್ಕೆ ತೆರಳಿ ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹೋಟ್ ಅಂತಿಮ ನಮನ ಸಲ್ಲಿಸಿ ಸಂತಾಪ ಸೂಚಿಸಿದರು. ಬೆಂಗಳೂರಿನ ಸದಾಶಿವನಗರದಲ್ಲಿರುವ ನಿವಾಸಕ್ಕೆ ಆಗಮಿಸಿದ ರಾಜ್ಯಪಾಲ ಥಾವರ್ ಚಂದ್‌ಗೆಹೋಟ್ ವರು ಎಸ್.ಕೃಷ್ಣ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದಿದ್ದಾರೆ. ತಡರಾತ್ರಿ ಸದಾಶಿವನಗರದಲ್ಲಿರುವ ತಮ್ಮ ಮನೆಯಲ್ಲಿ ಹೃದಯಾಘಾತದಿಂದ ಎಸ್.ಎಂ.ಕೃಷ್ಣ ನಿಧನರಾಗಿದ್ದಾರೆ. ತಡರಾತ್ರಿ 2.45ರ ಸುಮಾರಿಗೆ ಹೃದಯಾಘಾತದಿಂದ ನಿಧನರಾಗಿದ್ದಾರೆ. 3 ಗಂಟೆಗೆ ವೈದ್ಯರು ಆಗಮಿಸಿ ತಪಾಸಣೆ ನಡೆಸಿದ್ದಾರೆ. ಬಳಿಕ ಸಾವನ್ನಪ್ಪಿರುವುಗಿ ಘೋಷಿಸಿದ್ದಾರೆ. ಮಾಜಿ ಸಿಎಂ ಎಸ್. ಕೃಷ್ಣ ಅವರು ನಿಧನರಾಗಿದ್ದು, ಸದಾಶಿವನಗರದಲ್ಲಿರುವ ನಿವಾಸದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದ್ದು, ಮದ್ದೂರಿನ ಸೋಮನಹಳ್ಳಿಯಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ. ವಿದೇಶದಲ್ಲಿರುವ ಸಂಬಂಧಿಕರು ಆಗಮಿಸುವುದು ತಡವಾಗುವ ಹಿನ್ನೆಲೆಯಲ್ಲಿ ಎಸ್.ಕೃಷ್ಣ ಅವರ ಅಂತ್ಯಕ್ರಿಯೆಯನ್ನು ಮದ್ದೂರಿನ ಸೋಮನಹಳ್ಳಿಯಲ್ಲಿ ಅಂತ್ಯಕ್ರಿಯೆ ನಡೆಸಲು ನಿರ್ಧರಿಸಲಾಗಿದೆ.

## ಶಿವರಾಜ್ ಕುಮಾರ್ ಅಮೆರಿಕಾ ಪ್ರವಾಸ ಡೇಟ್ ಫಿಕ್ಸ್: ಸರ್ಜರಿಗೆ ದಿನಾಂಕವೂ ನಿಗದಿ

• **ಉದಯವಾಹಿನಿ, ಬೆಂಗಳೂರು**

ನಟ ಶಿವರಾಜ್ ಕುಮಾರ್ ಚಿಕಿತ್ಸೆಗಾಗಿ ಅಮೆರಿಕಾಗೆ ತೆರಳುತ್ತಿರುವ ಬಗ್ಗೆ ಮಾಹಿತಿ ಲಭ್ಯವಾಗಿತ್ತು. ಇದೀಗ ಅವರು ಅಮೆರಿಕಾಗೆ ತೆರಳುವ ದಿನಾಂಕ ನಿಗದಿಯಾಗಿದ್ದು, ಶಸ್ತ್ರಚಿಕಿತ್ಸೆಗೆ ಡೇಟ್ ಕೂಡ ಫಿಕ್ಸ್ ಆಗಿದೆ. ಶಿವರಾಜ್ ಕುಮಾರ್ ಆರೋಗ್ಯ ಸಮಸ್ಯೆ ಹಿನ್ನೆಲೆಯಲ್ಲಿ ಚಿಕಿತ್ಸೆಗಾಗಿ ಅಮೆರಿಕಾಗೆ ತೆರಳುತ್ತಿದ್ದು. ಸರ್ಜರಿಗೆ ಒಳಗಾಗಲಿದ್ದಾರೆ. ಡಿಸೆಂಬರ್ 18ರಂದು ಶಿವರಾಜ್ ಕುಮಾರ್ ಅಮೆರಿಕಾಗೆ ತೆರಳುತ್ತಿದ್ದಾರೆ. ಅಮೆರಿಕಾದ ಫ್ಲೋರಿಡಾದಲ್ಲಿರುವ ಮಿಯಾಮಿಯಲ್ಲಿ ಡಿ. 24ರಂದು ಶಿವರಾಜ್ ಕುಮಾರ್ ಅವರಿಗೆ ಸರ್ಜರಿ ನಡೆಯಲಿದೆ ಎಂದು ತಿಳಿದುಬಂದಿದೆ. ಇನ್ನು ಈ ಬಗ್ಗೆ ಸ್ವತಃ ಶಿವರಾಜ್ ಕುಮಾರ್ ಚಿಕಿತ್ಸೆಗಾಗಿ ಅಮೆರಿಕಾಗೆ ಹೋಗುತ್ತಿರುವುದಾಗಿ ತಿಳಿಸಿದ್ದರು. ಅಲ್ಲದೇ ಸರ್ಜರಿ ಬಳಿಕ ಕೆಲ ತಿಂಗಳು ವಿಶ್ರಾಂತಿ ಪಡೆಯಲಿದ್ದಾರಂತೆ.

## ಭಾರತೀಯ ಕೋಸ್ಟ್ ಗಾರ್ಡ್ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನ

• **ಉದಯವಾಹಿನಿ, ಬೆಂಗಳೂರು**

ಭಾರತೀಯ ಕೋಸ್ಟ್ ಗಾರ್ಡ್ ಹುದ್ದೆಗಳ ನೇಮಕಾತಿಗೆ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಡಿ.5ರಿಂದ ಡಿಸೆಂಬರ್ 24ರವರೆಗೆ ಅರ್ಜಿ ಸಲ್ಲಿಕೆಗೆ ಅವಕಾಶವಿದೆ. 2026ರ ಬ್ಯಾಚ್ಯಾಗಿ ಈಗಲೇ ಉದ್ಯೋಗಗಳನ್ನು ತುಂಬಲಾಗುತ್ತಿದೆ. ಈ ನೇಮಕಾತಿ ಅಭಿಯಾನದಡಿ ಪರೀಕ್ಷೆಯ ಮೂಲಕ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತದೆ. ಜನರಲ್ ಡ್ಯೂಟಿ (ಜಿಡಿ) ಮತ್ತು ತಾಂತ್ರಿಕ (ಎಂಜಿನಿಯರಿಂಗ್ ಮತ್ತು ಎಲೆಕ್ಟ್ರಿಕಲ್/ಎಲೆಕ್ಟ್ರಾನಿಕ್ಸ್) ಸೇರಿದಂತೆ ವಿವಿಧ ಶಾಖೆಗಳಲ್ಲಿ ಆಯ್ಕೆಯಾದವರನ್ನು ನೇಮಕಾತಿ ಮಾಡಲಾಗುತ್ತದೆ. **ಹುದ್ದೆಗಳು:** ಜನರಲ್ ಡ್ಯುಟಿ (ಜಿಡಿ)– 110 ಉದ್ಯೋಗಗಳು, ತಾಂತ್ರಿಕ (ಇಂಜಿನಿಯರ್)– 30 ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ. 21 ರಿಂದ 25 ವರ್ಷದೊಳಗಿನ ಜನರಲ್ ಡ್ಯುಟಿ (ಜಿಡಿ) ಹುದ್ದೆಗೆ ದ್ವಿತೀಯ ಪಿಯುಸಿ (ಗಣಿತ ಮತ್ತು ಭೌತಶಾಸ್ತ್ರ ಅಧ್ಯಯನ ಮಾಡಿರಬೇಕು). ತಾಂತ್ರಿಕ (ಇಂಜಿನಿಯರ್– ತಾಂತ್ರಿಕ ಶಾಖೆ (ಎಂಜಿನಿಯರಿಂಗ್/ಎಲೆಕ್ಟ್ರಿಕಲ್) ವಿದ್ಯಾರ್ಹತೆ ಹೊಂದಿರಬೇಕು. ಅರ್ಜಿ ಶುಲ್ಕ : ಜನರಲ್, ಒಬಿಸಿ, ಇಡಬ್ಲ್ಯುಎಗ್ಗೆ 300 ರೂ. ಹಾಗೂ ಎಸ್ಸಿ, ಎಸ್ಟಿ ವಿಶೇಷ ಚೇತನರಿಗೆ ವಿನಾಯ್ತಿ ನೀಡಲಾಗಿದೆ. ಆನ್ಲೈನ್ ಮೂಲಕ ಹಣ ಪಾವತಿ ಮಾಡತಕ್ಕದ್ದು.

## ಎಸ್.ಎಂ.ಕೃಷ್ಣ ನಿಧನಕ್ಕೆ ಮಾಜಿ ಕ್ರಿಕೆಟಿಗ ಕುಂಬ್ಳೆ ಸಂತಾಪ

• **ಉದಯವಾಹಿನಿ, ಬೆಂಗಳೂರು**

ಎಸ್.ಎಂ.ಕೃಷ್ಣ ಅವರ ನಿಧನ ರಾಜ್ಯಕ್ಕೆ ದೊಡ್ಡ ನಷ್ಟವಾಗಿದೆ ಎಂದು ಮಾಜಿ ಕ್ರಿಕೆಟಿಗ ಅನಿಲ್ ಕುಂಬ್ಳೆ ಸಂತಾಪ ಸೂಚಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಕುಂಬ್ಳೆ, ಮುಖ್ಯಮಂತ್ರಿಯಾಗಿ ಎಸ್ ಎಂ.ಕಷ್ಣ ಅವರು ರಾಜ್ಯಕ್ಕೆ ನೀಡಿದ ಕೊಡುಗೆ ಅವರ ಅಧಿಕಾರಾವಧಿಯನ್ನು ಮೀರಿದೆ. ಅವರ ನಿಧನ ಕರ್ನಾಟಕಕ್ಕೆ ದೊಡ್ಡ ನಷ್ಟ ಬೆಂಗಳೂರು ಸಿಲಿಕಾನ್ ವ್ಯಾಲಿ ಆಗಲು, ಭೂಪಟದಲ್ಲಿ ಮೂಡಿಬರಲು ಅವರ ಕೊಡುಗೆ ಸದಾ ನೆನಪಿನಲ್ಲಿ ಉಳಿಯುತ್ತದೆ ಎಂದಿದ್ದಾರೆ. ಕೃಷ್ಣ ಅವರ ನಿಧನದಿಂದ ನಾನು ಆಘಾತಕ್ಕೊಳಗಾಗಿದ್ದೇನೆ. ರಾಜ್ಯ ಮತ್ತು ಕೇಂದ್ರ ಸಚಿವ ಮತ್ತು ಮುಖ್ಯಮಂತ್ರಿಯಾಗಿ ಅವರ ಸೇವೆ ಅಪ್ರತಿಮವಾಗಿದೆ. ಕರ್ನಾಟಕವು ಅವರ ಬೆಳವಣಿಗೆಗೆ ನೀಡಿದ ಕೊಡುಗೆಗೆ ಕರ್ನಾಟಕ ಯಾವಾಗಲೂ ಋಣಿಯಾಗಿರಲಿದೆ ಎಂದಿದ್ದಾರೆ.

# ಸಿಎಂ ಎಸ್.ಎಂ ಕೃಷ್ಣ ನನಗೆ ತಂದೆ ಸಮಾನರು: ಡಿಕೆಶಿ ಭಾವುಕ!

■ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳ ಮುಂದೆ ಶಿವಕುಮಾರ್ ಅವರು ಎಸ್.ಎಂ ಕೃಷ್ಣ ಅವರ ಕೊಡುಗೆ ನೆನೆದು ಭಾವುಕ

• **ಉದಯವಾಹಿನಿ, ಬೆಂಗಳೂರು**


ಉದಯವಾಹಿನಿ ಚಿತ್ರ

ಎಸ್.ಎಂ ಕೃಷ್ಣ ಅವರು ನನಗೆ ತಂದೆ ಸಮಾನರು. ನನ್ನ ಬದುಕಿನಲ್ಲಿ ಆಗಿರುವ ಬದಲಾವಣೆ ಅವರ ಮಾರ್ಗದರ್ಶನಕ್ಕೆ ಸಾಕ್ಷಿ. ನವ ಕರ್ನಾಟಕ ನಿರ್ಮಾಣಕ್ಕೆ ಅಡಿಪಾಯ ಹಾಕಿದವರು ಎಸ್.ಎಂ ಕೃಷ್ಣ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ಸದಾಶಿವನಗರ ನಿವಾಸ ಹಾಗೂ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳ ಮುಂದೆ ಶಿವಕುಮಾರ್ ಅವರು ಎಸ್.ಎಂ ಕೃಷ್ಣ ಅವರ ಕೊಡುಗೆ ನೆನೆದು ಭಾವುಕರಾದರು.

ಕೆಂಗಲ್ ಹನುಮಂತಯ್ಯ ಅವರು ವಿಧಾನಸೌಧ ಕಟ್ಟಿದರು. ಎಸ್.ಎಂ ಕೃಷ್ಣ ಅವರು ವಿಕಾಸ ಸೌಧ ಕಟ್ಟಿದರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ, ಮೆಟ್ರೋ ರೈಲು ನೀಡಿದರು. ಅವರ ಕಡೆಯ ಬಜೆಟ್ ಗಾತ್ರ 26 ಸಾವಿರ ಕೋಟಿ. ಆದರೆ ನಮ್ಮ ರಾಜ್ಯದ ಬಜೆಟ್ ಗಾತ್ರ 3.83 ಲಕ್ಷ ಕೋಟಿ. ಆಮೂಲಕ ರಾಜ್ಯಕ್ಕೆ ಆರ್ಥಿಕ ಶಕ್ತಿ ತುಂಬಿದರು. ರಾಜ್ಯ ವಿಕಾಸವಾಗಲಿ ಎಂದು ವಿಕಾಸಸೌಧ, ಎಲ್ಲರಿಗೂ ಉದ್ಯೋಗ ಸಿಗಲಿ ಎಂದು ಉದ್ಯೋಗ ಸೌಧ ಕಟ್ಟಿದರು. ರಾಜ್ಯದಲ್ಲಿ ಪಾನೀಯ ನಿಗಮ ಸ್ಥಾಪಿಸಿ ರಾಜ್ಯದ ಬೊಕ್ಕಸಕ್ಕೆ ಹಣ ಬರುವಂತೆ ಮಾಡಿದರು ಎಂದರು. ಕಾವೇರಿ ನೀರಿಗಾಗಿ ಅಧಿಕಾರ ತ್ಯಜಿಸಲು ಮುಂದಾಗಿದ್ದರು. ರಾಜಕುಮಾರ್ ಅವರು ಅಪಹರಣವಾದಾಗ ಅವರನ್ನು ಕರೆತರಲು ಪರಿಶ್ರಮ ನಮಗೆ ಮಾತ್ರ ಗೊತ್ತು.

**ಸಂತಾಪ ಸೂಚಕ ಸಭೆ**

ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ, ಸ್ತ್ರೀಶಕ್ತಿ ಕಾರ್ಯಕ್ರಮ, ಯಶಸ್ವಿನಿ ಕಾರ್ಯಕ್ರಮ, ರೈತರ ಜಮೀನಿಗಾಗಿ ಭೂಮಿ ಆಪ್, ಬೆಂಗಳೂರನ್ನು ಐಟಿ ರಾಜಧಾನಿಯಾಗಿ ಮಾಡಿ ಬೆಂಗಳೂರನ್ನು ಜಾಗತಿಕ ಮಟ್ಟದಲ್ಲಿ ಮೀನುಗುವಂತೆ ಮಾಡಿದರು. ದಕ್ಷ ಆಡಳಿತಕ್ಕೆ ಅವರು ಮಾದರಿಯಾಗಿದ್ದರು. ಬೆಂಗಳೂರು ಅಭಿವೃದ್ಧಿ, ಇಲ್ಲಿನ ಉದ್ಯೋಗ ಸೃಷ್ಟಿ ಸೇರಿದಂತೆ ಅವರ ಸಾಧನೆಗೆ ನಿಮ್ಮ ಕಣ್ಣುಗಳೇ ಸಾಕ್ಷಿ ಎಂದು ನೆನಪಿಸಿಕೊಂಡರು.

ಅವರು ನನ್ನ ಸಂಬಂಧಿ, ನನ್ನ ರಾಜಕೀಯ ಮಾರ್ಗದರ್ಶಕರು ಎಂಬುದು ಬೇರೆ ವಿಚಾರ. ಅವರ ಕೊಡುಗೆ ಮರೆಯಲು ಸಾಧ್ಯವಿಲ್ಲ. ಅವರು ನಮಗೆಲ್ಲ ದೊಡ್ಡ ಪರಂಪರೆ ಬಿಟ್ಟುಹೋಗಿದ್ದು, ನಾವು ಅದನ್ನು ಮುಂದುವರಿಸಿಕೊಂಡು ಹೋಗಬೇಕು. ಅವರಿಂದ ಸಾಕಷ್ಟು ವಿಚಾರ ಕಲಿತ ಹೆಮ್ಮೆ ನಮಗಿದೆ. ಅವರ ಮಾರ್ಗದರ್ಶನದಲ್ಲಿ ನಾವು ನಡೆಯುತ್ತೇವೆ.

ನನ್ನ ಅವರ ನಡುವಣ ಸಂಬಂಧದ ಬಗ್ಗೆ ಬೇರೆ ದಿನ ಮಾತನಾಡುತ್ತೇನೆ. ಎಸ್.ಎಂ ಕೃಷ್ಣ ಅವರು ದೂರದೃಷ್ಟಿಯುಳ್ಳ ಶ್ರೇಷ್ಠ ವ್ಯಕ್ತಿ.

ರಾಜ್ಯಕ್ಕೆ ಅವರ ಕೊಡುಗೆ, ಅವರ ಜತೆಗಿನ ಒಡನಾಟದ ಬಗ್ಗೆ ಹೇಳಲು ಗಂಟೆಗಟ್ಟಲೆ ಸಮಯಬೇಕು ಎಂದು ತಿಳಿಸಿದರು.

ಹುಟ್ಟೂರಿನಲ್ಲಿ ಬುಧವಾರ ಅಂತಿಮ ಸಂಸ್ಕಾರ, 3 ದಿನ ಶೋಕಾಚಾರಣೆ ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರ ಪಾರ್ಥಿವ ಶರೀರವನ್ನು ಸಕಲ ಸರ್ಕಾರಿ ಗೌರವಗಳೊಂದಿಗೆ ಅವರ ಹುಟ್ಟೂರು ಮದ್ದೂರಿನ ಸೋಮನಹಳ್ಳಿಯಲ್ಲಿ ಬುಧವಾರ ಸಂಜೆ 4 ಗಂಟೆಗೆ ಅಂತಿಮ ಸಂಸ್ಕಾರ ನೆರವೇರಿಸಲಾಗುವುದು. ಬುಧವಾರ ಸರ್ಕಾರಿ ರಜೆ ಘೋಷಣೆ ಮಾಡಲಾಗಿದೆ. ರಾಜ್ಯಾದ್ಯಂತ ಮೂರು ದಿನ ಶೋಕಾಚಾರಣೆ ಮಾಡಲಾಗುವುದು.

> **ಸಂತಾಪ ಸೂಚಕ ಸಭೆ ಏರ್ಪಡಿಸಲಾಗಿದೆ. ಪಕ್ಷದ ಎಲ್ಲಾ ಕಾರ್ಯಕ್ರಮಗಳನ್ನು ರದ್ದು ಮಾಡಲಾಗಿದೆ ಹಾಗೂ ಶಾಸಕಾಂಗ ಸಭೆಯನ್ನು ಮುಂದೂಡಲಾಗಿದೆ. ನಾನು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಚೆಲುವರಾಯ ಸ್ವಾಮಿ ಅವರು ಅಂತಿಮ ದರ್ಶನ ಹಾಗೂ ಸಂಸ್ಕಾರಕ್ಕೆ ವ್ಯವಸ್ಥೆ ಮಾಡಲು ಮದ್ದೂರಿಗೆ ತೆರಳುತ್ತಿದ್ದೇವೆ ಎಂದು ಹೇಳಿದರು.**

> **ಬುಧವಾರ ಬೆಳಗ್ಗೆ 8 ಗಂಟೆವರೆಗೂ ಎಸ್.ಎಂ. ಕೃಷ್ಣ ಅವರ ಸದಾಶಿವನಗರ ನಿವಾಸದಲ್ಲಿ ಅವರ ಪಾರ್ಥಿವ ಶರೀರವನ್ನು ಸಾರ್ವಜನಿಕರ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ನಂತರ ಅವರ ಪಾರ್ಥಿವ ಶರೀರವನ್ನು ಮದ್ದೂರಿನ ಸೋಮನಹಳ್ಳಿಗೆ ಕೊಂಡೊಯ್ಯಲಾಗುವುದು. ಅಲ್ಲಿ ಬೆಳಗ್ಗೆ 10.30ರಿಂದ ಮಧ್ಯಾಹ್ನ 3.00ಗಂಟೆವರೆಗೂ ಮಂಡ್ಯ, ಮೈಸೂರು ಭಾಗದ ಜನರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗುವುದು.**

## ಸರ್ಕಾರಿ ಶಾಲೆಗಳಲ್ಲಿ ಮಧ್ಯಾಹ್ನ ಬಿಸಿಯೂಟ ಆರಂಭಿಸಿದ್ದು, ಎಸ್‌ಎಂ ಕೃಷ್ಣ

• **ಉದಯವಾಹಿನಿ, ಬೆಂಗಳೂರು**

ನಾಡು ಕಂಡ ಅತ್ಯಂತ ಮುತ್ಸದ್ದಿ ರಾಜಕಾರಣಿ, ಮಾಜಿ ಮುಖ್ಯಮಂತ್ರಿ ಹಾಗೂ ಮಾಜಿ ವಿದೇಶಾಂಗ ಸಚಿವರಾದಂತಹ ಎಸ್‌ಎಂ ಕೃಷ್ಣ ಅವರು ಹೃದಯಾಘಾತದಿಂದ ನಿಧನರಾಗಿದ್ದಾರೆ. 92 ವಯಸ್ಸಿನ ಎಸ್‌ಎಂ ಕೃಷ್ಣ ಅವರು ತಮ್ಮ ರಾಜಕೀಯ ಜೀವನದಲ್ಲಿ ರಾಜ್ಯಕ್ಕೆ ಅಪಾರವಾದ ಕೊಡುಗೆ ನೀಡಿದ್ದಾರೆ. ಅದರಲ್ಲೂ ಬಹಳ ಪ್ರಮುಖವಾದಂತಹ ಯೋಜನೆಯಾದ ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಇವರು ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ಜಾರಿಗೊಳಿಸಲಾಯಿತು. ರಾಜ್ಯದ ಹಿಂದುಳಿದ ಪ್ರದೇಶವಾದ ರಾಯಚೂರಿನಲ್ಲಿ 2001ರಲ್ಲಿ ಈ ಒಂದು ಯೋಜನೆಗೆ ಚಾಲನೆ ನೀಡಲಾಯಿತು.


ಉದಯವಾಹಿನಿ ಚಿತ್ರ

ಹೌದು ರಾಜ್ಯದಲ್ಲಿ ಸರ್ಕಾರಿ ಶಾಲೆಯ ಮಕ್ಕಳಿಗೆ ಮಧ್ಯಾಹ್ನ ಬಿಸಿಯೂಟ ಯೋಜನೆಯನ್ನು ಜಾರಿಗೆ ತಂದರು. ಈ ಮೂಲಕ ಮೊದಲ ಬಾರಿಗೆ ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಅರಕೇರಾದಲ್ಲಿ ಬಿಸಿಯೂಟ ಯೋಜನೆಗೆ ಚಾಲನೆ ನೀಡಿದರು.ಸಿಎಂ ಎಸ್.ಎಂ ಕೃಷ್ಣ ಅವರಿಗೆ ಅಂದಿನ ಶಿಕ್ಷಣ ಸಚಿವ ಹೆಚ್.ವಿಶ್ವನಾಥ್, ರಾಯಚೂರು ಸಂಸದ ವೆಂಕಟೇಶ ನಾಯಕ ಅವರು ಸಾಥ್ ನೀಡಿದ್ದರು.

> **ಸರ್ಕಾರಿ ಶಾಲೆಗಳ 1 ರಿಂದ 5ನೇ ತರಗತಿ ವಿದ್ಯಾರ್ಥಿಗಳಿಗೆ ಬಿಸಿಯೂಟ ನೀಡಲು ಯೋಜನೆ ಹಾಕಿಕೊಂಡಿದ್ದರು. ಬಳಿಕ 2001ರ ನ.09 ರಂದು ಅರಕೇರಾದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಉದ್ಘಾಟನೆ ಮಾಡಿದರು.**

2001ರಲ್ಲಿ ಆಗಿನ ಸಿಎಂ ಆಗಿದ್ದ ಎಸ್‌ಎಂ ಕೃಷ್ಣ ಅವರು ಮೊದಲ ಹಂತದಲ್ಲಿ ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಅತ್ಯಂತ ಹಿಂದುಳಿದ ಏಳು ಜಿಲ್ಲೆಗಳಲ್ಲಿ ಈ ಯೋಜನೆಯನ್ನು ಆರಂಭಿಸಿದರು.

## ವಿಧಾನಸಭೆ ಕಲಾಪ ನಾಳೆ ಮುಂದೂಡಿಕೆ

• **ಉದಯವಾಹಿನಿ, ಬೆಂಗಳೂರು**

ವಿಧಾನಸಭಾ ಕಲಾಪ ಗುರುವಾರ ಬೆಳಗ್ಗೆ 11 ಗಂಟೆಗೆ ಮುಂದೂಡಿಕೆಯಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ. ಸ್ಪೀಕರ್ ಯುಟಿ ಖಾದರ್ ವಿಧಾನಸಭಾ ಕಲಾಪವನ್ನು ಗುರುವಾರ ಬೆಳಗ್ಗೆ 11 ಗಂಟೆಗೆ ಮುಂದೂಡಿದ್ದಾರೆ.

ಬೆಳಗಾವಿಯ ಸುವರ್ಣ ಸೌಧದಲ್ಲಿ ನಿನ್ನೆಯಿಂದ ವಿಧಾನಮಂಡಲ ಚಳಿಗಾಲದ ಅಧಿವೇಶನ ಆರಂಭವಾಗಿದೆ. ಕರ್ನಾಟಕ ಎಸ್ ಎಂ ಕೃಷ್ಣ ನಿಧನದ ಹಿನ್ನೆಲೆ ಕಲಾಪ ಇರುವುದಿಲ್ಲ. ಆದ್ದರಿಂದ ಕಲಾಪವನ್ನು ಗುರುವಾರ ಬೆಳಗ್ಗೆ 11 ಗಂಟೆಗೆ ಮುಂದೂಡಲಾಗಿದೆ.

ಮಾಜಿ ಸಿಎಂ ಎಸ್ ಎಂ ಕೃಷ್ಣ ನಿಧನದ ಹಿನ್ನೆಲೆ ನಾಳಿನ ವಿಧಾನಸಭೆ ಕಲಾಪವನ್ನು ಗುರುವಾರಕ್ಕೆ ಮುಂದೂಡಿಕೆ ಮಾಡಲಾಗಿದೆ. ಮಾಜಿ ಸಿಎಂ ಖ.ಒ ಕೃಷ್ಣ ನಿಧನರಾದ ಹಿನ್ನೆಲೆ ಇಂದಿನಿಂದ ಮೂರು ದಿನ ರಾಜ್ಯಾದ್ಯಂತ ಶೋಕಾಚರಣೆ ಘೋಷಿಸಲಾಗಿದೆ.


ಉದಯವಾಹಿನಿ ಚಿತ್ರ

ಹಾಗೂ ಸಕಲ ಸರ್ಕಾರಿ ಗೌರವಗಳೊಂದಿಗೆ ಎಸ್ ಎಂ ಕೃಷ್ಣ ಅಂತ್ಯಕ್ರಿಯೆ ನಡೆಸಲು ಸರ್ಕಾರ ಅಧಿಸೂಚನೆ ಹೊರಡಿಸಿದೆ. ಈ ಅವಧಿಯಲ್ಲಿ ಯಾವುದೇ ಸಾರ್ವಜನಿಕ ಮನೋರಂಜನಾ ಕಾರ್ಯಕ್ರಮಗಳು ಇರುವುದಿಲ್ಲ. ರಾಜ್ಯ ಸರ್ಕಾರದ ಎಲ್ಲಾ ಕಟ್ಟಡಗಳು ಮೇಲೆ ರಾಷ್ಟ್ರ ಧ್ವಜವನ್ನು ಅರ್ಧ ಮಟ್ಟದಲ್ಲಿ ಹಾರಿಸಲಾಗುವುದು ಎಂದು ಸರ್ಕಾರ ಅಧಿಸೂಚನೆ ಹೊರಡಿಸಿದೆ.

### ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ

## ಡಿ.31 ರಿಂದ ಅನಿರ್ದಿಷ್ಟಾವಧಿ ಮುಷ್ಕರ!


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ವೇತನ ಮತ್ತು ಭತ್ಯೆ ಹೆಚ್ಚಳ ಸೇರಿದಂತೆ ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಡಿಸೆಂಬರ್ 31 ರಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ನಿರ್ಧರಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮುಷ್ಕರದ ನೋಟಿಸ್ ಅನ್ನು ಸಲ್ಲಿಸಲಾಗಿದೆ. ನೌಕರರ ನ್ಯಾಯಯುತ ಬೇಡಿಕೆ ಈಡೇರಿಸುವಂತೆ ಅನೇಕ ಪ್ರತಿಭಟನೆ, ಸಮಾವೇಶ, ಮನವಿಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅಧ್ಯಕ್ಷತೆಯಲ್ಲಿ ಈ ಬಗ್ಗೆ ಚರ್ಚಿಸಲು ನಡೆದ ಸಭೆಯಲ್ಲಿ ಟಿಕೆಟ್ ದರ ಪರಿಷ್ಕರಣೆ ಆಗದ ಹೊರತು ವೇತನ ಪರಿಷ್ಕರಣೆ ಕಷ್ಟಸಾಧ್ಯ ಎಂದು ಆಡಳಿತ ವರ್ಗ ಹೇಳಿದೆ. ಈ ವಿಳಂಬ ಧೋರಣೆಯಿಂದ ಬೇಸರಗೊಂಡು ಅನಿವಾರ್ಯವಾಗಿ ಶಾಂತಿಯುತ ಮುಷ್ಕರದ ನಿರ್ಧಾರ ಕೈಗೊಂಡಿದ್ದಾರೆ.

> **ಶಕ್ತಿ ಯೋಜನೆಯಿಂದ ಆಗುತ್ತಿರುವ ಶಿಕ್ಷೆ, ಕಿರುಕುಳ ಸಮಸ್ಯೆ ಪರಿಹರಿಸಬೇಕು. ನೌಕರರ ಮುಂಬಡ್ತಿಗೆ ಕ್ರಮ ಕೈಗೊಳ್ಳಬೇಕು. ಹೆಚ್ಚುವರಿ ಕೆಲಸದ ಅವಧಿಗೆ ಓಟಿ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಲಾಗಿದೆ.**

ಡಿಸೆಂಬರ್ 31ರ ನಂತರ ಬೇಡಿಕೆ ಈಡೇರುವವರೆಗೆ ಕರ್ತವ್ಯಕ್ಕೆ ಹಾಜರಾಗುವುದಿಲ್ಲ ಎಂದು ಹೇಳಲಾಗಿದೆ.

ಹಿಂದಿನ ವೇತನ ಹೆಚ್ಚಳದ 38 ತಿಂಗಳ ಬಾಕಿ ಬಿಡುಗಡೆ ಮಾಡಬೇಕು. ಮೂಲವೇತನಕ್ಕೆ ಶೇಕಡ 25 ರಷ್ಟು ವೇತನ ಹೆಚ್ಚಿಸಿ ಶೇಕಡ 31 ರಷ್ಟು ತುಟ್ಟಿ ಭತ್ಯೆ ವಿಲೀನಗೊಳಿಸಿ ವೇತನ ಶ್ರೇಣಿ ಸಿದ್ಧಪಡಿಸಬೇಕು. ನೌಕರರ ಭತ್ಯೆಗಳನ್ನು 5 ಪಟ್ಟು ಹೆಚ್ಚಳ ಮಾಡಬೇಕು. ಪ್ರತಿ ತಿಂಗಳು 2000 ರೂ. ವೈದ್ಯಕೀಯ ಚಿಕಿತ್ಸಾ ವೆಚ್ಚ ನೀಡಬೇಕು. ಬಸ್ ನಿಲ್ದಾಣ ಮತ್ತು ಬಸ್ ಘಟಕಗಳಲ್ಲಿ ಸೂಕ್ತ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು.

## ಸರ್ಕಾರದಿಂದ ವಿಶೇಷ ಕಾರ್ಯಾಚರಣೆ, ಕಾನೂನು ಕ್ರಮ ಫಿಕ್ಸ್!

• **ಉದಯವಾಹಿನಿ, ಬೆಂಗಳೂರು**

ಅಕ್ರಮ ಪಡಿತರ ಪ್ರಕರಣದಲ್ಲಿ ತಪ್ಪಿತಸ್ಥರೆಂದು ಸಾಬೀತಾದ ವ್ಯಕ್ತಿಗಳ ವಿರುದ್ಧ ಆರೋಪ ಸಾಬೀತಾದಲ್ಲಿ ನ್ಯಾಯಾಲಯದ ಆದೇಶದಂತೆ ಕಾನೂನು ರೀತಿ ಕ್ರಮ ವಹಿಸಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆಯ ಸಚಿವರಾದ ಕೆ.ಎಚ್. ಮುನಿಯಪ್ಪ ಹೇಳಿದರು. ಅಕ್ರಮ ಪಡಿತರ ವಿರುದ್ಧ ಸರ್ಕಾರದಿಂದ ವಿಶೇಷ ಕಾರ್ಯಾಚರಣೆ ಪ್ರಕ್ರಿಯೆಯು ಚಾಲ್ತಿಯಲ್ಲಿದೆ ಎಂದು ಇದೇ ಸಂದರ್ಭದಲ್ಲಿ ಸದನಕ್ಕೆ ಅವರು ತಿಳಿಸಿದರು. ವಿಧಾನ ಪರಿಷತನಲ್ಲಿ ಡಿಸೆಂಬರ್ 9ರಂದು ಸದಸ್ಯರಾದ ಟಿ.ಎನ್.ಜವರಾಯಿಗೌಡ, ಐವನ್ ಡಿ ಸೋಜಾ, ಸಿ.ಟಿ.ರವಿ, ಶರವಣ.ಟಿ.ಎ, ನಿರಾಣಿ ರುದ್ರಪ ಹನುಮಂತಪ್ಪ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಸಚಿವರು ಉತ್ತರಿಸಿದರು. ರಾಜ್ಯಾದ್ಯಂತ ಜನವರಿ–2021 ರಿಂದ ಮೇ 2023ರ ಅವಧಿಯಲ್ಲಿ 3,35,463 ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಲಾಗಿದ್ದು, ಇವರಿಂದ ರೂ. 13,51,30,858 ಗಳ ದಂಡ ವಿಧಿಸಿ, ಅನರ್ಹರಿಗೆ ನೀಡಿದ ಸವಲತ್ತುಗಳಿಂದ ಉಂಟಾದ ನಷ್ಟವನ್ನು ಭರಿಸಲು ಸರ್ಕಾರ ಕ್ರಮವಹಿಸಿದೆ.


ಉದಯವಾಹಿನಿ ಚಿತ್ರ

ಆಹಾರ ಇಲಾಖೆಯ ಉಗ್ರಾಣಗಳಿಂದ ಅಕ್ರಮವಾಗಿ ಕಾಳ ಸಂತೆಯಲ್ಲಿ ಅಕ್ಕಿ ಮಾರಾಟವಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಕ್ರಮ ವಹಿಸಿದೆ.

> **ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸುವ ಪಡಿತರ ಅಕ್ರಮ ಸಾಗಣೆ ಕಂಡು ಬಂದಲ್ಲಿ ಕೂಡಲೇ ದಾಳಿ ನಡೆಸಿ, ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪ್ರಕರಣ ದಾಖಲಿಸಿ, ಅಕ್ರಮ ಪಡಿತರ ದಾಸ್ತಾನು ಮುಟ್ಟುಗೋಲು ಹಾಕಿಕೊಂಡು, ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿ, ಮುಟ್ಟುಗೋಲು ದಾಸ್ತಾನನ್ನು ವಿಲೇ ಮಾಡಿ, ವಿಲೇ ಪಡಿಸಿದ ಪಡಿತರ ಮೊತ್ತವನ್ನು ಸರ್ಕಾರಕ್ಕೆ ಜಮೆ ಮಾಡಲಾಗುತ್ತಿದೆ ಎಂದರು.**

## ಬೆಳಗಾವಿಯಲ್ಲಿ ಡಿ. 26, ರಂದು ಗಾಂಧಿ ಭಾರತ' ಕಾರ್ಯಕ್ರಮಕ್ಕೆ ರಾಜ್ಯ ಸರ್ಕಾರ ಚಾಲನೆ!

• **ಉದಯವಾಹಿನಿ, ಬೆಂಗಳೂರು**

ಚಳಿಗಾಲದ ಅಧಿವೇಶನದ ಮೊದಲ ದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಹಾತ್ಮ ಗಾಂಧಿ ಅವರ ಅಧ್ಯಕ್ಷತೆಯಲ್ಲಿ 1924 ರಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೇಸ್ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮದ ಅಂಗವಾಗಿ ಪ್ರಸಕ್ತ ವರ್ಷ ದುದ್ದಕ್ಕೂ ಆಯೋಜಿಸಿರುವ ಗಾಂಧಿ ಭಾರತ ಕಾರ್ಯಕ್ರಮದ ಲಾಂಛನವನ್ನು ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಅನಾವರಣಗೊಳಿಸಲಾಯಿತು.

ಬೆಳಗಾವಿಯಲ್ಲಿ ಇದೇ ಡಿಸೆಂಬರ್ 26 ಹಾಗೂ 27 ರಂದು ಗಾಂಧಿ ಭಾರತ ಕಾರ್ಯಕ್ರಮಕ್ಕೆ ಚಾಲನೆ ದೊರೆಯಲಿದೆ.




ಮುಂಬರುವ 2025ರ ಅಕ್ಟೋಬರ್ 2ರ ವರೆಗೆ ರಾಜ್ಯದಾದ್ಯಂತ ವೈವಿಧ್ಯಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಗಾಂಧೀಜಿಯವರ ಬದುಕು, ಹೋರಾಟ, ಸ್ವಾತಂತ್ರ್ಯ ಚಳುವಳಿ ಕುರಿತು ಮಕ್ಕಳು, ಯುವಜನರು ಸೇರಿದಂತೆ ಎಲ್ಲಾ ವಯೋಮಾನದ ಜನರಲ್ಲಿ ದೇಶಾಭಿಮಾನ, ಸತ್ಯ, ಅಹಿಂಸೆ, ಆರ್ಥಿಕ ಚಿಂತನೆಗಳು, ಸ್ವರಾಜ್, ಅಸ್ಪೃಶ್ಯತೆ ನಿವಾರಣೆ ಮತ್ತಿತರ ವಿಚಾರಗಳ ಮೇಲೆ ಬೆಳಕು ಚೆಲ್ಲುವ ಕಾರ್ಯಕ್ರಮಗಳನ್ನು ಸರ್ಕಾರ ಆಯೋಜಿಸುತ್ತಿದೆ.

## ರಾಜ್ಯದಲ್ಲಿ ಗೋಮಾಳ ನಿಯಮ ಬದಲಾವಣೆ ಸಾಧ್ಯವಿಲ್ಲ : ಸಚಿವ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಗೋಮಾಳ ನಿಯಮ ಬದಲಾವಣೆ ಸಾಧ್ಯವಿಲ್ಲ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಹೇಳಿದ್ದಾರೆ. ( ಮನೋರಂಜನೆ 5. ಕ್ರೈಂ ನ್ಯೂಸ್



ಸರ್ವೋಚ್ಚ ನ್ಯಾಯಾಲಯ 3 ಪ್ರಕರಣಗಳಲ್ಲಿ ಸ್ಪಷ್ಟವಾಗಿ ಗೋಮಾಳ ಜಮೀನನ್ನು ಇತರೆ ಉದ್ದೇಶಗಳಿಗೆ ಮಂಜೂರು ಮಾಡದಂತೆ ಆದೇಶ ಹೊರಡಿಸಿದೆ. ಭೂ ಸುಧಾರಣೆ ಕಾಯ್ದೆ – 1991ರ ಅನುಸಾರ 100 ಜಾನುವಾರುಗಳಿಗೆ 30 ಎಕರೆ ಗೋಮಾಳ ಜಮೀನು ಕಾಯ್ದಿರಿಸುವ ನಿಯಮ ರೂಪಿಸಲಾಗಿದೆ. ಅ ಆರೋಗ್ಯ ಸದ್ಯ ಇವುಗಳ ಬದಲಾವಣೆ ಸಾಧ್ಯವಿಲ್ಲ ಎಂದು ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ಅವರು ಬೆಳಗಾವಿಯ ಚಳಿಗಾಲದ ವಿಧಾನ ಮಂಡಲ ಅಧಿವೇಶನದಲ್ಲಿ ತಿಳಿಸಿದರು.

# 25ಕ್ಕೂ ಅಧಿಕ ಕಡೆ 10 ಸರ್ಕಾರಿ ಅಧಿಕಾರಿಗಳಿಗೆ ಲೋಕಾಯುಕ್ತ ಶಾಕ್

**ಬೆಂಗಳೂರಿನಲ್ಲಿ 4 ಅಧಿಕಾರಿಗಳ ನಿವಾಸ ಕಛೇರಿ, ವಿವಿಧ ವಾಣಿಜ್ಯ ಮಳಿಗೆಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ**

• **ಉದಯವಾಹಿನಿ, ಬೆಂಗಳೂರು**

ರಾಜ್ಯದ 25ಕ್ಕೂ ಹೆಚ್ಚು ಕಡೆ 10 ಸರ್ಕಾರಿ ಅಧಿಕಾರಿಗಳ ಮನೆ, ಕಚೇರಿ ಸೇರಿ ವಿವಿಧೆಡೆ ಏಕಕಾಲದಲ್ಲಿ ಬೆಳಿಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬೆಂಗಳೂರು,ಬೆಂಗಳೂರು ಗ್ರಾಮಾಂತರ, ಕೊಪ್ಪಳ, ಗದಗ, ಕಲಬುರ್ಗಿ, ಚಿತ್ರದುರ್ಗ, ರಾಯಚೂರಿನಲ್ಲಿ ಏಕಕಾಲದಲ್ಲಿ ದಾಳಿ ನಡೆಸಿ ಅಕ್ರಮ ಸಂಪತ್ತು ಪತ್ತೆ ಹಚ್ಚಿದ್ದಾರೆ. ಕೊಪ್ಪಳದ ಅಬಕಾರಿ ಇಲಾಖೆಯಲ್ಲಿ ನಿರೀಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ರಮೇಶ ಅಗಡಿ ಅವರ ಬಿಟಿ ಪಾಟೀಲ್ ನಗರದ ಕಚೇರಿ ಹಾಗೂ ಅವರು ವಾಸಿಸುತ್ತಿರುವ ಬಾಡಿಗೆ ಮನೆ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ.

ಯಲಬುರ್ಗಾ ತಾಲ್ಲೂಕಿನ ತುಮರಗುದ್ದಿ ಗ್ರಾಮದಲ್ಲಿರುವ ಅವರ ತೋಟದ ಮನೆ ಮೇಲೂ ದಾಳಿ ಮಾಡಲಾಗಿದೆ. ಅಲ್ಲದೆ ವಿಜಯ ನಗರದಲ್ಲಿರುವ ಅವರ ಆಪ್ತ ಮಧ್ಯವರ್ತಿ ಎಂದು ಹೇಳಲಾದ ಏಜಂಟ್ ಮನೆಯಲ್ಲಿ ಡಿವೈಎಸ್ಪಿ ನೇತೃತ್ವದಲ್ಲಿ ಲೋಕಾಯುಕ್ತ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

ಬೆಂಗಳೂರಿನಲ್ಲಿ 4 ಅಧಿಕಾರಿಗಳ ನಿವಾಸ ಕಛೇರಿ ಹಾಗೂ ವಿವಿಧ ವಾಣಿಜ್ಯ ಮಳಿಗೆಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ.


ಉದಯವಾಹಿನಿ ಚಿತ್ರ


**ಡಿವೈಎಸ್ಪಿ ನೇತೃತ್ವದಲ್ಲಿ ಲೋಕಾಯುಕ್ತ ಅಧಿಕಾರಿಗಳು ಪರಿಶೀಲನೆ**

ಬಾಣಸವಾಡಿ ಹೆಚ್‌ಆರ್‌ಬಿ ಲೇಔಟ್ ಬೆಂ.ಪೂರ್ವ ಬೆಸ್ಕಾಂ ಕಛೇರಿಯಲ್ಲಿ ಸೂಪರಿಟೆಂಡೆಂಟ್ ಆಗಿರುವ ಲೋಕೇಶ್ ಬಾಬು ಅವರಿಗೆ ಲೋಕಾಯುಕ್ತ ಅಧಿಕಾರಿಗಳು ಬಿಸಿ ಮುಟ್ಟಿಸಿದ್ದಾರೆ. ಅವರ ನಿವಾಸದಲ್ಲಿ ಕೆಲವು ದಾಖಲೆ ಪತ್ರಗಳು ಚಿನ್ನಾಭರಣ ಸೇರಿದಂತೆ ಹಲವು ಬ್ಯಾಂಕ್‌ಗಳಲ್ಲಿ ಹೂಡಿಕೆ ಮತ್ತಿತ್ತರ ವ್ಯವಹಾರಗಳನ್ನು ಪತ್ತೆ ಹಚ್ಚಲಾಗಿದೆ. ಇನ್ನೂ ಬೊಮನಹಳ್ಳಿ ವಲಯದ ಬಿಬಿಎಂಪಿ ಕಂದಾಯ ನಿರೀಕ್ಷಕ ಸುರೇಶ್ ಬಾಬು ಅವರ ಮನೆ ಹಾಗೂ ಕಚೇರಿ ಮೇಲೆ ಬೆಂ. ನಗರ ಬಿಓಎಸ್ಪಿ ನೇತೃತ್ವದಲ್ಲಿ ದಾಳಿ ನಡೆಸಿದ್ದಲ್ಲದೆ, ಯಲಹಂಕ ವಲಯದ ತೆರಿಗೆ ನಿರೀಕ್ಷಕ ಕೃಷ್ಣಪ್ಪ ಅವರ ಮನೆ ಹಾಗೂ ಕಛೇರಿಯಲ್ಲಿ ಲೋಕಾಯುಕ್ತ ತಪಾಸಣೆ ಕೈಗೊಂಡಿದೆ. ಬೆಂ. ಗ್ರಾಮಾಂತರದ ಜಿಲ್ಲಾ ಆರೋಗ್ಯ ಅಧಿಕಾರಿ ಎಂ.ಸಿ. ಸುನಿಲ್ ಕುಮಾರ್ ಅವರ ನಿವಾಸ ಹಾಗೂ ಅವರು ಕಾರ್ಯನಿರ್ವಹಿಸುತ್ತಿದ್ದ ಕಛೇರಿ ಮೇಲೆ ದಾಳಿ ನಡೆದಿದೆ.

ಇವರ ಬಳಿ ಹಲವೆಡೆ ನಿವೇಶನಗಳು ಚಿನ್ನಾಭರಣ ಸೇರಿದಂತೆ ಅಪಾರ ಪ್ರಮಾಣದ ಅಕ್ರಮ ಆಸ್ತಿಯನ್ನು ಪತ್ತೆಯಾಗಿದೆಯೆಂದು ಲೋಕಾಯುಕ್ತ ಮೂಲಗಳು ತಿಳಿಸಿವೆ. ಹಲವು ದಾಖಲೆಗಳನ್ನು ಕೂಡ ವಶಪಡಿಸಿಕೊಂಡಿದ್ದು ಔಷಧಿ ಖರೀದಿ ಸೇರಿದಂತೆ ವಿವಿಧ ವಲಯಗಳಲ್ಲಿ ಇವರು ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆಂದು ದೂರು ನೀಡಲಾಗಿತ್ತು. ಚನ್ನಪಟ್ಟಣದ ಪೊಲೀಸ್ ಟ್ರೈನಿಂಗ್ ಶಾಲೆಯ ಡಿಎಸ್ಪಿ ನಂಜುಂಡಯ್ಯ ಅವರ ಬೆಂಗಳೂರು ನಿವಾಸ ಸೇರಿದಂತೆ ಹಲವೆಡೆ ಲೋಕಾಯುಕ್ತ ಎಸ್ಪಿ ನೇತೃತ್ವದಲ್ಲಿ ದಾಳಿ ನಡೆದಿದೆ.

> **ಬೆಂ. ಗ್ರಾಮಾಂತರದ ಆರೋಗ್ಯ ಇಲಾಖೆಯ ಜಿಲ್ಲಾ ಆರೋಗ್ಯ ಅಧಿಕಾರಿ ಎಂ ಸಿ ಸುನಿಲ್ ಕುಮಾರ್ ಅವರ ಬೆಂಗಳೂರು ನಿವಾಸ ಹಾಗೂ ವಿವಿಧ 3 ಕಡೆ ಲೋಕಾಯುಕ್ತ ಅಧಿಕಾರಿಗಳು ಕಾರ್ಯಾಚರಣೆ ಕೈಗೊಂಡಿದ್ದು ಅಪಾರ ಪ್ರಮಾಣದ ಚರಾಸ್ತಿ, ಸ್ಥಿರಾಸ್ತಿಗಳನ್ನು ಪತ್ತೆ ಹಚ್ಚಿದ್ದಾರೆ. ಕಾರ್ಯಾಚರಣೆ ಮುಂದುವರೆ ದಿದ್ದು ಅಧಿಕಾರಿಗಳ ಸಂಪತ್ತಿನ ಬಗ್ಗೆ ಹೆಚ್ಚಿನ ಮಾಹಿತಿಗಳನ್ನು ಕಲೆ ಹಾಕಲಾಗುತ್ತಿದೆಯೆಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.**

> **ಇಲ್ಲೂ ಕೂಡ ಹಲವು ಆಸ್ತಿ ದಾಖಲೆಗಳು ಪತ್ತೆಯಾಗಿವೆ. ಕಲಬುರಗಿಯ ಮಹಾನಗರ ಪಾಲಿಕೆಯ ಸಹಾಯಕ ಆಯುಕ್ತ ರಾಮಪ್ಪ ಅವರಿಗೂ ಲೋಕಾಯುಕ್ತ ಅಧಿಕಾರಗಳು ಶಾಕ್ ನೀಡಿದ್ದಾರೆ. ಮನೆ ಹಾಗೂ ಅವರಿಗೆ ಸೇರಿದ ಹಲವು ವಾಣಿಜ್ಯ ಕೇಂದ್ರ ಹಾಗೂ ಇವರ ಆಪ್ತ ಮಧ್ಯವರ್ತಿ ನಿವಾಸದ ಮೇಲೂ ದಾಳಿ ನಡೆಸಲಾಗಿದೆಯೆಂದು ತಿಳಿದು ಬಂದಿದೆ. ಹಿರಿಯೂರು ಉಪ-ವಿಭಾಗದ ಅರಣ್ಯ ಸಹಾಯಕ ಸಂರಕ್ಷಣಾಧಿಕಾರಿ ಸುರೇಶ್ ಅವರ ಚಿತ್ರದುರ್ಗದ ನಿವಾಸ ಹಾಗೂ ಕಚೇರಿಯ ಮೇಲೆ ದಾಳಿ ನಡೆದಿದೆ.**

# ಅತ್ಯಾಧುನಿಕ 100 ಹಾಸಿಗೆಗಳ ಆಸ್ಪತ್ರೆ: ನಿರ್ವಹಣೆಯೇ ಸವಾಲು

## ಸುಸಜ್ಜಿತ ಕಟ್ಟಡ ಹೊಂದಿರುವ ಭಾಸ್ಕರರಾವ್ ಭಾವ ತಾಲ್ಲೂಕು ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಇತರೆ ಸಿಬ್ಬಂದಿ ಕೊರತೆ

• ಉದಯವಾಹಿನಿ ನರಗುಂದ

ಸುಸಜ್ಜಿತ ಕಟ್ಟಡ ಹೊಂದಿರುವ ನರಗುಂದದ ಭಾಸ್ಕರರಾವ್ ಭಾವ ತಾಲ್ಲೂಕು ಆಸ್ಪತ್ರೆಯು ವೈದ್ಯರು ಹಾಗೂ ಇತರೆ ಸಿಬ್ಬಂದಿ ಕೊರತೆಯಿಂದ ಸೊರಗಿದೆ. ನಿರ್ವಹಣೆ ಕಷ್ಟವಾ ಗಿದೆ. ಗದಗ ಜಿಲ್ಲಾ ಆಸ್ಪತ್ರೆ ಬಿಟ್ಟರೆ ಅತ್ಯಾಧುನಿಕ ಸೌಲಭ್ಯವುಳ್ಳ 100 ಹಾಸಿಗೆಯುಳ್ಳ ಆಸ್ಪತ್ರೆ ಇದಾಗಿದೆ.

ಈ ಆಸ್ಪತ್ರೆ ಹುಬ್ಬಳ್ಳಿ–ವಿಜಯಪುರ ರಾಷ್ಟ್ರೀಯ ಹೆದ್ದಾರಿ ಹಾಗೂ ಬಸ್ ನಿಲ್ದಾಣದ ಸಮೀಪವೇ ಇರುವುದರಿಂದ ಚಿಕಿತ್ಸೆಗೆ ಬರುವ ರೋಗಿಗಳ ಸಂಖ್ಯೆ ಹೆಚ್ಚಾಗಿದೆ. ಆದರೆ, ಇರುವ ಸಿಬ್ಬಂದಿ ಚಿಕಿತ್ಸೆ ನೀಡಲು ಹೆಣಗಾಡಬೇಕಿದೆ. ಇದರಿಂದ ಸಕಾಲಕ್ಕೆ ರೋಗಿಗಳಿಗೆ ಅಗತ್ಯವಿರುವ ಚಿಕಿತ್ಸೆ ದೊರೆಯದಂತಾಗಿದೆ ಎಂದು ಸ್ಥಳೀಯರು ದೂರಿದ್ದಾರೆ. ತಾಲ್ಲೂಕು ಆಸ್ಪತ್ರೆಗೆ ವೈದ್ಯರು ಸೇರಿದಂತೆ ಒಟ್ಟು 76 ಸಿಬ್ಬಂದಿ ಇರಬೇಕು.

ಇದರಲ್ಲಿ 36 ಸಿಬ್ಬಂದಿ ಮಾತ್ರ ಇದ್ದಾರೆ. ಇದರಿಂದ ಬೃಹತ್ ಕಟ್ಟಡ, ವಿವಿಧ ವಿಭಾಗಗಳನ್ನು ನಿರ್ವಹಿಸಲು ಸಿಬ್ಬಂದಿ ಹರಸಾಹಸ ಪಡಬೇಕಿದೆ. ನಾಲ್ಕು ತಜ್ಞ ವೈದ್ಯರ ಕೊರತೆ ಸೇರಿದಂತೆ 9 ವೈದ್ಯರ ಕೊರತೆ ಇದೆ. ಹಿರಿಯ ಆರೋಗ್ಯ ವೈದ್ಯಾಧಿಕಾರಿ 1, ಆರೋಗ್ಯ ವೈದ್ಯಾಧಿಕಾರಿ ಸೇರಿ 3 ಹುದ್ದೆಗಳು ಖಾಲಿ ಇವೆ. ಇದರ ಜೊತೆಗೆ ಸ್ಟಾಫ್ ನರ್ಸ್, ಎಕ್ಸರೇ, ಪ್ರಯೋಗಾಲಯ ಸಿಬ್ಬಂದಿ, ಔಷಧ ವಿತರಣೆ ಸಿಬ್ಬಂದಿ, ಡಿ ಗ್ರೂಪ್ ನೌಕರರು 6 ಮಂದಿ, ಆಕ್ಸಿಜನ್ ಘಟಕ ನಿರ್ವಹಣೆ ಸಿಬ್ಬಂದಿ ಇರದ ಪರಿಣಾಮ ಆಯಾ ವಿಭಾಗಗಳನ್ನು ವ್ಯವಸ್ಥಿತವಾಗಿ ನೋಡಿಕೊಳ್ಳಲು ಸಾಧ್ಯವಾಗುತ್ತಿಲ್ಲ.

### ಪಾಲನೆಗೆ ಕಾನೂನು ತೊಡಕು

**ಆಸ್ಪತ್ರೆಯಲ್ಲಿ ಕೆಲಸ ನಿರ್ವಹಿಸುವ ವೈದ್ಯರು ಸಿಬ್ಬಂದಿ ಸ್ಥಳೀಯವಾಗಿ ಉಳಿದುಕೊಳ್ಳಲು ವಸತಿಗೃಹಗಳು ಬೇಕು. ಆದರೆ ಇರುವ ಎರಡು ವಸತಿಗೃಹಗಳು ಹಾಳಾಗಿವೆ. ಇದರಿಂದ ವೈದ್ಯರು ಹಾಗೂ ಸಿಬ್ಬಂದಿ ತಮ್ಮ ಊರುಗಳಿಂದಲೇ ಓಡಾಡುತ್ತಾರೆ. ಇದರಿಂದಾಗಿ ಕೆಲವೊಮ್ಮೆ ಸಕಾಲಕ್ಕೆ ಚಿಕಿತ್ಸೆ ರೋಗಿಗಳಿಗೆ ತೊಂದರೆ ಎದುರಾಗಿದೆ. ಆದ್ದರಿಂದ ಕೂಡಲೇ ವಸತಿಗೃಹ ನಿರ್ಮಾಣಕ್ಕೆ ಆರೋಗ್ಯ ಇಲಾಖೆ ಮುಂದಾಗಬೇಕು ಎಂದು ಸಿಬ್ಬಂದಿ ಒತ್ತಾಯಿಸಿದ್ದಾರೆ.**


ಉದಯವಾಹಿನಿ ಚಿತ್ರ

**ರಸ್ತೆ ಅಪಘಾತದಿಂದ ತಿಂಗಳಿಗೆ ಸರಾಸರಿ 10ಕ್ಕೂ ಹೆಚ್ಚು ಮರಣೋತ್ತರ ಪರೀಕ್ಷೆ ನಡೆಸುವುದು ಸಾಮಾನ್ಯ ಆದರೆ ಸಿಬ್ಬಂದಿ ಕೊರತೆಯಿಂದ ಇದನ್ನು ನಿರ್ವಹಿಸಲು ಕಷ್ಟ ಎಂದು ಇಲ್ಲಿಯ ವೈದ್ಯರು ಹೇಳುತ್ತಾರೆ.**

ತಾಲ್ಲೂಕು ಆಸ್ಪತ್ರೆ ಹುಬ್ಬಳ್ಳಿ–ವಿಜಯಪುರ ರಾಷ್ಟ್ರೀಯ ಹೆದ್ದಾರಿ ಸಮೀಪವಿದೆ. ಆದರೆ, ಈ ಕಟ್ಟಡಕ್ಕೆ ಕಾಂಪೌಂಡ್ ಇಲ್ಲ. ಎರಡು ಕಡೆ ಪ್ರವೇಶವಿದ್ದರೂ ಅವುಗಳಿಗೆ ಯಾವುದೇ ಗೇಟ್ ಇಲ್ಲ. ಇದರಿಂದ ವಿಶಾಲವಾದ ಆವರಣವು ವಾಹನಗಳ ಪಾರ್ಕಿಂಗ್ ಸ್ಥಳವಾಗಿ ರೋಗಿಗಳಿಗೆ, ಆಸ್ಪತ್ರೆ ಸಿಬ್ಬಂದಿಗೆ ಸಂಪೂರ್ಣ ಕಿರಿಕಿರಿಯಾಗಿ ಪರಿಣಮಿಸಿದೆ. ಆವರಣದ ಅರ್ಧ ಭಾಗ ಕಸಕಡ್ಡಿಗಳ ತಾಣವಾಗಿದೆ. ಒಂದು ಭಾಗದಲ್ಲಿ ಚರಂಡಿ ನೀರು ಹರಿದು ಬರುವುದರಿಂದ ಹಂದಿಗಳ ತಾಣವಾಗಿದೆ. ಇದರಿಂದ ಈ ಕಟ್ಟಡಕ್ಕೆ ಸುರಕ್ಷತೆ ಇಲ್ಲದಂತಾಗಿದೆ.

**ನರಗುಂದ ತಾಲ್ಲೂಕು ಆಸ್ಪತ್ರೆಯ ಸದುಪಯೋಗ ಪರಿಣಾಮಕಾರಿಯಾಗಿ ಆಗಬೇಕಾದಲ್ಲಿ ಆರೋಗ್ಯ ಇಲಾಖೆ ತಕ್ಷಣ ಸಿಬ್ಬಂದಿ ನೇಮಕಕ್ಕೆ ಕ್ರಮವಹಿಸಬೇಕು. ಇರುವ ಸಣ್ಣಪುಟ್ಟ ಸಮಸ್ಯೆಗಳನ್ನು ಬಗೆಹರಿಸಿ ರೋಗಿಗಳಿಗೆ ಅನುಕೂಲ ಮಾಡಿಕೊಡಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.**

**ಇರುವ ಸಿಬ್ಬಂದಿ ಚಿಕಿತ್ಸೆ ನೀಡಲು ಹೆಣಗಾಡಬೇಕಿದೆ**

ಆಸ್ಪತ್ರೆ ಕಟ್ಟಡದ ಎದುರು ಎಗ್ ರೈಸ್ ಅಂಗಡಿ, ಚಹಾದ ಅಂಗಡಿಗಳು ರಾರಾಜಿಸುತ್ತಿವೆ. ಆರೋಗ್ಯಕರವಾದ ವಾತಾವರಣ ಇರಬೇಕಾದ ಸ್ಥಳದಲ್ಲಿ, ಅನಾರೋಗ್ಯಕರ ವಾತಾವರಣ ನಿರ್ಮಾಣವಾಗಿದೆ. ಈ ಬಗ್ಗೆ ಇಲ್ಲಿನ ಆರೋಗ್ಯಾಧಿಕಾರಿಗಳು ಮೇಲಧಿಕಾರಿಗಳಿಗೆ ಪತ್ರ ಬರೆದು ಸುಸ್ತಾಗಿದ್ದಾರೆ. ಆದರೆ, ಕಾಂಪೌಂಡ್ ಮಾತ್ರ ನಿರ್ಮಾಣ ಆಗಿಲ್ಲ.

ನರಗುಂದ ತಾಲ್ಲೂಕು ಆಸ್ಪತ್ರೆಗೆ ಕಾಂಪೌಂಡ್ ವ್ಯವಸ್ಥೆ ಇಲ್ಲದಿರುವುದು ಬಸವರಾಜ ತಾವರೆ ನರಗುಂದಆಸ್ಪತ್ರೆಗೆ ಅಗತ್ಯವಿರುವ ಸಿಬ್ಬಂದಿ ಇದ್ದಾಗ ಮಾತ್ರ ಆರೋಗ್ಯ ಸೇವೆ ಸಕಾಲಕ್ಕೆ ದೊರೆಯಲು ಸಾಧ್ಯ. ಇಲ್ಲಿ ಸುಸಜ್ಜಿತ ಕಟ್ಟಡವಿದ್ದರೂ ಅದಕ್ಕೆ ತಕ್ಕಂತೆ ಸಿಬ್ಬಂದಿ ಇಲ್ಲ.

ಸರ್ಕಾರ ಸಿಬ್ಬಂದಿ ನೇಮಕ ಹಾಗೂ ಆಸ್ಪತ್ರೆಗೆ ರಕ್ಷಣೆ ಒದಗಿಸಲು ತುರ್ತಾಗಿ ಕಾಂಪೌಂಡ್ ನಿರ್ಮಿಸಬೇಕುಡಾ.ರಾಜೇಶ ಟಿ.ಎಂ. ನರಗುಂದ ತಾಲ್ಲೂಕು ಆಸ್ಪತ್ರೆ ವೈದ್ಯಾಧಿಕಾರಿ ವೈದ್ಯರನ್ನು ಒದಗಿಸುವಂತೆ ಮೇಲಾಧಿಕಾರಿಗಳಿಗೆ ಹಲವಾರು ಬಾರಿ ಲಿಖಿತ ಮನವಿ ಸಲ್ಲಿಸಲಾಗಿದೆ.

ಕಾಂಪೌಂಡ್ ನಿರ್ಮಾಣದ ಅಗತ್ಯವಿದೆ. ಅದಕ್ಕೂ ಪತ್ರ ಬರೆಯ ಲಾಗಿದೆ. ವೈದ್ಯರು ಸಿಬ್ಬಂದಿ ಕೊರತೆ ನಡುವೆಯೂ ರೋಗಿಗಳಿಗೆ ಅಗತ್ಯವಿರುವ ಎಲ್ಲಾ ಆರೋಗ್ಯ ಸೇವೆಯನ್ನು ನಿರಂತರ ನೀಡಲಾಗುತ್ತಿದೆ.

# ಮಿನಿ ನ್ಯೂಸ್

## ಹಿರಿಯ ಟೈಲರ್ ರಸ್ತೆ ಅಪಘಾತಕ್ಕೆ ಬಲಿ

• ಉದಯವಾಹಿನಿ ಕಾಪು

ಕಾಪುವಿನ ಹಿರಿಯ ಟೈಲರ್ ಬಾಬು ಶೆಟ್ಟಿಗಾರ್ (70) ಅವರು ಮಂಗಳವಾರ ಮಂಜಾನೆ ರಾಷ್ಟ್ರೀಯ ಹೆದ್ದಾರಿ ಉದಾ ವರದಲ್ಲಿ ರಸ್ತೆ ಅಪಘಾತದಿಂದಾಗಿ ಮೃತಪಟ್ಟಿದ್ದಾರೆ ಅನಾರೋಗ್ಯದ ಕಾರಣದಿಂದಾಗಿ ಉಡುಪಿಯ ಖಾಸಗಿ ಆಸ್ಪತ್ರೆಯಲ್ಲಿರುವ ಸಹೋದರನ ಆರೈಕೆಯಲ್ಲಿದ್ದ ಅವರು ಮಂಗಳವಾರ ಮುಂಜಾನೆ ಕಾಪುವಿಗೆ ಮರಳುತ್ತಿದ್ದಾಗ ನಡೆದ ಅಪಘಾತದಲ್ಲಿ ಅವರು ಮೃತಪಟ್ಟಿರುವುದಾಗಿ ತಿಳಿದು ಬಂದಿದೆ. ರಾಷ್ಟ್ರೀಯ ನ ಜಗತ್ತು ಉಡುಪಿ ಮಂಗಳೂರು ರಸ್ತೆಯಲ್ಲಿರುವ ಉದ್ಯಾವರ ಹಲೀಮಾ ಸಾಬ್ರು ಸಭಾಂಗಣ ಬಳಿಯ ಶೋರೂಂ ಬಳಿ ಈ ಅಪಘಾತ ಸಂಭವಿಸಿದ್ದು ಹೆಚ್ಚಿನ ಮಾಹಿತಿಗಳು ಇನ್ನಷ್ಟೇ ಲಭ್ಯವಾಗಬೇಕಿವೆ. ವಾಣಿಜ್ಯ ಕ್ರೀಡೆ ಕಾಪು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು ಪರಿಶೀಲನೆ ನಡೆಸುತ್ತಿದ್ದಾರೆ.

## ಮಂಗಳೂರು ವಿವಿ ಪರೀಕ್ಷೆ ಮುಂದೂಡಿಕೆ

• ಉದಯವಾಹಿನಿ ಉಳ್ಳಾಲ

ಮಾಜಿ ಮುಖ್ಯಮಂತ್ರಿ, ಹಿರಿಯ ರಾಜಕಾರಣಿ ಎಸ್.ಎಂ.ಕೃಷ್ಣ ಅವರು ಮಂಗಳವಾರ ನಸುಕಿನ ಅಸುನೀಗಿದರು.

ಕೆಲ ತಿಂಗಳಿನಿಂದ ಅಸೌಖ್ಯದಿಂದ ಚಿಕಿತ್ಸೆ ಪಡೆಯುತ್ತಿದ್ದ ಎಸ್.ಎಂ.ಕೃಷ್ಣ ಅವರು ನಿಧನರಾದರು. ಎಸ್.ಎಂ.ಕೃಷ್ಣ ನಿಧನದ ಕಾರಣದಿಂದ ಬುಧವಾರ ರಾಜ್ಯದಲ್ಲಿ ಸರ್ಕಾರಿ ರಜೆ ಘೋಷಣೆ ಮಾಡಲಾಗಿದೆ. ರಾಜ್ಯದ ಎಲ್ಲಾ ಅಂಗನವಾಡಿ, ಶಾಲೆ–ಕಾಲೇಜುಗಳಿಗೆ ಬುಧವಾರ ರಜೆ ಇರಲಿದೆ. ಸರ್ಕಾರಿ ರಜೆಯ ಕಾರಣದಿಂದ ಬುಧವಾರ ನಡೆಯಬೇಕಿದ್ದ ಮಂಗಳೂರು ವಿಶ್ವವಿದ್ಯಾಲಯದ ಪದವಿ ಪರೀಕ್ಷೆಯನ್ನು ಮುಂದೂಡಲಾಗಿದೆ. ಈ ಪರೀಕ್ಷೆಯ ಮುಂದಿನ ದಿನಾಂಕವನ್ನು ತಿಳಿಸಲಾಗುವುದು ಎಂದು ವರದಿಯಾಗಿದೆ.

## ಪತ್ನಿಯನ್ನೇ ಕೊಲೆ ಮಾಡಿದ ಪತಿ

• ಉದಯವಾಹಿನಿ ತಾವರಗೇರಾ

ಪತಿಯೇ ಪತ್ನಿಯನ್ನು ಕೊಲೆ ಮಾಡಿದ ಶಂಕೆ ವ್ಯಕ್ತವಾಗಿದ್ದು, ಈ ಘಟನೆ ಪಟ್ಟಣದ ವಿಟ್ಲಾಪುರ ರಸ್ತೆಯಲ್ಲಿ ವಾಸವಿದ್ದ ಕುಟುಂಬವೊಂದರಲ್ಲಿ ಡಿ.10ರ ಮಂಗಳವಾರ ಬೆಳಗಿನ ಜಾವ ನಡೆದಿದೆ. ಕೊಲೆಯಾದ ಮಹಿಳೆ ಶರಣಮ್ಮ ಹಿರೇಮಠ (42) ಎಂದು ಗುರುತಿಸಲಾಗಿದ್ದು ಪತಿ ಶಿವಾನಂದಯ್ಯ ಹಿರೇಮಠ ಅವರೇ ಕೊಲೆ ಮಾಡಿದ್ದು, ಕೊಲೆಗೆ ನಿಖರವಾದ ಕಾರಣ ಇನ್ನೂ ತಿಳಿದು ಬಂದಿಲ್ಲ. ರಾಷ್ಟ್ರೀಯ ಘಟನಾ ಸ್ಥಳಕ್ಕೆ ಕೊಪ್ಪಳ ಜಿಲ್ಲಾ ಎಸ್‌ಪಿ ಶ್ರೀರಾಮ್ ಅರಸಿದ್ದಿ, ಡಿವೈಎಸ್ಪಿ ಸಿದ್ದಲಿಂಗಪ್ಪಗೌಡ, ಕುಷ್ಟಗಿ ಸಿಪಿಐ ಯಶವಂತ ಬಿಸನಹಳ್ಳಿ. ಜಗತ್ತು ಸ್ಥಳೀಯ ಪಿಎಸ್ಐ ನಾಗರಾಜ್ ಕೊಟಗಿ, ಕೊಪ್ಪಳ ಜಿಲ್ಲಾ ಪರಿಶೀಲನಾ ತಂಡ ಆಗಮಿಸಿದ್ದು ತನಿಖಾ ಹಂತದಲ್ಲಿದೆ.

## ಬೆಳಗಾವಿಯಲ್ಲಿ ಪಂಚಮಸಾಲಿ ಹೋರಾಟಗಾರರ ಮೇಲೆ ಲಾಠಿ ಚಾರ್ಜ್


ಉದಯವಾಹಿನಿ ಚಿತ್ರ

• ಉದಯವಾಹಿನಿ ಬೆಳಗಾವಿ

ಜಿಲ್ಲೆಯಲ್ಲಿ ವಿಧಾನಮಂಡಲದ ಅಧಿವೇಶನ ನಡೆಯುತ್ತಿದ್ದಂತ ಸಂದರ್ಭದಲ್ಲಿಯೇ ಪಂಚಮಸಾಲಿ ಮೀಸಲಾತಿಗೆ ಒತ್ತಾಯಿಸಿ ಪ್ರತಿಭಟನೆ ತೀವ್ರಗೊಂಡಿದೆ. ಇಂದು ಸುವರ್ಣಸೌಧಕ್ಕೆ ಮುತ್ತಿಗೆ ಹಾಕಲು ಪ್ರತಿಭಟನಾಕಾರರು ಯತ್ನಿಸಿದರು. ಈ ವೇಳೆ ಪೊಲೀಸರು ಲಾಠಿ ಚಾರ್ಜ್ ಮಾಡಿದ್ದಾರೆ.

ಈ ಒಂದು ಲಾಟರಿ ಚಾರ್ಜ್ ನಲ್ಲಿ 20ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎನ್ನಲಾಗಿದೆ. 6 ತಂತ್ರಜ್ಞಾನ ಹೌದು ಇಂದು ಬೆಳಗಾವಿಯ ಸುವರ್ಣಸೌಧದ ಮುಂದೆ ಪಂಚಮಸಾಲಿ ಮೀಸಲಾತಿಗೆ ಆಗ್ರಹಿಸಿ ಪ್ರತಿಭಟನೆಯನ್ನು ನಡೆಸಲಾಗುತ್ತಿತ್ತು ಪ್ರತಿಭಟನೆ ವಿಕೋಪಕ್ಕೆ ತಿರುಗಿ ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕೋದಕ್ಕೆ ಯತ್ನಿಸಲಾಯಿತು. ಈ ವೇಳೆ ಪ್ರತಿಭಟನಾಕಾರರನ್ನು ತಡೆಯೋದಕ್ಕೆ ಪೊಲೀಸರು ಎಷ್ಟೇ ಹರಸಾಹಸ ಪಟ್ಟರು ಸಾಧ್ಯವಾಗಲಿಲ್ಲ.

ಈ ಹಿನ್ನಲೆಯಲ್ಲಿ ಪ್ರತಿಭಟನಾಕಾರರ ಮೇಲೆ ಎಡಿಜಿಪಿ ಹಿತೇಂದ್ರರಿಂದಲೇ ಲಾಠಿಚಾರ್ಜ್ ನಡೆಸಲಾಯಿತು. ಲಾಠಿ ಏಟು ತಿಂದರು ತಮ್ಮ ಹಠವನ್ನು ಬಿಡದಂತ ಅನೇಕರು ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕೋದಕ್ಕೆ ಮುಂದಾದರು.


ಪೊಲೀಸರ ಲಾಠಿ ಏಟಿನಿಂದಾಗಿ 20ಕ್ಕೂ ಹೆಚ್ಚು ಪ್ರತಿಭಟನಾಕಾರರಿಗೆ ಗಾಯವಾಗಿದೆ ಎಂಬುದಾಗಿ ತಿಳಿದು ಬಂದಿದೆ.

# ಕೆಂಭಾವಿ ಪಟ್ಟಣವನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಣೆ ಮಾಡುವಂತೆ ಮನವಿ

• ಉದಯವಾಹಿನಿ, ಕೆಂಭಾವಿ

ಬೆಳಗಾವಿ ವಿಶೇಷ ಅಧಿವೇಶನದಲ್ಲಿಯೇ ಯಾದಗಿರಿ ಜಿಲ್ಲೆ ಸುರಪುರ ತಾಲ್ಲೂಕಿನಲ್ಲಿರುವ ಕೆಂಭಾವಿ ಪಟ್ಟಣವನ್ನು ತಾಲೂಕ ಕೇಂದ್ರವನ್ನಾಗಿ ಘೋಷಣೆ ಮಾಡುವಂತೆ ಮಾನ್ಯ ಉಪ ತಹಶೀಲ್ದಾರರು ಕೆಂಭಾವಿ ಇವರ ಮಖಾಂತರ ಮಾನ್ಯ ಮುಖ್ಯಮಂತ್ರಿಯವರಿಗೆ ಕೆಂಭಾವಿ ಮುಖಂಡರು ಮನವಿ ಸಲ್ಲಿಸುವ ಮೂಲಕ ಆಗ್ರಹಿಸಿದ್ದಾರೆ. ಮನವಿ ಸಲ್ಲಿಸಿ ಮಾತನಾಡಿದ ಸಮಾಜಿಕ ಹೋರಾಟಗಾರ ರಂಗಣ್ಣ ಕಂದಿಲ್ಲ, ಯಾದಗಿರಿ ಜಿಲ್ಲೆ ಸುರಪುರ ತಾಲ್ಲೂಕಿನ ಕೆಂಭಾವಿ ಹೋಬಳಿಯು ಸುರಪುರ ತಾಲ್ಲೂಕಿನಲ್ಲಿಯೇ ದೊಡ್ಡ ಕಂದಾಯ ಹೋಬಳಿಯಾಗಿದ್ದು, ಈ ಹೋಬಳಿಗೆ ಕನಿಷ್ಠ 86 ಗ್ರಾಮಗಳು ಒಳಗೊಂಡಿವೆ.

ಕಳೆದ 30 ವರ್ಷಗಳಿಂದ ಕೆಂಭಾವಿ ತಾಲ್ಲೂಕನ್ನಾಗಿ ಘೋಷಣೆ ಮಾಡಲು ನಿರಂತರವಾಗಿ ಹೋರಾಟ ಮಾಡಿದರೂ ಕೂಡಾ ಸುರಪುರ ತಾಲ್ಲೂಕಿನಲ್ಲಿ ಕೇವಲ ಹುಣಸಗಿ ಪಟ್ಟಣವನ್ನು ತಾಲ್ಲೂಕ ಕೇಂದ್ರವನ್ನಾಗಿ ಘೋಷಣೆ ಮಾಡಲಾಯಿತು. ಆದರೇ ಕೆಂಭಾವಿ ಮಾತ್ರ ಹಾಗೇ ಉಳಿಯಿತು. ಚುನಾವಣೆ ಪೂರ್ವದಲ್ಲಿ ಕೆಂಭಾವಿ ಪಟ್ಟಣಕ್ಕೆ ಬಂದತಹ ರಾಜಕೀಯ ಧುರಿಣರು ನಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ಕೆಂಭಾವಿ ತಾಲ್ಲೂಕ ಕೇಂದ್ರವನ್ನಾಗಿ ಘೋಷಣೆ ಮಾಡುತ್ತೇವೆ ಎಂದು ಸುಳ್ಳು ಆಶ್ವಾಸನೆ ಕೊಟ್ಟು ಹೋಗಿದ್ದಾರೆ. ನಾವು ಅದನ್ನು ನಂಬಿ ಇಲ್ಲಿಯವರೆಗೂ ಕಾಯುತ್ತಿದ್ದೇವೆ.


ಉದಯವಾಹಿನಿ ಚಿತ್ರ

### ಇಚ್ಛಾಸಕ್ತಿ ಕೊರತೆ

**ಕಲಬುರಗಿಯಲ್ಲಿ ನಡೆದ ವಿಶೇಷ ಅಧಿವೇಶನದಲ್ಲಿಯೂ ಕೂಡಾ ನಾವು ಮನವಿಯನ್ನು ಸಲ್ಲಿಸಲಾಗಿತ್ತು. ಆದರೇ ನಮ್ಮ ಮನವಿಗೆ ಕನಿಷ್ಟ ಪಕ್ಷ ಒಂದು ಹೇಳಿಕೆ ಕೂಡಾ ನೀಡಲಿಲ್ಲಾ. ಇದರಿಂದ ಕೆಂಭಾವು ಪಟ್ಟಣವನ್ನು ಈ ತಾಲ್ಲೂಕ ಕೇಂದ್ರವನ್ನಾಗಿ ಮಾಡಲು ಸರ್ಕಾರದ ಮಟ್ಟದಲ್ಲಿ ಇಚ್ಛಾಸಕ್ತಿ ಕೊರತೆ ಇದೆ ಎಂಬುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಇನ್ನಾದರೂ ನಮ್ಮ ತಾಳ್ಮೆಯನ್ನು ಪರಿಕ್ಷಿಸಿದೇ ಈಡೇರಿಸಬೇಕೆಂದು ಕೆಂಭಾವಿ ತಾಲ್ಲೂಕನ್ನು ಘೋಷಣೆ ಮಾಡಬೇಕು.**

### ಕನಸು ಇನ್ನೂ ನನಸಾಗಿಲ್ಲ

**ಹಿರಿಯ ರಾಜಕಾರಣಿ ಹಾಗೂ ದಿವಂಗತ, ಮಾಜಿ ಸಚಿವರಾದ ಬಾಪುಗೌಡ ದರ್ಶನಾಪುರ ಇವರ ಕನಸು ಕೂಡ ಆಗಿತ್ತು ಕೆಂಭಾವಿ ತಾಲ್ಲೂಕ ಮಾಡಬೇಕೆಂಬುದು, ಆದರೆ ಹಲವಾರು ವರ್ಷಗಳಿಂದ ನಿರಂತರ ಹೋರಾಟ ಮಾಡುತ್ತಿದ್ದಾರೆ. ಆದರೂ ಕೆಂಭಾವಿಯ ಜನತೆಯ ಹಾಗೂ ಬಾಪೂಗೌಡ ದರ್ಶನಾಪುರ ಇವರ ಕನಸು ಇನ್ನೂ ನನಸಾಗಿಲ್ಲ ಎಂಬುವುದೇ ಸಾರ್ವಜನಿಕರಲ್ಲಿ ಕಾಡುತ್ತಿರುವ ಪ್ರಶ್ನೆ, ಈಗಲಾದರೂ ಯಾದಗಿರಿ ಜಿಲ್ಲಾಉಸ್ತುವಾರಿ ಸಚಿವರಾದ ಶರಣಬಸಪ್ಪ ದರ್ಶನಾಪುರ ಇವರು ತಂದೆಯ ಕನಸು ಈಡೇರಿಸಬೇಕೆಂಬುವುದು ಕೆಂಭಾವಿ ಜನರ ಆಶೆಯವಾಗಿದೆ.**

# ಭಾಷಣಕಾರರ ನಿರ್ಬಂಧಿಸಿ ಹೇಡಿತನ ಪ್ರದರ್ಶನ

• ಉದಯವಾಹಿನಿ, ಬೀದರ್

ಹಿಂದೂ ಜಾಗೃತಿ ಸಮಾವೇಶ ನಿರ್ಬಂಧಿಸಿ, ಭಾಷಣಕಾರರು ಜಿಲ್ಲೆಗೆ ಬರದಂತೆ ತಡೆಯೊಡ್ಡುವ ಮೂಲಕ ಜಿಲ್ಲಾಡಳಿತ ಹೇಡಿತನ ಪ್ರದರ್ಶಿಸಿದೆ' ಎಂದು ಕರ್ನಾಟಕ ಮಾದಿಗ ವೆಲ್‌ಫೇರ್ ಅಸೋಸಿಯೇಶನ್ ಸಂಸ್ಥಾಪಕ ಅಧ್ಯಕ್ಷ ಸ್ವಾಮಿದಾಸ ಕೆಂಪೇನೋರ್ ಆರೋಪಿಸಿದರು.

ಡಿಸೆಂಬರ್ 8ರಂದು ಸಂಜೆ 5ಕ್ಕೆ ಹಿಂದೂ ಜಾಗೃತಿ ಸಮಾವೇಶ ಆಯೋಜಿಸಿ, ತಿಂಗಳಿಂದ ಅದಕ್ಕೆ ಸಿದ್ಧತೆ ಕೈಗೊಳ್ಳಲಾಗಿತ್ತು. ಜಿಲ್ಲೆಯಾದ್ಯಂತ ವ್ಯಾಪಕ ಪ್ರಚಾರ ಮಾಡಲಾಗಿತ್ತು. ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಗೂ ಈ ವಿಷಯ ಗೊತ್ತಿತ್ತು. ಹೀಗಿದ್ದರೂ ಏಕಾಏಕಿ ಹಿಂದಿನ ದಿನ ಕಾರ್ಯಕ್ರಮಕ್ಕೆ ನಿರ್ಬಂಧ ಹೇರಿ, ಕಾರ್ಯಕ್ರಮದ ಸ್ಥಳದಲ್ಲಿ ಸೆಕ್ಷನ್ 144 ಹೇರಿದ್ದು ಖಂಡನಾರ್ಹ ಎಂದು ನಗರದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.

ಕಾರ್ಯಕ್ರಮಕ್ಕೆ ಬಿಜೆಪಿ ನಾಯಕಿ ಮಾಧವಿ ಲತಾ, ಹಿಂದೂ ನಾಯಕಿ ಕಾಜಲ್ ಹಿಂದೂಸ್ತಾನಿ, ಶ್ರೀರಾಮ ಸೇನೆಯ ಸಂಸ್ಥಾಪಕ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಅವರು ಭಾಷಣಕಾರರಾಗಿ ಆಗಮಿಸುವುದು ನಿಗದಿಯಾಗಿತ್ತು. ಕೊನೆಯ ಕ್ಷಣದಲ್ಲಿ ನಿರ್ಬಂಧ ಹೇರಿ, ಅವರನ್ನು ತಡೆಯೊಡ್ಡಿ ಜಿಲ್ಲಾಡಳಿತ ಹೇಡಿತನ ಪ್ರದರ್ಶಿಸಿದೆ ಎಂದು ಟೀಕಿಸಿದರು.

ಅನ್ಯ ಧರ್ಮೀಯರನ್ನು ಖುಷಿಪಡಿಸಲು ಈ ದೇಶದ ಬಹುಸಂಖ್ಯಾತ ಹಿಂದೂ ಧರ್ಮೀಯರನ್ನು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ತುಳಿಯುತ್ತಿದೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ಪ್ರತಿಭಟನಾಕಾರರನ್ನು ಗೂಂಡಾಗಳು ಎಂದು ಕರೆಯುತ್ತಾರೆ. ಅದಕ್ಕೆ ಜಿಲ್ಲಾಡಳಿತ ಮೌನ ವಹಿಸುತ್ತದೆ. ಆದರೆ, ಸಂವಿಧಾನದ ಪ್ರಕಾರ ಹಿಂದೂ ಜಾಗೃತಿ ಸಮಾವೇಶ ಆಯೋಜಿಸಿದರೆ ತಡೆಯೊಡ್ಡುತ್ತದೆ.


ಉದಯವಾಹಿನಿ ಚಿತ್ರ

**ಜಿಲ್ಲಾಡಳಿತ ಕಾಣದ ಕೈಗಳ ಕೈಗೊಂಬೆಯಾಗಿ ಕುಣಿಯುತ್ತಿದೆ. ಇದರ ವಿರುದ್ಧ ಈಗಾಗಲೇ ನ್ಯಾಯಾಲಯದ ಮೊರೆ ಹೋಗಿದ್ದೇವೆ. ಅಲ್ಲಿ ನ್ಯಾಯ ಸಿಗುವ ಭರವಸೆ ಇದೆ**
**– ಸ್ವಾಮಿದಾಸ ಕೆಂಪೇನೋರ್**

# ರೈತರ ಸಮಸ್ಯೆಗಳಿಗೆ ಸಂಸತ್‌ನಲ್ಲಿ ಧ್ವನಿಯಾಗಿ

• ಉದಯವಾಹಿನಿ,ಹಾಸನ

ದೇಶದ ರೈತರ ಗಂಭೀರ ಸಮಸ್ಯೆಗಳ ಬಗ್ಗೆ ಸಂಸತ್ ಅಧಿವೇಶನದಲ್ಲಿ ಚರ್ಚಿಸುವಂತೆ ಆಗ್ರಹಿಸಿ ಸಂಯುಕ್ತ ಕಿಸಾನ್ ಮೋರ್ಚಾ, ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಸದಸ್ಯರು ಮಂಗಳವಾರ ನಗರದ ಸಂಸದರ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಸಂಸದರ ಕಚೇರಿ ಎದುರು ಕೆಲಕಾಲ ಧರಣಿ ನಡೆಸಿದ ಒಕ್ಕೂಟದ ಸದಸ್ಯರು, ರೈತ ಪರ ಘೋಷಣೆ ಕೂಗಿದರು. ಈ ವೇಳೆ ಒಕ್ಕೂಟದ ರಾಜ್ಯ ಘಟಕದ ಅಧ್ಯಕ್ಷ ಕುರುಬೂರು ಶಾಂತ ಕುಮಾರ್ ಮಾತನಾಡಿ, ರೈತರ ಕೃಷಿ ಉತ್ಪನ್ನಕ್ಕೆ ಬೆಂಬಲ ಬೆಲೆ ಘೋಷಣೆ, ಎಂಎಸ್‌ಪಿ ದರದಲ್ಲಿ ಉತ್ಪನ್ನಗಳ ಖರೀದಿ, ರೈತರಿಗೆ ಬೆಳೆ ವಿಮೆ, 60 ವರ್ಷ ತುಂಬಿದ ರೈತರಿಗೆ ಪಿಂಚಣಿ ವ್ಯವಸ್ಥೆ ಸೇರಿದಂತೆ ನಾನಾ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಈಗಾಗಲೇ ದೆಹಲಿಯಲ್ಲಿ 300 ದಿನಗಳಿಂದ ದೆಹಲಿಯಲ್ಲಿ ಪ್ರತಿಭಟನೆ ನಡೆಸಲಾಗುತ್ತಿದೆ' ಎಂದರು. ರೈತರ ಹೋರಾಟವನ್ನು ಕೇಂದ್ರ ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ. 15 ದಿನದಿಂದ ಮುಖಂಡರಾದ ಜಗದೀಶ್ ಸಿಂಗ್ ದಲ್ಲೈವಾಲ್ ಉಪವಾಸ ಸತ್ಯಾಗ್ರಹ ಹಮ್ಮಿಕೊಂಡಿದ್ದಾರೆ. ಅವರ ಆರೋಗ್ಯ ಸ್ಥಿತಿ ದಿನೇ ದಿನೇ ಗಂಭೀರವಾಗುತ್ತಿದ್ದು, ಕೇಂದ್ರ ಸರ್ಕಾರ ಯಾವುದೇ ರೈತ ಪರ ಕ್ರಮಗಳನ್ನು ಕೈಗೊಳ್ಳದೇ ಉದಾಸೀನ ಧೋರಣೆ ಅನುಸರಿಸಿದೆ ಎಂದು ಆರೋಪಿಸಿದರು.

**ಸಂಸದರ ಕಚೇರಿ ಎದುರು ಧರಣಿ**

**ಹೋರಾಟವನ್ನು ಹತ್ತಿಕ್ಕುವ ನಿಟ್ಟಿನಲ್ಲಿ ಕೇಂದ್ರ ಬಿಜೆಪಿ ಸರ್ಕಾರ ಗೋಲಿಬಾರ್, ಅಶ್ರುವಾಯು ಪ್ರಯೋಗ ಸಹ ಮಾಡಿದೆ. ಇದು ಪ್ರಜಾಪ್ರಭುತ್ವ, ಸಂವಿಧಾನ ಬಾಹಿರವಾಗಿದೆ. ದೇಶದ ಎಲ್ಲಾ ರಾಜ್ಯಗಳಲ್ಲಿ ಸಂಸದರ ಕಚೇರಿ ಎದುರು ಧರಣಿ ನಡೆಸಿ, ಸಂಸತ್‌ನಲ್ಲಿ ರೈತ ಪರ ಮಾತನಾಡುವಂತೆ ಆಗ್ರಹ ಮಾಡಲಾಗುತ್ತಿದೆ**
**–ಕುರುಬೂರು ಶಾಂತಕುಮಾರ್**

# ಇದು ನಮ್ಮೂರಿನ ಬ್ಯಾಂಕ್ ಎನ್ನುವ ಹೆಮ್ಮೆ ನಮಗಿದೆ: ಸತೀಶ್ ಓಸ್ವಾಲ್

• ಉದಯವಾಹಿನಿ, ಮುದ್ದೇಬಿಹಾಳ

ಶೇರುದಾರರು, ಗ್ರಾಹಕರ ವಿಶ್ವಾಸಗಳಿಸಿರುವ ದಿ ಕರ್ನಾಟಕ ಕೋ ಆಪ್ ಬ್ಯಾಂಕ್ ಮುದ್ದೇಬಿಹಾಳದ ಹಿರಿಯರು ಕಟ್ಟಿ ಬೆಳೆಸಿರುವ ಬಲಿಷ್ಠ ಆರ್ಥಿಕ ಸಂಸ್ಥೆಯಾಗಿ ಜನಮನ್ನಣೆ ಗಳಿಸಿದ್ದು ಇದು ನಮ್ಮೂರಿನ ಬ್ಯಾಂಕು ಎನ್ನುವ ಹೆಮ್ಮೆ ಎಲ್ಲರಲ್ಲಿದೆ. ಇದನ್ನು ಉಳಿಸಿ, ಬೆಳೆಸಿಕೊಂಡು ಹೋಗುವ ಮನೋಭಾವ ಆಡಳಿತ ಮಂಡಳಿಯವರಲ್ಲಿರಬೇಕು. ಹಿರಿಯರ ಮಾತಿಗೆ ಮನ್ನಣೆ ಕೊಟ್ಟು, ಅವರಿಗೆ ಅಗೌರವ ತೋರದೆ ಮುಂಬರುವ ಬ್ಯಾಂಕಿನ ಚುನಾವಣೆ ಎದುರಿಸಲು ಎಲ್ಲರೂ ಸಿದ್ಧರಾಗಬೇಕಿದೆ ಎಂದು ಅಧ್ಯಕ್ಷ ಸತೀಶಕುಮಾರ ಓಸ್ವಾಲ್ ಹೇಳಿದರು.

ಬ್ಯಾಂಕಿನ ಸಭಾ ಭವನದಲ್ಲಿ ಆಡಳಿತ ಮಂಡಳಿಯ ಉಪಾಧ್ಯಕ್ಷರು, ನಿರ್ದೇಶಕರೊಂದಿಗೆ ತಮ್ಮ 5 ವರ್ಷಗಳ ಆಡಳಿತಾವಧಿಯ ಸಾಧನೆ, ಸುಧಾರಣೆಗಳ ಕುರಿತು ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.

ಬ್ಯಾಂಕಿನ ನೂತನ ಆಡಳಿತ ಮಂಡಳಿಗೆ ಚುನಾವಣೆ ಘೋಷಣೆಯಾಗಿದೆ. ಹಿಂದೆ ನಡೆದ ಚುನಾವಣೆಯಲ್ಲಿ ಊರಿನ ಹಿರಿಯರಾದ ದಿ.ಶ್ರೀಂಗಾರಗೌಡ ಪಾಟೀಲ, ದಿ.ಎ.ನಾರಾಯಣಸ್ವಾಮಿ, ಬಸಲಿಂಗಪ್ಪ ಸಾಹುಕಾರ ಮೋಟಗಿ, ಎಂ.ಬಿ.ನಾವದಗಿ, ದಾನಪ್ಪ ನಾಗಠಾಣ, ಬಸನಗೌಡ ಪಾಟೀಲ, ಎಸ್.ಬಿ.ಕರಡ್ಡಿ, ಹಣಮಂತ್ರಾಯ ಬಿರಾದಾರ, ಓಸ್ವಾಲ್ ಮನೆತನದ ಹಿರಿಯರು ಸೇರಿ ಹಲವು ಗಣ್ಯರ ಮುಂದಾಳತ್ವದಲ್ಲಿ ಪೆನಲ್ ರಚನೆಯಾಗಿತ್ತು. ಈ ಚುನಾವಣೆಯಲ್ಲೂ ಹಿರಿಯರ ಮಾರ್ಗದರ್ಶನದಲ್ಲೇ ಪೆನಲ್ ರಚಿಸಿ ಚುನಾವಣೆ ಎದುರಿಸುವುದು ಬ್ಯಾಂಕಿನ ಹಿತದೃಷ್ಟಿಯಿಂದ ಒಳ್ಳೇ ಯದು ಎಂದರು.

ನಿರ್ದೇಶಕರಾದ ಗುರುಲಿಂಗಪ್ಪಗೌಡ ಪಾಟೀಲ, ವೆಂಕನಗೌಡ ಪಾಟೀಲ, ಎಸ್.ಎಸ್.ಮಾಲಗತ್ತಿ, ನಾಗಭೂಷಣ ನಾವದಗಿ ಅವರು ಬ್ಯಾಂಕಿನ ಸೌಲಭ್ಯ, ಸಾಧನೆ, ಆರ್ಥಿಕ ಪ್ರಗತಿ, ಶೇರುದಾರರಿಗೆ 2 ಲಕ್ಷ ರೂವರೆಗೆ ವಿಮೆ ಸೌಲಭ್ಯ, ಲಾಕರ್ ಬೇಡಿಕೆ ಸೇರಿ ಹಲವು ವಿಚಾರಗಳನ್ನು ಹಂಚಿಕೊಂಡರು. ಉಪಾಧ್ಯಕ್ಷ ಸಿ.ಎನ್.ಬಿರಾದಾರ, ನಿರ್ದೇಶಕರಾದ ರಾಜಶೇಖರ ಕರಡ್ಡಿ, ರಮೇಶ ಕಮತ, ಮುತ್ತಣ್ಣ ಕಡಿ, ಪ್ರಭುರಾಜ ಕಲಬುರ್ಗಿ, ಸುನೀಲ ಇಲ್ಲೂರ ಇದ್ದರು. ಪ್ರಧಾನ ವ್ಯವಸ್ಥಾಪಕ ಮಲ್ಲಿಕಾರ್ಜುನ ಬಿದರಕುಂದಿ ಸ್ವಾಗತಿಸಿ ಚುನಾವಣೆಯ ನಿಯಮಗಳ ಮಾಹಿತಿ ನೀಡಿ ಚುನಾವಣೆ ಘೋಷಣೆಯಾದ ತಕ್ಷಣದಿಂದಲೇ ನೀತಿ ಸಂಹಿತೆ ಜಾರಿಯಾಗಲಿದ್ದು ಅಧ್ಯಕ್ಷರು ಮಾತ್ರ ಚುನಾವಣೆ ಮುಗಿದು ಹೊಸ ಅಧ್ಯಕ್ಷರು ಅಧಿಕಾರ ಸ್ವೀಕರಿಸುವವರೆಗೂ ಆ್ಯಕ್ಟಿಂಗ್ ಅಧ್ಯಕ್ಷರಾಗಿ ಮುಂದುವರೆಯುತ್ತಾರೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

**ಹಿರಿಯರ ಮಾತಿಗೆ ಮನ್ನಣೆ**

**ತಮ್ಮ ಅವಧಿಯಲ್ಲಿ ಬ್ಯಾಂಕಿನ ಪ್ರಗತಿಗೆ ಸಹಕಾರ ನೀಡಿದ ಶೇರುದಾರರಿಗೆ, ಗ್ರಾಹಕರಿಗೆ, ಸಿಬ್ಬಂದಿಗೆ ಕೃತಜ್ಞತೆ ಸಲ್ಲಿಸಿದ ಅಧ್ಯಕ್ಷ, ಉಪಾಧ್ಯಕ್ಷರಾದಿಯಾಗಿ ಆಡಳಿತ ಮಂಡಳಿಯ ಎಲ್ಲಾ ನಿರ್ದೇಶಕರು 5 ವರ್ಷದ ಕಾರ್ಯನಿರ್ವಹಣೆಯ ಬಗ್ಗೆ ಸಂತೃಪ್ತಿ ವ್ಯಕ್ತಪಡಿಸಿದರು –ಸತೀಶ್ ಓಸ್ವಾಲ್**

# ಕಾರ್ಮಿಕರ ಅಟ್ಟಾಡಿಸಿದ ಕಾಡಾನೆ: ಐವರಿಗೆ ಗಾಯ

• ಉದಯವಾಹಿನಿ ಬೇಲೂರು

ತಾಲ್ಲೂಕಿನ ಬಿಕ್ಕೋಡು ಗ್ರಾಮದಲ್ಲಿ ಕಾಡಾನೆ ಕಂಡು ಗಾಬರಿಯಿಂದ ದಿಕ್ಕಾ ಪಾಲಾಗಿ ಓಡಿದ ಐವರು ಕಾರ್ಮಿಕರು ಬಿದ್ದು ಗಾಯಗೊಂಡಿದ್ದಾರೆ. ಬಿಕ್ಕೋಡು ಎಸ್ಟೇಟ್‌ನಲ್ಲಿ 8ರ ಸುಮಾರಿಗೆ ಕಾರ್ಮಿಕರು ಕಾಫಿ ಕೊಯ್ದು ಮಾಡುತ್ತಿದ್ದ ವೇಳೆ ಶನಿವಾರ ರೇಡಿಯೊಕಾಲರ್ ಅಳವಡಿಸಿದ್ದ ಬೀಟಮ್ಮ ಗ್ಯಾಂಗ್‌ನ ಹೆಣ್ಣಾನೆಯು ದಿಢೀರನೆ ತೋಟಕ್ಕೆ ಬಂದಿದೆ. ಇದರಿಂದ ಭಯಭೀತರಾದ ಕಾರ್ಮಿಕರು ದಿಕ್ಕಾಪಾಲಾಗಿ ಓಡಿದ್ದು, ಈ ವೇಳೆ ನೆಲಕ್ಕೆ ಬಿದ್ದು ಗಾಯಗೊಂಡಿದ್ದಾರೆ.

ಬೆನ್ನುಮೂಳೆಗೆ ಪೆಟ್ಟು ಬಿದ್ದ ಲಕ್ಷ್ಮಿ ಅವರು ಹಾಸನದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ನೇತ್ರಾವತಿ, ವನಜಾಕ್ಷಿ, ಎಲಿಜಾ ಖಾಜನ್, ಅಕ್ಕಮ್ಮ ಅವರು ಬೇಲೂರಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ದಾಖಲಾಗಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ.

ಶನಿವಾರ ರೇಡಿಯೊ ಕಾಲರ್ ಅಳವಡಿಸಿದ ಈ ಹೆಣ್ಣಾನೆ, ಬೀಟಮ್ಮ ಗ್ಯಾಂಗ್‌ನಿಂದ ಬೇರ್ಪಟ್ಟಿದ್ದು, ಸಿಕ್ಕವರ ಮೇಲೆ ದಾಳಿ ಮಾಡುತ್ತಿದೆ. ತೋಟದಲ್ಲಿ ಆನೆ ಬಂದಿರುವ ಬಗ್ಗೆ ತೋಟದ ಮ್ಯಾನೇಜರ್‌ಗೆ ಅರಣ್ಯ ಇಲಾಖೆಯವರು ಮಾಹಿತಿ ನೀಡಿದ್ದರು. ಆದರೆ, ಮ್ಯಾನೇಜರ್ ಕಾರ್ಮಿಕರಿಗೆ ಮಾಹಿತಿ ನೀಡಿಲ್ಲ. ಇದರಿಂದಾಗಿ ಆನೆಯಿಂದ ಸ್ವಲ್ಪದರಲ್ಲಿಯೇ ಪ್ರಾಣ ಉಳಿಸಿಕೊಂಡೆವು ಎಂದು ಕಾರ್ಮಿಕರು ದೂರಿದರು.

ಸೋಮವಾರ ಮಧ್ಯಾಹ್ನ ಮುವ್ವಾಲ ಗ್ರಾಮದಲ್ಲಿ ಆನೆ ಇರುವಿಕೆಯ ಬಗ್ಗೆ ಧ್ವನಿವರ್ಧಕದ ಮೂಲಕ ಆರ್‌ಎಫ್‌ಒ ಬಿ.ಜಿ.ಯತೀಶ್, ಸಿಬ್ಬಂದಿಯೊಂದಿಗೆ ಜೀಪಿನಲ್ಲಿ ಪ್ರಚಾರ ಮಾಡುತ್ತಿದ್ದರು. ಈ ವೇಳೆ ಒಂಟಿ ಹೆಣ್ಣಾನೆ ಜೀಪಿಗೆ ಅಡ್ಡ ಬಂದು ಅಟ್ಟಿಸಿಕೊಂಡು ಹೋಗಿದೆ. ಜೀಪನ್ನು ಸ್ವಲ್ಪ ದೂರ ಹಿಂದೆ ತೆಗೆದುಕೊಂಡಿದ್ದು, ನಂತರ ಆನೆ ತೋಟದೊಳಗೆ ಹೋಗಿದೆ. ಅದೃಷ್ಟವಶಾತ್ ಯಾವುದೇ ತೊಂದರೆ ಆಗಿಲ್ಲ.

**ಸ್ಥಳದಲ್ಲಿದ್ದ ಇಟಿಎಫ್ ಸಿಬ್ಬಂದಿ ಆನೆಯನ್ನು ಓಡಿಸಿದರು. ಗುಂಪಿನಿಂದ ಬೇರ್ಪಟ್ಟ ಆನೆ, ತನ್ನ ಗುಂಪನ್ನು ಸೇರುವ ತವಕದಲ್ಲಿ ತಿರುಗುತ್ತಿದೆ. ಸೋಮವಾರ ರಾತ್ರಿ ತನ್ನ ಗುಂಪನ್ನು ಸೇರುತ್ತದೆ**
**–ಬಿ.ಜಿ. ಯತೀಶ್, ಆರ್‌ಎಫ್‌ಒ**

# ಚಲಿಸುತ್ತಿದ್ದ ಬಸ್ಸಿನಿಂದ ಕೆಳಗೆ ಬಿದ್ದ ಇಬ್ಬರು ಮಹಿಳೆಯರು

• ಉದಯವಾಹಿನಿ ಬೆಳಗಾವಿ

ಚಲಿಸುತ್ತಿದ್ದ ಬಸ್ಸಿನಿಂದ ಕೆಳಗೆ ಬಿದ್ದ ಇಬ್ಬರು ಮಹಿಳೆ ಯರು ಪವಾಡ ಸದೃಶವಾಗಿ ಬದುಕುಳಿದ ಘಟನೆ ಖಾನಾಪುರದಲ್ಲಿ ನಡೆದಿದೆ. ಬೆಂಗಳೂರು ನಿಡಗಲ್ ಮೂಲದ ಪದ್ಮನಿ ಭುಜಂಗ್ ಕದಂ (65) ಅವರು ಗೋಡೇರಿಗೆ ತೆರಳುತ್ತಿದ್ದ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದಾಗ ಈ ಘಟನೆ ಸಂಭವಿಸಿದೆ.

ರುಮೇವಾಡಿ ಬಳಿ ಬಸ್ ವೇಗವಾಗಿ ಚಲಿಸುತ್ತಿತ್ತು. ಈ ವೇಳೆ ಗುಂಡಿಯಿದ್ದರಿಂದ ಪದ್ಮನಿ ಕಾಲಿನ ಕೆಳಗಿದ್ದ ಪ್ಲೈವುಡ್ ಕೆಳಗೆ ಬಿದ್ದಿದೆ. ಈ ವೇಳೆ ಪದ್ಮನಿ ಹಾಗೂ ಇನ್ನೊಬ್ಬ ಮಹಿಳೆಯು ಕೆಳಗೆ ಬಿದ್ದಿದ್ದಾರೆ. . ಸಿನಿಮಾ ಕ್ರೀಡೆ ಘಟನೆ ವೇಳೆ ಬಸ್ ಸರಿಯಾದ ಸಮಯಕ್ಕೆ ನಿಂತಿದ್ದು ಮಹಿಳೆಯರು ಚಕ್ರದಡಿಗಾಗುವುದರಲ್ಲಿ ಕೂದಲೆಳೆಯಲ್ಲಿ ಪಾರಾಗಿದ್ದಾರೆ. ಆದರೆ ಪದ್ಮನಿ ಅವರ ತಲೆಗೆ ಗಾಯವಾಗಿದ್ದು, ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಘಟನೆಯ ಹಿನ್ನೆಲೆಯಲ್ಲಿ NWKRTC ಬಸ್ ಚಾಲಕ ಹಾಗೂ ಕಂಡಾಕ್ಟರ್‌ನನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಹೈಟೆಕ್ ಎಂಬ ಹಣೆಪಟ್ಟಿ ಹೊಂದಿದ್ದರೂ, ಡಿಪೋ ತನ್ನ ಫ್ಲೀಟ್ ಅನ್ನು ನಿರ್ವಹಿಸಲು ವಿಫಲವಾಗಿದೆ ಎಂದು ಟೀಕಿಸಲಾಗಿದೆ. ಹಲವು ಬಸ್‌ಗಳು ಕಳಪೆ ಸ್ಥಿತಿಯಲ್ಲಿದ್ದು, ದುರಸ್ತಿ, ಕಾರ್ಯದಲ್ಲಿ ಸಾರಿಗೆ ಇಲಾಖೆ ನಿರ್ಲಕ್ಷ್ಯ ವಹಿಸಿದೆ ಎಂದು ಆರೋಪಿಸಿದರು.

# ಜಗತ್ತಿಗೆ ಸಹಕಾರಿ ಸಂಸ್ಥೆಗಳು ಜೀವಾಳ: ರಾಜಶೇಖರ ಅಭಿಮತ

## • ಮುಂಬರುವ ದಿನಗಳಲ್ಲಿ ಯುವ ಜನತೆ ಈ ಸಹಕಾರಿ ಸಂಸ್ಥೆಗಳ ಸದಸ್ಯರಾಗಬೇಕು

• ಉದಯವಾಹಿನಿ, ಸಿಂಧನೂರು

ಈ ಜಗತ್ತಿಗೆ ಅತ್ಯಂತ ಹೆಚ್ಚಿನ ಪ್ರಮಾಣದಲ್ಲಿ ಸಹಕಾರಿ ಸಂಸ್ಥೆಗಳು ಜನಸಾಮಾನ್ಯರಿಗೆ ಅನುಕೂಲಕರವಾದ ಕ್ಷೇತ್ರವಾಗಿದೆ. ಮುಂಬರುವ ದಿನಗಳಲ್ಲಿ ಯುವ ಜನತೆ ಈ ಸಹಕಾರಿ ಸಂಸ್ಥೆಗಳ ಸದಸ್ಯರಾಗಬೇಕೆಂದು ಸಿಂಧು ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘದ ಬಿ.ರಾಜಶೇಖರ ಕರೆ ಕೊಟ್ಟರು.


ನಗರದ ಜ್ಞಾನ ಜ್ಯೋತಿ ಕಾಲೇಜಿನಲ್ಲಿ ನಡೆದ ಜಿಲ್ಲಾ ಹಾಗೂ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ 2024–25 ನೇ ಸಾಲಿನ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಸಸಿಗೆ ನೀರು ಹಾಕುವುದರ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಈ ಸಹಕಾರಿ ಸಂಸ್ಥೆಗಳು ಗ್ರಾಮೀಣ ಮತ್ತು ನಗರ ಪ್ರದೇಶಗಳ ಜೀವಾಳ, ಇಡೀ ದೇಶಕ್ಕೆ ನಂದಿನಿ ಹಾಲು ಉತ್ಪಾದನೆಯನ್ನ ಸಂಗ್ರಹಣೆ ಮಾಡಿ ಹಂಚುತ್ತಿರುವುದು ಸಹಕಾರಿ ಸಂಸ್ಥೆ, ಹಾಗೆ ಅಮೂಲ ಜಗತ್ತಿನ ಶ್ರೇಷ್ಠ ಸಹಕಾರಿ ಸಂಸ್ಥೆಗಳಲ್ಲೊಂದಾಗಿದೆ.

ತಾಲೂಕಿನಲ್ಲಿ ಈ ಹಿಂದೆ ಸಹಕಾರಿ ಸಂಸ್ಥೆಗಳು ಆಗಲಿಕ್ಕೆ ಮನೋಹರ ಮಸ್ಕಿಯವರು ಸಾಕಷ್ಟು ಶ್ರಮಿಸಿದ್ದಾರೆ. ಇಂದು ಅಂದಾಜಿನ ಪ್ರಕಾರ 350 ಕ್ಕೂ ಅಧಿಕ ಸಹಕಾರಿ ಸಂಸ್ಥೆಗಳು ಕೆಲಸ ಮಾಡುತ್ತಿವೆ. ದೇಶದ ಜಿಡಿಪಿಯಲ್ಲಿ ಸಹಕಾರಿ ಸಂಘಗಳ ಪಾತ್ರ ಕೂಡ ಇದೆ ಎಂದರು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡಿದ್ದ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಪಂಪಯ್ಯಸ್ವಾಮಿ ಸಾಲಿಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಇಡೀ ರಾಜ್ಯದಲ್ಲಿ 58 ದತ್ತಿಗಳನ್ನು ಹೊಂದಿದ ಏಕೈಕ ತಾಲ್ಲೂಕು ಸಿಂಧನೂರು ಪಾನ್ ಕಾರ್ಡ್, ಆಧಾರ್ ಕಾರ್ಡ್ ನಂತೆ ಕನ್ನಡಸಾಹಿತ್ಯ ಪರಿಷತ್ತು ಆಜೀವ ಸದಸ್ಯತ್ವ ಕಾರ್ಡ್ ಪಡೆದು ಈ ಮಣ್ಣಿನ ಋಣ ತೀರಿಸುವ ಕೆಲಸ ಆಗಬೇಕಾಗಿದೆ. ಮುಂದಿನ ಕನ್ನಡದ ತೇರು ಎಳೆಯುವವರು ನೀವಾಗಿ ಎಂದು ವಿದ್ಯಾರ್ಥಿ ಯುವ ಜನತೆಗೆ ಕರೆ ನೀಡಿದರು.

ಸೋಮರಡ್ಡಿ ಎಸ್.ಸ್ಮಾರಕ ದತ್ತಿ, ಕೆ.ಸೂಗಪ್ಪ ವಕೀಲರು ಸ್ಮಾರಕ ದತ್ತಿ, ಹಾಗೂ ಅಯ್ಯಪ್ಪಯ್ಯ ಸಾಲಿಮಠ ಸ್ಮಾರಕ ದತ್ತಿ, ದಾನಿಗಳಾದ ಜ್ಞಾನ ಜ್ಯೋತಿ ಕಾಲೇಜಿನ ವಿಷ್ಣುವರ್ಧ ನರಡ್ಡಿ, ಮಂಜುಳಾ ಪಾಟೀಲ್, ವೀರಯ್ಯಸ್ವಾಮಿ ಸಾಲಿಮಠ ದತ್ತಿ ದಾನಿಗಳಾಗಿದ್ದಾರೆ.

ಈ ವೇಳೆ ವೇದಿಕೆ ಮೇಲೆ ಜ್ಞಾನ ಜ್ಯೋತಿ ಕಾಲೇಜಿನ ಪ್ರಾ. ಚಾರ್ಯ ವಿಷ್ಣುವರ್ಧನ್ ರಡ್ಡಿ, ವೀರಯ್ಯಸ್ವಾಮಿ ಸಾಲಿಮಠ, ಲೋಕನಗೌಡಮೇಟಿ, ಚನ್ನಬಸವ ಸಜ್ಜನ ವಕೀಲರು, ಪತ್ರಕರ್ತ ಪಂಪಾಪತಿ ಬೇರ್ಗಿ, ಅಕ್ಷಯ ಆಹಾರ ಜೋಳಿಗೆ ಕಾರ್ಯದರ್ಶಿ ಅಶೋಕ ನಲ್ಲಾ, ಸೇರಿದಂತೆ ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಇಂದಿನ ಕಲಿಯುಗ ಮೊಬೈಲ್ ಯುಗ ಯುವ ಜನತೆ ಈ ದೇಶದ ಮುಂದಿನ ಜವಾಬ್ದಾರಿಯುತ ನಾಗರಿಕರು. ಮೊದಲೆಲ್ಲ 10 ವರ್ಷಕ್ಕೊಮ್ಮೆ ಜನರೇಷನ್ ಬದಲಾವಣೆ ಆಗುತಿತ್ತು ಆದರೆ ಈಗ 5 ವರ್ಷಕ್ಕೊಮ್ಮೆ ಬದಲಾಗುತ್ತಿದೆ ಹಾಗೂ ವರ್ಷದಿಂದ ವರ್ಷಕ್ಕೆ ಬದಲಾವಣೆ ಆಗುತ್ತಲೆ ಇದೆ. ಅಷ್ಟೊಂದು ಸ್ಪೀಡ್ ಇದೆ ಜಮಾನ, ಎಲ್ಲೋ ಒಂದು ಕಡೆ ನಮಗೆ ತಿಳಿಯದ ಹಾಗೆ ಸ್ಟ್ರಕ್ ಆಗುತ್ತಿದ್ದೇವೆ. ಇದನ್ನು ಅರಿತುಕೊಂಡು ಯುವ ಸಮೂಹ ನಡೆಯಬೇಕು**
**–ಬಿ.ರಾಜಶೇಖರ, ಸಿಂಧು ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘದ**

**ಜಗತ್ತಿನ ಶ್ರೇಷ್ಠ ಸಹಕಾರಿ ಸಂಸ್ಥೆ**

# ವಿದ್ಯುತ್ ಮೆಟಲ್ ಬಾಕ್ಸ್ ಮಾಯ

• ಉದಯವಾಹಿನಿ ಶಿವಮೊಗ್ಗ

ಇಲ್ಲಿನ ರವೀಂದ್ರ ನಗರದ 100 ಅಡಿ ರಸ್ತೆಯ ನಡುವೆ ಬೀದಿ ದೀಪಗಳಿಗೆ ಅಳವಡಿಸಿದ್ದ ವಿದ್ಯುತ್ ಮೆಟಲ್ ಬಾಕ್ಸಗಳನ್ನು ಕದ್ದಿರುವ ಪರಿಣಾಮ ವಿದ್ಯುತ್ ಉಪಕರಣಗಳು ತೆರೆದುಕೊಂಡ ರೀತಿಯಲ್ಲಿವೆ. 20 ಈ ಚಿಕ್ಕ ಮಕ್ಕಳು ಅಥವಾ ಯಾವುದಾದರೂ ಪ್ರಾಣಿಗಳು ಸ್ಪರ್ಶಿಸಿದರೆ ಅಪಾಯ ಕಟ್ಟಿಟ್ಟಬುತ್ತಿ ಎಂಬ ಸ್ಥಿತಿ ಇದೆ. ವಾಹನ ಸವಾರರು ಈ ರಸ್ತೆಯಲ್ಲಿ ನಿತ್ಯ ಆತಂಕದಿಂದ ಸಂಚರಿಸುವಂತಾಗಿದೆ. ಸ್ವಲ್ಪ ಮೈಮರೆತರೆ ಜೀವಕ್ಕೆ ಆಪತ್ತು ಎದುರಾಗುವ ಸಂಭವ ಹೆಚ್ಚು. ಈ ರಸ್ತೆಯುದ್ದಕ್ಕೂ ಅಲ್ಲಲ್ಲಿ ಬೀದಿದೀಪಗಳಿಗೆ ವಿದ್ಯುತ್ ಮೆಟಲ್ ಬಾಕ್ಸ್‌ಗಳನ್ನು ಸ್ಮಾರ್ಟ್ ಸಿಟಿ ಯೋಜನೆಯಡಿ ಅಳವಡಿಸಲಾಗಿತ್ತು. ಆದರೆ, ಅವುಗಳನ್ನು ಕಳವು ಮಾಡಿರುವ ಕಾರಣ ಸುರಕ್ಷತೆ ಇಲ್ಲದೇ ಅಪಾಯ ಎದುರಾಗಿದೆ. ಒಂದು ರೀತಿಯಲ್ಲಿ ಇದು ಪಾಲಿಕೆಯ ಅಧಿಕಾರಿಗಳಿಗೂ ತಲೆನೋವಾಗಿ ಪರಿಣಮಿಸಿದೆ.

ಈ ರಸ್ತೆಯಲ್ಲಿ ನಿತ್ಯ ಹಲವು ವಾಹನಗಳು, ಪಾದಚಾರಿಗಳು ಸಂಚರಿಸುತ್ತಾರೆ. ವಿದ್ಯುತ್ ಪ್ರವಹಿಸುವ ವೈರ್‌ಗಳು ಹೊರಗೆ ಬಿದ್ದಿವೆ. ಚಿಕ್ಕಮಕ್ಕಳು, ಮಹಿಳೆಯರು, ವಯೋವೃದ್ಧರು ಸಂಚರಿಸುವಾಗ ಆಕಸ್ಮಿಕವಾಗಿ ಕೈ ತಗುಲಿದರೆ, ವಿದ್ಯುತ್ ಆಘಾತದ ಸಾಧ್ಯತೆಯಿದೆ. ಜನರಿಗೆ ತೊಂದರೆ ಆಗಬಾರದು ಎಂಬ ಉದ್ದೇಶದಿಂದ ಸುರಕ್ಷತೆಗೆ ಆದ್ಯತೆ ನೀಡಿ ಸಾಕಷ್ಟು ಹಣ ಖರ್ಚು ಮಾಡಿ ವಿದ್ಯುತ್ ಮೆಟಲ್ ಬಾಕ್ಸ್‌ಗಳನ್ನು ಅಳವಡಿಸಲಾಗುತ್ತದೆ. ಆದರೆ, ಉದ್ದೇಶವೇ ಈಡೇರುತ್ತಿಲ್ಲ. ಕಳ್ಳರು ಮೆಟಲ್ ಬಾಕ್ಸ್‌ಗಳನ್ನು ಕದಿಯುವುದಕ್ಕೆ ಯಾವ ರೀತಿ ಅಂಕುಶ ಹಾಕಬೇಕು ಎಂಬುದು ಪಾಲಿಕೆ ಅಧಿಕಾರಿಗಳಿಗೆ ಪ್ರಶ್ನೆಯಾಗಿ ಕಾಡುತ್ತಿದೆ ಎಂದು ಹೇಳಲಾಗಿದೆ. ಬೀದಿನಾಯಿಗಳು, ಸಾಕು ನಾಯಿಗಳು ಹಾಗೂ ಬಿಡಾಡಿ ದನಗಳು, ಸಾಕಿದ ಜಾನುವಾರುಗಳು ಈ ದಾರಿಯಲ್ಲಿ ಓಡಾಡುತ್ತವೆ.


ದಾರಿಹೋಕರಿಗೆ ಅಪಾಯ
ಉದಯವಾಹಿನಿ ಚಿತ್ರ

### ಜೀವಕ್ಕೂ ಆಪತ್ತು

**ಒಂದೊಮ್ಮೆ ಈ ವೈರ್ ಸ್ಪರ್ಶಿಸಿದರೆ ಅವುಗಳ ಜೀವಕ್ಕೂ ಆಪತ್ತು ಎದುರಾಗುವಲ್ಲಿ ಸಂಶಯವಿಲ್ಲ. ಅಪಾಯ ಸಂಭವಿಸುವ ಮುನ್ನ ಸಂಬಂಧಿಸಿದವರು ಕ್ರಮ ಕೈಗೊಳ್ಳಬೇಕು ಎಂದು ಬಡಾವಣೆ ನಿವಾಸಿಗಳು ಆಗ್ರಹಿಸಿದ್ದಾರೆ.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ತರಬಹುದು. ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ಪೋಷಕರನ್ನು ಸಂತುಷ್ಟಪಡಿಸುವುದು ನಿಮಗೆ ಕಷ್ಟವೆನಿಸಬಹುದು.

**ವೃಷಭ** ನಿಮ್ಮ ಒರಟು ವರ್ತನೆ ನಿಮ್ಮ ಪತ್ನಿಯೊಂದಿಗಿನ ಸಂಬಂಧವನ್ನು ಹಾಳು ಮಾಡಬಹುದು. ಏನಾದರೂ ಬಾಲಿಶವಾದದ್ದನ್ನು ಮಾಡುವ ಮೊದಲು ನಿಮ್ಮ ವರ್ತನೆಯ ಪರಿಣಾಮದ ಬಗ್ಗೆ ಆಲೋಚಿಸಿ.

**ಮಿಥುನ** ಇಂದು ನಿಮ್ಮ ಕೆಲಸದಲ್ಲಿ ನಿಮ್ಮ ಉತ್ತಮ ಕಾರ್ಯಗಳಿಗಾಗಿ ನಿಮ್ಮನ್ನು ಸನ್ಮಾನಿಸಲಾಗುವುದು. ಸಂತಸದ ಪ್ರಯಾಣ ತೃಪ್ತಿಕರವಾಗಿರುತ್ತದೆ. ನಿಮ್ಮ ಸಂಗಾತಿಯ ಆರೋಗ್ಯ ಸ್ವಲ್ಪ ಬಿಗಡಾಯಿಸಬಹುದು.

**ಕರ್ಕಾಟಕ** ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚು ಮಾಡಬಹುದು ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ.

**ಸಿಂಹ** ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು, ಇದು ಜೀವನದ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ.

**ಕನ್ಯಾ** ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ ಮತ್ತು ನೀವು ಇದನ್ನು ಬಾಕಿಯಿರುವ ಕೆಲಸಗಳನ್ನು ಪೂರ್ಣಗೊಳಿಸಲು ಬಳಸಬೇಕು. ಹಣಕಾಸು ಖಂಡಿತವಾಗಿಯೂ ವೃದ್ಧಿಯಾಗುತ್ತದೆ.

**ತುಲಾ** ಸಣ್ಣ ಸಣ್ಣ ವಿಷಯಗಳು ನಿಮ್ಮ ಮನಸ್ಸು ಕೆಡಿಸಲು ಬಿಡಬೇಡಿ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ.

**ವೃಶ್ಚಿಕ** ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯದ್ದಾಗಲೇ ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ದೊಡ್ಡ ಯೋಜನೆಗಳನ್ನು ಮತ್ತು ಕಲ್ಪನೆಗಳನ್ನು ಯಾರಾದರೂ ನಿಮ್ಮ ಗಮನಸೆಳೆಯುತ್ತಾರೆ.

**ಧನಸ್ಸು** ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗ್ಗೆ ಜಾಗರೂಕರಾಗಿರಿ. ಈ ರಾಶಿಚಕ್ರದ ವ್ಯಾಪಾರಿಗಳಿಗೆ ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ.

**ಮಕರ** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು.

**ಕುಂಭ** ಸೃಜನಶೀಲ ಕೆಲಸ ನಿಮ್ಮನ್ನು ಶಾಂತವಾಗಿರಿಸುತ್ತವೆ. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ನೀವು ಪ್ರೀತಿಸುವವರಿಂದ ಉಡುಗೊರೆಗಳನ್ನು ಪಡೆಯಲು ಹಾಗೂ ನೀಡಲು ಪವಿತ್ರವಾದ ದಿನ.

**ಮೀನ** ಪ್ರಭಾವಿ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ. ನಿಮ್ಮ ಪ್ರೀತಿಪಾತ್ರರಿಂದ ಕರೆ ಪಡೆಯುತ್ತೀರಿ ಹಾಗೂ ಇದು ನಿಮಗೆ ರೋಮಾಂಚಕ ದಿನವಾಗಿರುತ್ತದೆ.

# ತಪ್ಪಿತಸ್ಥನನ್ನೂ ಮಾನವೀಯ ದೃಷ್ಟಿಯಿಂದ ನೋಡುವ ವ್ಯವಸ್ಥೆ ದೇಶದಲ್ಲಿದೆ

## ನ್ಯಾಯಾಲಯದಲ್ಲಿ ಪ್ರತಿ ಸಂದರ್ಭದಲ್ಲಿ ಮಾನವ ಹಕ್ಕುಗಳ ರಕ್ಷಣೆಗೆ ಪ್ರಯತ್ನ ನಡೆಯುತ್ತಲೇ ಇರುತ್ತದೆ: ನ್ಯಾ.ನಾಯಕ್

• ಉದಯವಾಹಿನಿ ಶಿವಮೊಗ್ಗ

ಓರ್ವ ವ್ಯಕ್ತಿ ಅಪರಾಧ ಕೃತ್ಯವೆಸಗಿ, ತಪ್ಪಿತಸ್ಥ ಎಂದು ಸಾಬೀತಾಗಿ ಜೈಲು ಸೇರಿದ ನಂತರವೂ ಆತನನ್ನು ಮಾನವೀಯ ದೃಷ್ಟಿಯಿಂದ ನೋಡಿಕೊಳ್ಳುವ ವ್ಯವಸ್ಥೆ ನಮ್ಮ ದೇಶದಲ್ಲಿದ್ದು, ಇದು ಮಾನವ ಹಕ್ಕುಗಳ ಮೌಲ್ಯದ ಒಂದು ಉದಾಹರಣೆಯಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಮಂಜುನಾಥ ನಾಯಕ್ ತಿಳಿಸಿದರು.

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸ್ಥಳೀಯ ಸರ್ಕಾರೇತರ ಸಂಸ್ಥೆಗಳಾದ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಸಮಿತಿ ಹಾಗೂ ಇತರೆ ಸಂಸ್ಥೆಗಳ ಸಹಯೋಗದಲ್ಲಿ ಮಂಗಳವಾರ ಜಿ.ಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ವಿಶ್ವ ಮಾನವ ಹಕ್ಕುಗಳ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಿಶ್ವ ಸಂಸ್ಥೆ 1948 ಡಿ.10 ರಂದು ಮಾನವ ಹಕ್ಕುಗಳನ್ನು ಸಾರ್ವತ್ರಿಕವಾಗಿ ಘೋಷಣೆ ಮಾಡಿದ ದಿನ. ಈ ದಿನವನ್ನು ಮಾನವ ಹಕ್ಕುಗಳ ದಿನಾಚರಣೆಯನ್ನಾಗಿ ಆಚರಿಸುವ ಮೂಲಕ ಅರಿವು ಮೂಡಿಸಲಾಗುತ್ತಿದೆ. 2011 ರ ನವೆಂಬರ್ ನ. 26 ರಂದು ಓರ್ವ ಉಗ್ರ, ಮುಂಬೈ ಮೇಲೆ ದಾಳಿ ನಡೆಸಿ ಸಾವು, ನೋವಿಗೆ ಕಾರಣರಾಗಿದ್ದರೂ, ಆತನಿಗೆ ಒಬ್ಬ ವಕೀಲರನ್ನು ನೇಮಿಸಿ, ಕಾನೂನು ಪ್ರಕ್ರಿಯೆ ಒಳಪಡಿಸಿ ತಪ್ಪಿತಸ್ಥ ಎಂದು ಘೋಷಣೆಯಾದ ಮೇಲೂ ಜೈಲಿನಲ್ಲಿಯೂ ಮಾನವೀಯತೆಯಿಂದ ನೋಡಿಕೊಳ್ಳಲಾಯಿತು. ಇದು ಮಾನವ ಹಕ್ಕುಗಳ ಮೌಲ್ಯಕ್ಕಿರುವ ಒಂದು ಉದಾಹರಣೆ. ಇದು ನಮ್ಮ ದೇಶದಲ್ಲಿರುವ ಮಾನವ ಹಕ್ಕುಗಳಿಗಿರುವ ಪ್ರಾಮುಖ್ಯತೆ ತೋರುತ್ತದೆ.

ವಿಶ್ವ ಮಾನವ ಹಕ್ಕುಗಳ ದಿನಾಚರಣೆ


ಉದಯವಾಹಿನಿ ಚಿತ್ರ

ನ್ಯಾಯಾಲಯದಲ್ಲಿ ಪ್ರತಿ ಸಂದರ್ಭದಲ್ಲಿ ಮಾನವ ಹಕ್ಕುಗಳ ರಕ್ಷಣೆಗೆ ಪ್ರಯತ್ನ ನಡೆಯುತ್ತಲೇ ಇರುತ್ತದೆ ಮತ್ತು ಸಫಲ ಕೂಡ ಆಗಿದೆ. ಹಾಗೂ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರವು ಶೋಷಿತ ವರ್ಗದವರಿಗೆ, ಜೈಲಿನ ಖೈದಿಗಳ ರಕ್ಷಣೆಗೆ ಉಚಿತವಾಗಿ ಕಾನೂನಿನ ನೆರವು ನೀಡುತ್ತದೆ. ಮಾನವ ಹಕ್ಕುಗಳ ರಕ್ಷಣೆಯಲ್ಲಿ ಸರ್ಕಾರದಂತೆಯೇ ಎನ್‌ಜಿಒ ಪಾತ್ರವೂ ಬಹಳ ದೊಡ್ಡದಿದೆ. ಮಾನವ ಹಕ್ಕುಗಳ ಸಮಿತಿಗಳೂ ಕಾರ್ಯ ನಿರ್ವಹಿಸುತ್ತಿದ್ದು ಸಮಾಜದ ಕಟ್ಟಕಡೆಯ ವ್ಯಕ್ತಿಯ ಹಕ್ಕುಗಳ ಉಲ್ಲಂಘನೆ ನಿಮ್ಮ ಗಮನಕ್ಕೆ ಬರುತ್ತದೆ ಆದ್ದರಿಂದ ನೀವು ಮಾನವ ಹಕ್ಕುಗಳ ರಕ್ಷಣೆಯಲ್ಲಿ ತೊಡಗಿಸಿಕೊಳ್ಳಬೇಕಿದೆ. ಮಾನವ ಹಕ್ಕುಗಳ ರಕ್ಷಣೆಗೆ ಸಾಕಷ್ಟು ಕಾನೂನುಗಳಿದ್ದು ಅದನ್ನು ಜಾರಿಗೊಳಿಸುವ ಇಚ್ಛಾಶಕ್ತಿ ಎಲ್ಲರಲ್ಲಿ ಇರಬೇಕೆಂದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ್ ಎಂ ಎಸ್ ಮಾತನಾಡಿ, ನಮ್ಮ ದೇಶದಲ್ಲಿ ಅತ್ಯಂತ ಕ್ರೂರ ಕೃತ್ಯ ಮಾಡಿದವರು, ತಪ್ಪಿತಸ್ಥರ ಹಕ್ಕನ್ನೂ ರಕ್ಷಿಸುವ ವ್ಯವಸ್ಥೆ ಇದ್ದು, ಇದು ಮಾನವ ಹಕ್ಕುಳಗ ರಕ್ಷಣೆಗೆ ಒಂದು ಉದಾಹರಣೆಯಾಗಿದೆ.

**ಪಕ್ಷಗಾರರು ಮಾತಾಡಿಕೊಳ್ಳಬೇಕು**

**ಬಹುತೇಕ ಪ್ರಕರಣಗಳಲ್ಲಿ ಪಕ್ಷಗಾರರು ಮಾತು ಬಿಟ್ಟು ಹಗೆ, ದ್ವೇಷ ಸಾಧಿಸುತ್ತಾರೆ. ಆಗ ಸಿವಿಲ್ ಪ್ರಕರಣಗಳು ಕ್ರಿಮಿನಲ್ ಪ್ರಕರಣಗಳಾಗುತ್ತವೆ. ದ್ವೇಷ ಮುಂದುವರೆಸುತ್ತಾ ಪ್ರಕರಣಗಳು 20 ರಿಂದ 25 ವರ್ಷಗಳವರೆಗೆ ಮುಂದುವರೆಯುತ್ತಲೇ ಇರುತ್ತವೆ. ಆಮೇಲೆ ಅವರ ಮಕ್ಕಳು ರಾಜೀ ಸಂಧಾನಕ್ಕೆ ಬರುತ್ತಾರೆ. ಆದ್ದರಿಂದ ಯಾವುದೇ ಸಿವಿಲ್ ಪ್ರಕರಣವನ್ನು ಯಾರೇ ದಾಖಲಿಸಿದರೂ ಸಹ ಪಕ್ಷಗಾರರು ಮಾತಾಡಿಕೊಳ್ಳಬೇಕು. ಮಧ್ಯಸ್ಥಿಕೆ ಕೇಂದ್ರಕ್ಕೆ ಭೇಟಿ ಮಾಡಿ ಪರಿಹಾರ ಕಂಡುಕೊಳ್ಳಬಹುದು.**

**ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ಅವರ ಮಕ್ಕಳಿಗೆ ಅಧಿಕಾರ ನೀಡಬೇಕು. ದ್ವೇಷ ಸಾಧನೆ ಮಾಡಿದರೆ ಇತರರ ಹಕ್ಕನ್ನು ಉಲ್ಲಂಘನೆ ಮಾಡಿದಂತೆ ಆಗುತ್ತದೆ ಎಂದ ಅವರು ಮಾನವ ಹಕ್ಕು ಕಾಯಿದೆಯ ವಿವಿಧ ಪ್ರಕರಣಗಳಲ್ಲಿ ನೊಂದ ವ್ಯಕ್ತಿಗಳಿಗೆ ಪರಿಹಾರ ನೀಡಲಾಗುತ್ತದೆ ಎಂದು ತಿಳಿಸಿದರು**
**-ನ್ಯಾ.ಮಂಜುನಾಥ ನಾಯಕ್**


# ಮಕ್ಕಳಿಗೆ ಬಾಲ್ಯದಿಂದಲೇ ಯಾವುದೇ ಕಾಯಿಲೆಗಳು ಬರದಂತೆ ಮುಂಜಾಗ್ರತೆ ವಹಿಸಿ: ಶಂಕರ ರಾಠೋಡ್

• ಉದಯವಾಹಿನಿ, ಚಿಂಚೋಳಿ

ಪಾಲಕರು ವಿದ್ಯಾರ್ಥಿ ಮಕ್ಕಳಿಗೆ ಯಾವುದೇ ಕಾಯಿಲೆಗಳು ಬರದಂತೆ ಮುಂಜಾಗ್ರತಾ ಕ್ರಮ ವಹಿಸಿ ವೈದ್ಯರ ಸಲಹೆ ಸೂಚನೆ ಪಡೆದುಕೊಳ್ಳಬೇಕು ಎಂದು ತಾಪಂ.ಇಓ ಶಂಕರ ರಾಠೋಡ್ ಸಲಹೆ ನೀಡಿದರು.

ಪಟ್ಟಣದ ಸರಕಾರಿ ಕನ್ಯಾ ಪ್ರೌಢ ಶಾಲೆಯಲ್ಲಿ ತಾಲ್ಲೂಕಾ ಆರೋಗ್ಯ ಇಲಾಖೆ ವತಿಯಿಂದ ಹಮ್ಮಿಕೊಂಡ ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಉಧ್ಘಾಟಿಸಿ ಮಾತನಾಡಿದ ಅವರು,ಇಂದಿನಿಂದ ಡಿ.09 ರಿಂದ ಡಿ.16 ರವರೆಗೆ ಕಾಯಿಲೆಗಳು ಬರದಂತೆ ಮುಂಜಾಗ್ರತಾ ಕ್ರಮವಾಗಿ ಜಂತುಹುಳ ಮಾತ್ರೆಗಳು ವಿತರಿಸಿ ಆರೋಗ್ಯ ಇಲಾಖೆ ಸಿಬ್ಬಂದಿಗಳು ಆಗಮಿಸಿ ನುಂಗಿಸಲಾಗುವುದು ಎಂದರು.

ತಾಲ್ಲೂಕಾ ವೈದ್ಯಾಧಿಕಾರಿ ಡಾ.ಮಹ್ಮದ್ ಗಫಾರ್ ಮಾತನಾಡಿದ ಅವರು,ತಾಲ್ಲೂಕಿನಾದ್ಯಾಂತ ಅಂಗನವಾಡಿ ಕೇಂದ್ರಗಳಲ್ಲಿ 1 ರಿಂದ 5 ವರ್ಷದ ಮಕ್ಕಳು 32,471 ಹಾಗೂ ಶಾಲಾ ಕಾಲೇಜುಗಳಲ್ಲಿಯ 6 ರಿಂದ 19 ವರ್ಷದ ಮಕ್ಕಳು 48,605 ಒಟ್ಟು 81,076 ಮಕ್ಕಳಿಗೆ ಅಲ್ಬೆಂಡೋಜೋಲ್ ಮಾತ್ರೆಗಳನ್ನು ವಿತರಿಸಲಾಗುವುದು. ಮಕ್ಕಳು ಭವಿಷ್ಯದ ದೇಶದ ಮಾನವ ಸಂಪತ್ತು ಬಾಲ್ಯದಿಂದಲೆ ಮಕ್ಕಳಿಗೆ ವಿವಿದ ಕಾಯಿಲೆಗಳು ಬರದಂತೆ ಮುಂಜಾಗ್ರತೆ ಕ್ರಮ ವಹಿಸಿ ಮಕ್ಕಳಿಗೆ ಹೆಚ್ಚು ಭಾದಿಸುವ ಜಂತು ಹುಳವನ್ನು ನಾಶ ಮಾಡಲು ಒಂದರಿಂದ 2 ವರ್ಷದ ಮಗುವಿಗೆ ಅರ್ಧ ಮಾತ್ರೆ, ಹಾಗೂ 2-ರಿಂದ 19 ವರ್ಷದ ವರೆಗಿನ ಮಕ್ಕಳು ಹಾಗೂ ಯುವಕರಿಗೆ ಒಂದು ಮಾತ್ರೆಯನ್ನು ತೆಗೆದುಕೊಳ್ಳಬೇಕು. ಕ್ಷೇತ್ರ ಶಿಕ್ಷಣಾಧಿಕಾರಿಗಳು ಲಕ್ಷ್ಮಯ್ಯ, ಬಿ.ಆರ್.ಸಿ ನಾಗಶೇಟ್ಟಿ ಭದ್ರಶೇಟ್ಟಿ, ಅಕ್ಷರ ದಾಸೋಹ ಅಧಿಕಾರಿ ಜಯಪ್ಪ ಚಾಪಲ್, ಆರೋಗ್ಯ ಶಿಕ್ಷಣಾಧಿಕಾರಿಗಳು,ತಾಲ್ಲೂಕ ಹಿರಿಯ ಆರೋಗ್ಯ ನಿರಕ್ಷಣಾಧಿಕಾರಿಗಳು, ಹಿರಿಯ ಆರೋಗ್ಯ ಸುರಕ್ಷಣಾಧಿಕಾರಿ, ಆಶಾ ಮೆಂಟರ್,ಆರ್.ಕೆ.ಎಸ್.ಕೆ ಸಮಾಲೋಚಕರು, ಕಿರಿಯ ನಿರೀಕ್ಷಣಾಧಿಕಾರಿಗಳು, ಮುಖ್ಯಗುರುಗಳು, ಅಂಗನವಾಡಿ ಮೇಲ್ವಿಚಾರಕರು, ಶಿಕ್ಷಕ ವೃಂದದವರು, ಆರೋಗ್ಯ ಇಲಾಖೆಯ ಸಿಬ್ಬಂದಿಗಳಿದ್ದರು.


ಉದಯವಾಹಿನಿ ಚಿತ್ರ

**ಅದ್ದರಿಂದ ಮಕ್ಕಳು ಬಲಗಾಲಿನಿಂದ ಹೊರಗಡೆ ನಡೆಯಬಾರದು,ಶೌಚಾಲಯಕ್ಕೆ ತೆರಳಿ ಬಂದ ನಂತರ ಕೈಗಳನ್ನು ಸಾಬೂನ್ ನಿಂದ ಸ್ವಚ್ಛವಾಗಿ ಕೈ ತೊಳೆದುಕೊಳ್ಳಬೇಕು,ಊಟಕ್ಕಿಂತ ಮೊದಲು ಕೈಕಾಲುಗಳನ್ನು ಸ್ವಚ್ಛವಾಗಿ ತೊಳೆದುಕೊಳ್ಳಬೇಕು ಉಗುರುಗಳು ಬೆಳೆಯದಂತೆ ಆಗಾಗ ಕತ್ತರಿಸಿಕೊಳ್ಳಬೇಕು ಸ್ವಚ್ಛವಾದ ನೀರನ್ನು ಕುಡಿಯುವುದು ಮತ್ತು ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿ ಇಟ್ಟಿಕೊಳ್ಳುವಂತೆ ಹೇಳಿದರು**
**-ಡಾ ಮಹ್ಮದ್ ಗಫಾರ್, ವೈದ್ಯಾಧಿಕಾರಿ**

# ಮಕ್ಕಳಿಗೆ ಜೀವ ರಕ್ಷಕ ಕಲೆಗಳನ್ನು ಕಲಿಸಿ: ಈಶ್ವರ ಮಲ್ಪೆ

• ಉದಯವಾಹಿನಿ, ಪುತ್ತೂರು

ಮಕ್ಕಳ ಕೈಗೆ ಮೊಬೈಲ್ ಕೊಟ್ಟು ಅವರ ಜೀವನವನ್ನು ನಾವು ಹಾಳು ಮಾಡುತ್ತಿದ್ದೇವೆ.

ಮಕ್ಕಳಿಗೆ ಮೊಬೈಲ್ ಕೊಡುವ ಬದಲು ಅವರಿಗೆ ಈಜು, ಕರಾಟೆ ಮೊದಲಾದ ಜೀವ ರಕ್ಷಕ ಕಲೆಗಳನ್ನು ಕಲಿಸಿಕೊಡುವುದು ಇಂದಿನ ಅಗತ್ಯವಾಗಿದೆ' ಎಂದು ಮುಳುಗುತಜ್ಞ ಈಶ್ವರ್ ಮಲ್ಪೆ ಹೇಳಿದರು.

ಜಿಲ್ಲೆ ಪುತ್ತೂರು ತಾಲ್ಲೂಕಿನ ಅರಿಯಡ್ಕ ಗ್ರಾಮದ ಮಜ್ಜಾರಡ್ಕದ ವಿಷ್ಣು ಯುವಶಕ್ತಿ ಬಳಗದ ಆಶ್ರಯದಲ್ಲಿ ನಡೆದ 7ನೇ ವರ್ಷದ ಕೆಸರುಡೊಂಜಿ ದಿನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ಬೆಂಗಳೂರು ಗ್ರಾಮಾಂತರ ಬಹಳಷ್ಟು ಮಕ್ಕಳಿಗೆ ಈಜು ಗೊತ್ತಿಲ್ಲದೆ ನೀರಿನಲ್ಲಿ ಮುಳುಗಿ ಜೀವ ಕಳೆದುಕೊಳ್ಳುತ್ತಿರುವ ಘಟನೆಗಳು ನಡೆಯುತ್ತಿದ್ದು, ಮಕ್ಕಳಿಗೆ ಈಜು ಕಲಿಸುವ ಅಗತ್ಯ ಸಾಕಷ್ಟಿದೆ ಎಂದು ಅವರು ಹೇಳಿದರು. ಬೀದರ್ ಸಂಘಟನೆಯ ಅಧ್ಯಕ್ಷ ಸದಾಶಿವ ಮಣಿಯಾಣಿ ಅಧ್ಯಕ್ಷತೆ ವಹಿಸಿದ್ದರು. ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ದಯಾನಂದ ಶೆಟ್ಟಿ ಉಜುರುಮಾರು, ಸಂಪ್ಯ ಠಾಣೆಯ ಹೆಡ್ ಕಾನ್‌ಸ್ಟೇಬಲ್ ಪ್ರವೀಣ್ ರೈ ನಡುಕೂಟೇಲು, ಉದ್ಯಮಿ ಜನಾರ್ದನ ಪೂಜಾರಿ ಪದಡ್ಕ, ಆರೋಗ್ಯ ಸುರಕ್ಷಾ ಅಧಿಕಾರಿ ನವ್ಯಾ, ಬಿಜೆಪಿ ಕಾರ್ಯದರ್ಶಿ ಭರಾಜ್ ಶೆಟ್ಟಿ ಮತ್ತಿತರರು ಇದ್ದರು. ಈಶ್ವರ್ ಮಲ್ಪೆ, ಸಮಾಜ ಸೇವಕ ಚಿಂತು ಸುಳ್ಯ, ಪುತ್ತೂರಿನ ಹಿಂದೂ ರುದ್ರಭೂಮಿಯ ಸೇವಕ ಪಿ.ಬಿ.ಸತೀಶ್ ಮಡಿವಾಳ, ಮೋಹನ್ ದರ್ಬೆತ್ತಡ್ಕ, ಉದ್ಯಮಿ ಶರತ್ ರೈ ಮತ್ತು ಶ್ರೀಧರ್ ಶೆಟ್ಟಿ ಅವರನ್ನು ಗೌರವಿಸಲಾಯಿತು.

ಸಂಘಟನೆಯ 2024ನೇ ಸಾಲಿನ ಯುವ ಪ್ರಶಸ್ತಿಯನ್ನು ವಿನೋದ್ ಸ್ವಾಮಿನಗರ ಅವರಿಗೆ ಪ್ರದಾನ ಮಾಡಲಾಯಿತು.


ಉದಯವಾಹಿನಿ ಚಿತ್ರ

# ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರ ನಿಧನಕ್ಕೆ ಸಂತಾಪ

• ಉದಯವಾಹಿನಿ, ಯಾದಗಿರಿ

ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಅಗಲಿಕೆಗೆ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಎಸ್.ಎಂ.ಕೃಷ್ಣ ಅವರು ಕರ್ನಾಟಕ ಕಂಡಂತ ಮೇರು ವ್ಯಕ್ತಿತ್ವದ ಅಪ್ರತಿಮಾ ರಾಜಕಾರಣಿ, ದೂರದೃಷ್ಟಿಯುಳ್ಳ ಮುತ್ಸದ್ಧಿ ನಾಯಕನನ್ನು ಕಳೆದುಕೊಂಡಿರುವುದು ಅತೀವ ನೋವನ್ನುಂಟು ಮಾಡಿದೆ.

ಅವರ ಅಗಲಿಕೆ ರಾಜ್ಯಕ್ಕೆ ತುಂಬಲಾಗದ ನಷ್ಟ. ರಾಜ್ಯದ ಉಪಮುಖ್ಯಮಂತ್ರಿಗಳಾಗಿ, ಮುಖ್ಯಮಂತ್ರಿಗಳಾಗಿ, ಮಹಾರಾಷ್ಟ್ರ ರಾಜ್ಯಪಾಲರಾಗಿ, ಕೇಂದ್ರದ ಸಚಿವರಾಗಿ ಅವರು ಕೈಗೊಂಡ ಜನಪರ ಕಾರ್ಯಗಳು ಅನನ್ಯ. ಐಟಿ-ಬಿಟಿ ಕ್ಷೇತ್ರದಲ್ಲಿ ಕರ್ನಾಟಕವನ್ನು, ಪ್ರಮುಖವಾಗಿ ಬೆಂಗಳೂರು ನಗರವನ್ನು ವಿಶ್ವಕ್ಕೆ ಪರಿಚಯಿಸಿದರು. ಈ ಮೂಲಕ ರಾಜ್ಯದ ಲಕ್ಷಾಂತರ ಯುವಕರಿಗೆ ಉದ್ಯೋಗ ಕಲ್ಪಿಸಿದರು. ರಾಜ್ಯದ ಅಭಿವೃದ್ಧಿಯ ಬಗ್ಗೆ ದೂರದೃಷ್ಟಿ ಹೊಂದಿದ್ದ ನಾಯಕರಾಗಿದ್ದರು. ಎಸ್.ಎಂ.ಕೃಷ್ಣ ಅವರು ರಾಜ್ಯದ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ನನ್ನ ಮೇಲಿನ ವಿಶ್ವಾಸ ಮತ್ತು ಭರವಸೆಯಿಂದಾಗಿ ಅವರ ಸಂಪುಟದಲ್ಲಿ ಏಳು ಖಾತೆಗಳ ಜವಾಬ್ದಾರಿಯನ್ನು ನನಗೆ ವಹಿಸಿದ್ದರು. ಏಳು ಖಾತೆಗಳನ್ನು ಯಶಸ್ವಿಗಾಗಿ ನಿಭಾಯಿಸಿದ್ದರಿಂದ ಸಪ್ತ ಖಾತೆಗಳ ಸರದಾರ ಎಂದು ನನ್ನನ್ನು ಬಣ್ಣಿಸಲಾಗುತ್ತಿತ್ತು. ಬೆಂಗಳೂರನ್ನು ಸಿಂಗಾಪೂರ ಮಾದರಿ ಅಭಿವೃದ್ಧಿಗೆ ಅವರು ಕನಸು ಕಂಡಿದ್ದರು. ಅವರ ರಾಜಕೀಯ ಜೀವನ ನನಗೆ ಅನುಕರಣೀಯ. ಮೃತರ ಆತ್ಮಕ್ಕೆ ಚಿರ ಶಾಂತಿ ಕೊರುತ್ತೇನೆ. ಅವರ ಕುಟುಂಬ ವರ್ಗ, ಅಭಿಮಾನಿಗಳು, ಆಪ್ತರಿಗೆ ದುಃಖ ಭರಿಸುವ ಶಕ್ತಿ ಭಗವಂತನು ನೀಡಲಿ ಎಂದು ಬಾಬುರಾವ್ ಚಿಂಚನಸೂರ್ ಸಂತಾಪದಲ್ಲಿ ಹೇಳಿದ್ದಾರೆ.



# ಎಸ್.ಎಂ ಕೃಷ್ಣ ನಿಧನಕ್ಕೆ ಡಾ.ಡಿ.ವೀರೇಂದ್ರ ಹೆಗ್ಗಡೆ ಸಂತಾಪ

• ಉದಯವಾಹಿನಿ, ಧರ್ಮಸ್ಥಳ

ದೇಶ ಕಂಡ ಮೇಧಾವಿ, ಅಪ್ರತಿಮ ನಾಯಕ ಎಸ್.ಎಂ. ಕೃಷ್ಣ ನಿಧನಕ್ಕೆ ರಾಜ್ಯ ಸಭಾ ಸದಸ್ಯರಾದ ಡಾ. ಡಿ ವೀರೇಂದ್ರ ಹೆಗ್ಗಡೆ ಯವರು ಸಂತಾಪ ಸೂಚಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ಶ್ರೀ ಎಸ್. ಎಂ. ಕೃಷ್ಣ ನಿಧನರಾದ ಸುದ್ದಿ ತಿಳಿದು ವಿಷಾದವಾಯಿತು. ಮಹಾಮೇಧಾವಿಯಾಗಿದ್ದ ಅವರು ರಾಜ್ಯದ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ರಾಜ್ಯದ ಸರ್ವತೋಮುಖ ಅಭಿವೃದ್ಧಿಗಾಗಿ ಅನೇಕ ಪ್ರಗತಿಪರ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದ್ದರು ಎಂದು ರಾಜ್ಯ ಸಭಾ ಸದಸ್ಯ, ಶ್ರೀಕ್ಷೇತ್ರ ಧರ್ಮಸ್ಥಳ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗ್ಗಡೆ ಯವರು ಸಂತಾಪ ವ್ಯಕ್ತಪಡಿಸಿದ್ದಾರೆ.

ಎಕ್ಸ್ ಖಾತೆಯಲ್ಲಿ ಅವರೊಂದಿಗೆ ಫೋಟೋ ಹಂಚಿಕೊಳ್ಳುವ ಮೂಲಕ ಎಸ್. ಎಂ. ಕೃಷ್ಣ ಅವರ ಆಡಳಿತ ದಿನಗಳನ್ನು ನೆನೆದಿದ್ದು, ದಕ್ಷ ಆಡಳಿತಗಾರರಾಗಿದ್ದ ಎಸ್ ಎಂ ಕೃಷ್ಣ ಅವರು ಶಿಸ್ತಿನ ಸಿಪಾಯಿಯಾಗಿ, ಉತ್ತಮ ವಾಗ್ಮಿಯಾಗಿ, ಮತ್ತು ಹಿರಿಯ ರಾಜಕೀಯ ಮುತ್ಸದ್ಧಿಯಾಗಿ ಚಿರಪರಿಚಿತರಾಗಿದ್ದರು. ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆದ ಅವರು, ರಾಜ್ಯದ ಮುಖ್ಯಮಂತ್ರಿಯಾಗಿ, ಮಹಾರಾಷ್ಟ್ರ ರಾಜ್ಯಪಾಲರಾಗಿ, ಕೇಂದ್ರ ಸರಕಾರದ ವಿದೇಶಾಂಗ ಸಚಿವರಾಗಿ ಅಪಾರ ಅನುಭವ ಮತ್ತು ಪರಿಣಿತಿ ಹೊಂದಿದ್ದರು ಎಂದು ಟ್ವಿಟ್ಟರ್‌ನಲ್ಲಿ ಧರ್ಮಾಧಿಕಾರಿಗಳು ಬರೆದುಕೊಂಡಿದ್ದಾರೆ. ಹಾಗೇ ಧರ್ಮಸ್ಥಳದ ಅಭಿಮಾನಿಯೂ, ಭಕ್ತರೂ ಆಗಿದ್ದ ಅವರು ನಮ್ಮ ಕ್ಷೇತ್ರದ ಅನೇಕ ಸಮಾರಂಭಗಳಲ್ಲಿ ಭಾಗವಹಿಸಿ ಪ್ರೋತ್ಸಾಹಿಸಿದ್ದಾರೆ. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸೇರಿದಂತೆ ನಮ್ಮ ಎಲ್ಲಾ ಕಾರ್ಯಕ್ರಮಗಳಿಗೆ ಸಹಕಾರ ನೀಡಿದ್ದಾರೆ.


ಉದಯವಾಹಿನಿ ಚಿತ್ರ

**ಅವರ ಆತ್ಮಕ್ಕೆ ಚಿರಶಾಂತಿಯನ್ನು ಕೋರುತ್ತೇನೆ ಹಾಗೂ ಅವರ ಅಗಲುವಿಕೆಯಿಂದ ಕುಟುಂಬದವರಿಗೆ ಉಂಟಾದ ದುಃಖವನ್ನು ಸಹಿಸುವ ಶಕ್ತಿ-ತಾಳ್ಮೆಯನ್ನಿತ್ತು ಶ್ರೀ ಮಂಜುನಾಥ ಸ್ವಾಮಿ ಹರಸಲೆಂದು ಪ್ರಾರ್ಥಿಸುತ್ತೇನೆ ಎಂದು ಎಕ್ಸ್ ಅಲ್ಲಿ ಪೋಸ್ಟ್ ಶೇರ್ ಮಾಡಿದ್ದಾರೆ.**

# ತೀವ್ರ ಸ್ವರೂಪ ಪಡೆದ ಪಂಚಮಸಾಲಿ ಪ್ರತಿಭಟನೆ

• ಉದಯವಾಹಿನಿ, ಬೆಳಗಾವಿ

2ಎ ಮೀಸಲಾತಿಗಾಗಿ ಆಗ್ರಹಿಸಿ ಪಂಚಮಸಾಲಿ ಸಮುದಾಯದವರು ಬೆಳಗಾವಿಯಲ್ಲಿ ನಡೆಸುತ್ತಿರುವ ಪ್ರತಿಭಟನೆ ತೀವ ಸ್ವರೂಪ ಪಡೆದುಕೊಂಡಿದೆ.

ಕೂಡಲಸಂಗಮ ಪೀಠದ ಬಸವ ಜಯಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಪಂಚಮಸಾಲಿ ಸಮುದಾಯದವರು ಬೃಹತ್ ಪ್ರತಿಭಟನಾ ಸಮಾವೇಶ ನಡೆಸಿದ್ದು, ಸಮಾವೇಶದ ಬಳಿಕ ಪ್ರತಿಭಟನಾಕಾರರು ಸುವರ ಸೌಧಕ್ಕೆ ಮುತ್ತಿಗೆ ಹಾಕಲು ಯತ್ನಿಸಿದ್ದಾರೆ. ಬ್ಯಾರಿಕೇಡ್‌ಗಳನ್ನು ತಳ್ಳಿ ಸುವರ್ಣಸೌಧಕ್ಕೆ ಮುತ್ತಿಗೆ ಹಾಕಲು ಮುಂದಾದ ಪ್ರತಿಭಟನಾಕಾರರ ಮೇಲೆ ಪೊಲೀಸರು ಲಾಠಿ ಚಾರ್ಜ್ ಮಾಡಿದ್ದಾರೆ. ಲಾಠಿ ಏಟಿಗೆ 20ಕ್ಕೂ ಹೆಚ್ಚು ಜನ ಗಂಭೀರವಾಗಿ ಗಾಯಗೊಂಡಿದ್ದಾರೆ. ಲಾಠಿ ಚಾರ್ಜ್ ಮಾಡುತ್ತಿದ್ದಂತೆ ಪ್ರತಿಭಟನಾಕಾರರ ಆಕ್ರೋಶ ಮತ್ತಷ್ಟು ಹೆಚ್ಚಿದ್ದು, ಸ್ಥಳದಲ್ಲಿ ನಿಲ್ಲಿಸಿದ್ದ ವಾಹನಗಳ ಮೇಲೆ ಕಲ್ಲು ತೂರಾಟ ನಡೆಸಿದ್ದಾರೆ. ಎಂಎಲ್‌ಸಿಯೊಬ್ಬರಿಗೆ ಸೇರಿದ ಕಾರು, ಪೊಲೀಸ್ ವಾಹನಗಳ ಮೇಲೂ ಕಲ್ಲು ತೂರಾಟ ನಡೆಸಲಾಗಿದ್ದು ವಾಹನಗಳ ಗಾಜು ಪುಡಿಪುಡಿಯಾಗಿವೆ. ಸುವರ್ಣಸೌಧದ ಬಳಿ ಪ್ರತಿಭಟನೆ ತೀವ್ರ ಸ್ವರೂಪ ಪಡೆದಿದ್ದು ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದೆ.


ಉದಯವಾಹಿನಿ ಚಿತ್ರ

# ಹಿಂದೂಗಳ ಮೇಲಿನ ದಾಳಿ ಖಂಡಿಸಿ 13ರಂದು ಪ್ರತಿಭಟನೆ

• ಉದಯವಾಹಿನಿ, ಭಟ್ಕಳ

ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ನಡೆಯುತ್ತಿರುವ ದೌರ್ಜನ್ಯ ಖಂಡಿಸಿ ಭಟ್ಕಳದ ಹಿಂದೂ ಜಾಗರಣಾ ವೇದಿಕೆ ಹಾಗೂ ವಿಶ್ವ ಹಿಂದೂ ಪರಿಷತ್ ನೇತ್ರತ್ವದಲ್ಲಿ ಡಿ.13ರಂದು ಬೃಹತ್ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ ಎಂದು ಭಟ್ಕಳ ವಿಶ್ವ ಹಿಂದೂ ಪರಿಷತ್ ಘಟಕದ ಅಧ್ಯಕ್ಷ ರಾಮಕೃಷ್ಣ ನಾಯ್ಕ ಹೇಳಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ತಾಲ್ಲೂಕಿನ 30ಕ್ಕೂ ಹೆಚ್ಚು ವಿವಿಧ ಸಮಾಜದ ಮುಖಂಡರನ್ನು ಸಂಪರ್ಕಿಸಿ ಪ್ರತಿಭಟನೆಗೆ ಬೆಂಬಲಿಸುವಂತೆ ಕೋರಲಾಗಿದೆ. ಹಿಂದೂಗಳು ತಮ್ಮ ಅಂಗಡಿಗಳನ್ನು ಅರ್ಧ ದಿನದ ಮಟ್ಟಿಗೆ ಬಂದ್ ಮಾಡಿ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಬೇಕು ಎಂದು ವಿನಂತಿಸಿದರು.

ಹಳೇ ಬಸ್ ನಿಲ್ದಾಣದ ಗಣೇಶೋತ್ಸವ ಮೈದಾನದಲ್ಲಿ ಸಾರ್ವಜನಿಕ ಸಭಾ ಕಾರ್ಯಕ್ರಮ ನಡೆಯಲಿದೆ. ವಜ್ರದೇಹಿ ಸಂಸ್ಥಾನದ ಮಠಾಧೀಶ ರಾಜಶೇಖರಾನಂದ ಸ್ವಾಮೀಜಿ ಭಾಷಣ ಮಾಡಲಿದ್ದಾರೆ ಎಂದರು.

ಬೆಂಗಳೂರು ಗ್ರಾಮಾಂತರ ಹಿಂದೂ ಜಾಗರಣಾ ವೇದಿಕೆಯ ಸಂಚಾಲಕ ಜಯಂತ ನಾಯ್ಕ, ಸಹ ಸಂಚಾಲಕ ನಾಗೇಶ ನಾಯ್ಕ ಪ್ರಮುಖರಾದ ದಿನೇಶ ನಾಯ್ಕ, ಶಿವರಾಮ ದೇವಾಡಿಗ, ದೀಪಕ ನಾಯ್ಕ, ಶ್ರೀಕಾಂತ ನಾಯ್ಕ ಆಸರಕೇರಿ, ಕುಮಾರ ನಾಯ್ಕ, ಶ್ರೀನಿವಾಸ ನಾಯ್ಕ, ರಾಮಣ್ಣ ಬಲೆಗಾರ, ಗೋವಿಂದ ಖಾರ್ವಿ, ಭಾಸ್ಕರ ಆಚಾರ್ಯ ಇತರರು ಇದ್ದರು.

# ಜಂತುಹುಳು ಮಾತ್ರೆ ಮಕ್ಕಳಿಗೆ ಆರೋಗ್ಯ ಕವಚ ಇದ್ದಂತೆ: ಡಾ.ಅಭಿಷೇಕ್

## ಪ್ರತಿ ವರ್ಷ ಡಿಸೆಂಬರ್ 9 ರಂದು ರಾಷ್ಟ್ರೀಯ ಜಂತು ಹುಳು ನಿರ್ಮೂಲನಾ ದಿನಾಚರಣೆಯ ಆಚರಿಸಲಾಗುತ್ತದೆ

• ಉದಯವಾಹಿನಿ ಚಿತ್ರದುರ್ಗ

ಮಕ್ಕಳಲ್ಲಿ ಅಪೌಷ್ಟಿಕತೆಯನ್ನು ಕಡಿಮೆಗೊಳಿಸಲು ಹಾಗೂ ಜಂತುಹುಳುಗಳ ಬಾಧೆಯಿಂದ ಮಕ್ಕಳನ್ನು ರಕ್ಷಿಸಲು ಮಕ್ಕಳಿಗೆ ಆಲ್ ಬೆಂಡಾಜೋಲ್ ಎಂಬ ಜಂತುಹುಳು ನಿವಾರಣಾ ಮಾತ್ರೆ ನೀಡುವ ಮೂಲಕ ಪ್ರತಿ ವರ್ಷ ಡಿಸೆಂಬರ್ 9 ರಂದು ರಾಷ್ಟ್ರೀಯ ಜಂತು ಹುಳು ನಿರ್ಮೂಲನಾ ದಿನಾಚರಣೆಯ ಆಚರಿಸಲಾಗುತ್ತದೆ. ಒಂದರಿಂದ 19 ವರ್ಷದ ಒಳಗಿನ ಎಲ್ಲಾ ಮಕ್ಕಳು ಪದೇ ಪದೇ ಹೊಟ್ಟೆ ನೋವು ಅನುಭವಿಸಿದ್ದನ್ನು ತಪ್ಪಿಸಲು ತಪ್ಪದೇ ಈ ಜಂತುಹುಳು ನಿವಾರಣ ಮಾತ್ರೆಯನ್ನು ಸೇವಿಸಬೇಕು ಇದು ಮಕ್ಕಳಿಗೆ ಆರೋಗ್ಯ ಕವಚ ಇದ್ದಂತೆ ಎಂದು ಹಿರೇಗುಂಟದೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ|| ಅಭಿಷೇಕ್ ಹಿರೇಮಠ್ ತಿಳಿಸಿದರು.

ಅವರು ರಾಷ್ಟ್ರೀಯ ಜಂತುಹುಳ ನಿವಾರಣ ದಿನದ ಅಂಗವಾಗಿ ಚಿತ್ರದುರ್ಗ ತಾಲ್ಲೂಕು ಹಿರೇಗುಂಟನೂರ ಗ್ರಾಮದ ಶ್ರೀ ದ್ಯಾಮಲಂಬಿಕ ಕಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಜಂತುಹುಳ ನಿವಾರಣ ಮಾತ್ರೆಯಾದ ಆಲ್ ಬೆಂಡಾಜೋಲ್ ನೀಡಿ ಮಾತನಾಡುತ್ತಾ ಮಕ್ಕಳ ಆರೋಗ್ಯದ ಮೇಲೆ ಯಾವುದೇ ರೀತಿಯ ಅಡ್ಡ ಪರಿಣಾಮಗಳು ಬೀರದ ರೀತಿಯಲ್ಲಿ ಮಾತ್ರೆಯನ್ನು ತಯಾರಿಸಲಾಗಿದ್ದು, ಮಕ್ಕಳು ನಿಶ್ಚಿಂತೆಯಿಂದ ಯಾವುದೇ ಭಯ ಅಥವಾ ಹಿಂಜರಿಕೆ ಪಡದೆ 6 ತಿಂಗಳಿಗೊಮ್ಮೆ ತೆಗೆದುಕೊಳ್ಳಬೇಕು.

ಇದರಿಂದ ಮಕ್ಕಳಲ್ಲಿ ಕಂಡುಬರುವ ಹೊಟ್ಟೆನೋವು, ಆಯಾಸ ಹಾಗೂ ಇನ್ನಿತರ ಸಮಸ್ಯೆಗಳು ಕಡಿಮೆಯಾಗಿ ಅನಿಮಿಯವನ್ನು ತಡೆಗಟ್ಟಲು ಸಹಕಾರಿಯಾಗುತ್ತದೆ. ಹಾಗಾಗಿ ಸದೃಢ ಆರೋಗ್ಯವಂತ ಭಾರತವನ್ನು ನಿರ್ಮಿಸಲು ಇಂದಿನಿಂದಲೇ ಮಕ್ಕಳು ಹೆಚ್ಚೆಚ್ಚು ಆರೋಗ್ಯ ಅಧಿಕಾರಿಗಳು ಶಿಕ್ಷಕರು ನೀಡುವ ಸಲಹೆಯನ್ನು ಪಾಲಿಸಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ 250ಕ್ಕೂ ಅಚ್ಚು ಮಕ್ಕಳಿಗೆ ಜಂತುಹುಳ ನಿವಾರಣ ಮಾತ್ರೆಯನ್ನು ನೀಡಲಾಯಿತು. ಈ ಸಂದರ್ಭದಲ್ಲಿ ಶಾಲಾ ಮುಖ್ಯ ಶಿಕ್ಷಕಿ ಮೀನಾಜ್ ಎಂ., ಸಹ ಶಿಕ್ಷಕರಾದ ಸುರಯ್ಯಜಬೀನ್, ರಾಧಮ್ಮ ವೃಕ್ಸಾನಬಾನು ಆಸ್ಥಿಯಾ ಕೌಸರ್, ಸುಜಾತಾ ಮಾಮಾಜಾನ್ ಶಶಿಕುಮಾರ್ ನವೀನ್ ಕುಮಾರ್ ತೇಜಸ್ವಿಸಿಆರ್, ಸುಜಾತಾ ಟಿ, ಆಫ್ರಿನ್ ಮೈತಾಜ್ ಹಾಗೂ ಶಾಲೆಯ ಇನ್ನಿತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

**ಚಳಿಗಾಲದಲ್ಲಿ ಮಕ್ಕಳಲ್ಲಿ ಮೂಗು ಸೋರುವುದು, ಜ್ವರ ಮತ್ತು ಕೆಮ್ಮು ಎಂದಿಗೂ ಮುಗಿಯದೆ ಚಕ್ರದಂತೆ ಕಾಣುತ್ತವೆ. ಇಂತಹ ಪರಿಸ್ಥಿತಿಯಲ್ಲಿ ಮಕ್ಕಳಲ್ಲಿ ರೋಗನಿರೋಧಕ ಶಕ್ತಿಯನ್ನು ಬೆಳೆಸುವುದು ಬಹಳ ಮುಖ್ಯವಾಗಿರುತ್ತದೆ. ಮಕ್ಕಳಲ್ಲಿ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು.ಆರೋಗ್ಯಕರ ಆಹಾರ ಪದ್ಧತಿಗಳನ್ನು ಪಾಲಿಸುವುದು, ಸ್ವಲ್ಪಮಟ್ಟಿಗಿನ ವ್ಯಾಯಾಮ ಮಾಡುವುದು ಮತ್ತು ಕೈಗಳ ಸ್ವಚ್ಚತೆ ಕಾಪಾಡಿಕೊಳ್ಳುವಂತಹ ಸರಳ ಕ್ರಮಗಳು ತಪ್ಪದೇ ಪಾಲಿಸಬೇಕು**
**-ರವಿ ಕೆ. ಅಂಬೇಕರ್, ಯೋಗ ತರಬೇತಿದಾರ**


ಉದಯವಾಹಿನಿ ಚಿತ್ರ


ಆರು ತಿಂಗಳಿಗೊಮ್ಮೆ ಜಂತು ಹುಳು ಮಾತ್ರೆ

**ಮಕ್ಕಳೆಲ್ಲ ಇಂದು ಜಂತುಹುಳು ನಿವಾರಣಾ ಮಾತ್ರೆ ಆಲ್ಬೆಂಡಜೋಲ್‌ನ್ನು ಶಿಕ್ಷಕರಿಂದ ಪಡೆದು, ಜಗಿದು ನುಂಗಬೇಕು. 1 ವರ್ಷದಿಂದ 2 ವರ್ಷದೊಳಗಿನ ಮಕ್ಕಳಿಗೆ ಅರ್ಧ ಮಾತ್ರೆ (ಪುಡಿ ಮಾಡಿ) ಮತ್ತು 2 ರಿಂದ 19 ವರ್ಷದೊಳಗಿನ ಮಕ್ಕಳಿಗೆ 1 ಮಾತ್ರೆಯನ್ನು ಜಗಿದು ನುಂಗಲು ಶಿಕ್ಷಕರು ನೀಡಬೇಕು. ಈ ಹಿಂದೆ ಜಂತು ಹುಳು ಮಾತ್ರೆಯನ್ನು ತೆಗೆದುಕೊಂಡಿದ್ದರೂ ಸಹ ಪಲ್ಸ್ ಪೋಲಿಯೋ ಮಾದರಿಯಲ್ಲಿ ಎಲ್ಲಾ ಮಕ್ಕಳು ಮಾತ್ರೆಯನ್ನು ತಗೆದುಕೊಳ್ಳಬೇಕು. ಮಾತ್ರೆಯನ್ನು ಜಗಿದು ನುಂಗಬೇಕು. ಜಂತು ಹುಳು ಸೋಂಕಿನಿಂದ ಮಕ್ಕಳಲ್ಲಿ ರಕ್ತಹೀನತೆ, ಪೌಷ್ಟಿಕಾಂಶ ಕೊರತೆ, ಹಸಿವಾಗದಿರುವುದು, ವಾಂತಿ, ನಿಶಕ್ತಿ, ಅತಿಸಾರ, ಓದಿನಲ್ಲಿ ಏಕಾಗ್ರತೆ ಕೊರತೆ ಮುಂತಾದ ಆರೋಗ್ಯ ಸಮಸ್ಯೆಗಳು ಎದುರಾಗುತ್ತವೆ. ಆದ್ದರಿಂದ ಮಕ್ಕಳು ಆರು ತಿಂಗಳಿಗೊಮ್ಮೆ ಜಂತು ಹುಳು ಮಾತ್ರೆ ತೆಗೆದುಕೊಳ್ಳಬೇಕು. ಜೊತೆಗೆ ಸೋಂಕು ಆಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಆಹಾರ ತೆಗೆದುಕೊಳ್ಳುವ ಮುನ್ನ ಸೋಪಚ್ಚಿ ಕೈಗಳನ್ನು ಚೆನ್ನಾಗಿ ತೊಳೆದುಕೊಳ್ಳಬೇಕು ಎಂದು ಮಕ್ಕಳಿಗೆ ಸಲಹೆ ನೀಡಿದರು**
**-ಪುಟ್ಟುಸ್ವಾಮಿ, ಹಿರೇಗುಂಟನೂರು ಆರೋಗ್ಯ ನಿರೀಕ್ಷಣಾಧಿಕಾರಿ**

# ಉಮೇಶ್ ಮುದ್ನಾಳ್ ಹೋರಾಟದ ಎಚ್ಚರಿಕೆಗೆ ಆಡಳಿತಾಧಿಕಾರಿ ಅಲರ್ಟ್

• ಉದಯವಾಹಿನಿ, ಯಾದಗಿರಿ

ರಾಜ್ಯ ಹೆದ್ದರಿಯ ಮೇಲೆ ಚರಂಡಿ ನೀರು ತುರ್ತಾಗಿ ತೆರವುಗೊಳಿಸದ್ದಿದರೆ ಜಿಲ್ಲಾಡಳಿತ ವಿರುದ್ಧ ರಸ್ತೆ ತಡೆ ಪ್ರತಿಭಟನೆ ಎಚ್ಚರಿಕೆ ಕೊಟ್ಟ ಹಿನ್ನೆಲೆಯಲ್ಲಿ ಆಡಳಿತಾಧಿಕಾರಿ ತಾತ್ಕಾಲಿಕವಾಗಿ ಮಲೀನ ನೀರು ಸ್ವಚ್ಛಗೊಳಿಸಿ ಜೆಸಿಬಿ ಮೂಲಕ ತಾತ್ಕಾಲಿಕ ಚರಂಡಿ ಮಾಡಲು ಮುಂದಾಗಿರೋದು ಉಮೇಶ್ ಮುದ್ನಾಳ್ ಹೋರಾಟಕ್ಕೆ ಸಂದ ಜಯವಾಗಿದೆ. ತಾತ್ಕಾಲಿಕವಾಗಿ ರಸ್ತೆ ದುರಸ್ತಿ ಮಾಡಿದರೇ ಸಾಲದು..ಶಾಸ್ವತ ಪರಿಹಾರಕ್ಕೆ ಜಿಲ್ಲಾಡಳಿತ ಮುಂದಾಗಬೇಕು. ರಾಜ್ಯ ಹೆದ್ದಾರಿ ಆಗಿರೋದ್ರಿಂದ ನಿತ್ಯ ಸಾವಿರಾರು ವಾಹನಗಳು ಓಡಾಡುತ್ತವೆ. ಇದು ಅಪಘಾತ ಸ್ಪಾಟ್ ಆಗಿ ಮಾರ್ಪಟ್ಟಿದೆ. ಅಪಘಾತ ತಡೆಯುವಲ್ಲಿ ಜಿಲ್ಲಾಡಳಿತ ಪ್ರಮುಖ ಪಾತ್ರ ವಹಿಸಬೇಕು. ಜೊತೆಗೆ ಅಕ್ರಮ ಡಬ್ಬಿಗಳು ತೆರವು ಮಾಡಬೇಕು. ಇಲ್ಲದಿದ್ದರೆ ರಾಜ್ಯ ಹೆದ್ದಾರಿ ಬಂದ್ ಮಾಡಿ ಉಗ್ರ ಹೋರಾಟದ ಎಚ್ಚರಿಕೆ ನೀಡಿದ್ದಾರೆ


ಉದಯವಾಹಿನಿ ಚಿತ್ರ

# ಎಸಿಎಫ್ ನಿವಾಸದ ಮೇಲೆ ಲೋಕಾಯುಕ್ತ ದಾಳಿ: ಆಸ್ತಿ ಕಂಡು ಅಧಿಕಾರಿಗಳೇ ಶಾಕ್

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಅರಣ್ಯ ಇಲಾಖೆಯ ಎಸಿಎಫ್ ಸುರೇಶ್ ನಿವಾಸ, ಕಚೇರಿಯ ಮೇಲೆ ಲೋಕಾಯುಕ್ತ ದಾಳಿ ನಡೆಸಿದ್ದರು. ಈ ದಾಳಿಯ ವೇಳೆಯಲ್ಲಿ ಸಿಕ್ಕಂತ ಚಿನ್ನಾಭರಣ, ಆಸ್ತಿಯನ್ನು ಕಂಡಂತ ಅಧಿಕಾರಿಗಳೇ ಶಾಕ್ ಆಗಿದ್ದಾರೆ. ಹಾಗಾದ್ರೆ ಸಿಕ್ಕಿದ್ದು ಏನೇನು ಅನ್ನೋ ಬಗ್ಗೆ ಮುಂದೆ ಓದಿ. ವ್ಯವಹಾರ ಕರ್ನಾಟಕ ಇಂದು ಬೆಳ್ಳಂಬೆಳಿಗ್ಗೆ ಭ್ರಷ್ಟ ಸರ್ಕಾರಿ ಅಧಿಕಾರಿಗಳ ಭೇಟೆಗೆ ಲೋಕಾಯುಕ್ತ ಪೊಲೀಸರು ಇಳಿದಿದ್ದರು. ಬೆಂಗಳೂರಿನ ಐದು ಕಡೆ, ಬೆಂಗಳೂರು ಗ್ರಾಮಾಂತರದ ಓರ್ವ ಅಧಿಕಾರಿಯ ಮೇಲೆ, ಗದಗ, ಕಲಬುರ್ಗಿ, ರಾಯಚೂರು, ಚಿತ್ರದುರ್ಗದಲ್ಲಿ ವಿವಿಧ ಅಧಿಕಾರಿಗಳ ಮೇಲೆ ದಾಳಿ ನಡೆಸಿದ್ದಾರೆ.

ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಎಸಿಸ್ಟೆಂಟ್ ಕನ್ವರ್ಟರ್ ಆಫ್ ಫಾರೆಸ್ಟ್ ಅಧಿಕಾರಿ ಸುರೇಶ್ ನಿವಾಸದ, ಕಚೇರಿಯ ಮೇಲೂ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದರು. ಲೋಕಾಯುಕ್ತ ಅಧಿಕಾರಿಗಳ ದಾಳಿಯ ಸಂದರ್ಭದಲ್ಲಿ ಅಕ್ರಮ ಆಸ್ತಿ, ಪಾಸ್ತಿ ಪರಿಶೀಲನೆ ವೇಳೆಯಲ್ಲಿ ಸಿಕ್ಕಂತ ಚಿನ್ನಾಭರಣ, ಆಸ್ತಿಯನ್ನು ಕಂಡು ದಂಗಾಗಿದ್ದಾರೆ. ಹಿರಿಯೂರು ತಾಲ್ಲೂಕು ಎಸಿಎಫ್ ಸುರೇಶ್ ಮನೆಯಲ್ಲಿ ತನಿಖೆ ವೇಳೆ 1 ಕೆಜಿ ಚಿನ್ನಾಭರಣ, 3 ನಿವೇಶನಗಳು, 9 ಎಕರೆ ಜಮೀನು ಸೇರಿದಂತೆ 5 ಲಕ್ಷ ನಗದು ಪತ್ತೆಯಾಗಿದೆ.


ಉದಯವಾಹಿನಿ ಚಿತ್ರ

# ನೀರಿನ ಮೋಟಾರ್ ಆನ್ ಮಾಡುವಾಗ ಇರಲಿ ಎಚ್ಚರ: ವಿದ್ಯುತ್ ತಗುಲಿ ಯುವಕ ಸಾವು

• ಉದಯವಾಹಿನಿ ಬೀದರ್

ಮನೆಯಲ್ಲಿ ನೀರಿನ ಮೋಟಾರ್ ಆನ್ ಮಾಡುವ ವೇಳ ವಿದ್ಯುತ್ ತಗುಲಿ ಯುವಕನೊಬ್ಬ ಸಾವನ್ನಪ್ಪಿರುವ ಘಟನೆ ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ನಾರಾಯಣಪುರ ಎಂಬ ಗ್ರಾಮದಲ್ಲಿ ಈ ಒಂದು ದುರ್ಘಟನೆ ಸಂಭವಿಸಿದೆ. ವ್ಯವಹಾರ ಮೃತ ಯುವಕನನ್ನು ನಾರಾಯಣಪುರ ಗ್ರಾಮದ ಕಲ್ಲಪ್ಪ ಬಸವರಾಜ ಮೇತ್ರೆ (30) ಎಂದು ತಿಳಿದುಬಂದಿದೆ. ಕರ್ನಾಟಕ ಕಲ್ಲಪ್ಪ ಮನೆಯಲ್ಲಿನ ನೀರಿನ ಮೋಟರ್ ಆನ್ ಮಾಡಲು ತೆರಳಿದ ಸಂದರ್ಭದಲ್ಲಿ ವಿದ್ಯುತ್ ತಗುಲಿ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಘಟನೆಗೆ ಸಂಬಂಧಿಸಿದಂತೆ ಬಸವಕಲ್ಯಾಣ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನಿತೀಶ್ ಕುಮಾರ್ ವಿರುದ್ಧ ಯಾದವ್ ಅಶ್ಲೀಲ ಹೇಳಿಕೆಯಿಂದ ವಿವಾದ

## ಮಹಿಳೆಯರನ್ನು ಕಾಮುಕತೆಯಿಂದ ನೋಡುತ್ತಾರೆ ಎಂದು ನಾಲಿಗೆ ಹರಿಬಿಟ್ಟ ಮಾಜಿ ಮುಖ್ಯಮಂತ್ರಿ



ಮಹಿಳಾ ಸಂವಾದ ಯಾತ್ರೆ

**ಪಾಟ್ನಾ:** ಬಿಹಾರ ಸಿಎಂ ನಿತೀಶ್ ಕುಮಾರ್ ಅವರ ಬಗ್ಗೆ ಅಶ್ಲೀಲ ಹೇಳಿಕೆ ಮೂಲಕ ಆರ್‌ಜೆಡಿ ಮುಖ್ಯಸ್ಥ ಲಾಲು ಪ್ರಸಾದ್ ಯಾದವ್ ಅವರು ಮಂಗಳವಾರ ತೀವ್ರ ವಿವಾದ ಸೃಷ್ಟಿಸಿದ್ದಾರೆ. ಸಿಎಂ ನಿತೀಶ್ ಕುಮಾರ್ ಅವರು ಡಿಸೆಂಬರ್ 15ರಂದು ಮಹಿಳಾ ಸಂವಾದ ಯಾತ್ರೆ ನಡೆಸುವುದಾಗಿ ಘೋಷಿಸಿದ್ದರು.

ಇದಕ್ಕೆ ಅವರು ಮಹಿಳೆಯರತ್ತ ಕಾಮುಕದೃಷ್ಟಿ ಬೀರಲಿದ್ದಾರೆ ಎಂದು ಲಾಲು ಪ್ರತಿಕ್ರಿಯೆ ನೀಡಿರುವುದು ಕೋಲಾಹಲಕ್ಕೆ ಕಾರಣವಾಗಿದೆ.

ಮಹಿಳೆಯರ ಜತೆ ನೇರವಾಗಿ ಮಾತುಕತೆ ನಡೆಸುವ ಮಹಿಳಾ ಸಂವಾದ ಯಾತ್ರೆಯನ್ನು ಆರಂಭಿಸಲು ಉದ್ದೇಶಿಸಲಾಗಿದೆ ಎಂದು ನಿತೀಶ್ ಕುಮಾರ್ ಪ್ರಕಟಿಸಿದ್ದರು. ಮಹಿಳೆಯರನ್ನು ಕಾಮುಕತೆಯಿಂದ ನೋಡಲು ಸಿಎಂ ಈ ಯಾತ್ರೆಯಲ್ಲಿ ಭಾಗಿಯಾಗುತ್ತಿದ್ದಾರೆ ಎಂದು ಸುದ್ದಿಗಾರರಿಗೆ ಲಾಲು ಪ್ರತಿಕ್ರಿಯೆ ನೀಡಿದ್ದಾರೆ. ಲಾಲು ಹೇಳಿಕೆಗೆ ಭಾರಿ ಆಕ್ರೋಶ ವ್ಯಕ್ತವಾಗಿದೆ. ಈ ಹಿಂದೆ ಬಿಹಾರದ ಜನತೆ ತಮ್ಮನ್ನು ಹೇಗೆ ಸಹಿಸಿಕೊಂಡಿದ್ದಾರೆ ಎನ್ನುವುದು ಲಾಲು ಅವರಿಗೆ ಗೊತ್ತಿಲ್ಲ. ಈ ಜನರು ಕೀಳು ಮನಸ್ಥಿತಿ ಹೊಂದಿರುವವರು. ಅವರ ನೈಜ ಗುಣ ಈಗ ಬಯಲಾಗಿದೆ ಎಂದು ಜನತಾ ದಳ (ಸಂಯುಕ್ತ)

> ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ನಡೆಸಲು ಉದ್ದೇಶಿಸಿರುವ 'ಮಹಿಳಾ ಸಂವಾದ ಯಾತ್ರೆ' ಕುರಿತು ಆರ್‌ಜೆಡಿ ನಾಯಕ ಲಾಲು ಪ್ರಸಾದ್ ಯಾದವ್ ನೀಡಿರುವ ಅಶ್ಲೀಲ ಪ್ರತಿಕ್ರಿಯೆಗೆ ಭಾರಿ ಆಕ್ರೋಶ ವ್ಯಕ್ತವಾಗಿದೆ. ಮಹಿಳೆಯರನ್ನು ಕಾಮುಕ ದೃಷ್ಟಿಯಿಂದ ನೋಡಲು ಈ ಕಾರ್ಯಕ್ರಮ ಆಯೋಜಿಸಲಾಗಿದೆ
> -ಲಾಲು ಪ್ರಸಾದ್ ಯಾದವ್
> ಆರ್‌ಜೆಡಿ ಮುಖ್ಯಸ್ಥ

ಹಿರಿಯ ನಾಯಕ ರಾಜೀವ್ ರಂಜನ್ ಕಿಡಿಕಾರಿದ್ದಾರೆ. ಐಎನ್‌ಡಿಐಎ ಮೈತ್ರಿಕೂಟದಲ್ಲಿ ಆರ್‌ಜೆಡಿಯ ಮಿತ್ರ ಪಕ್ಷವಾಗಿರುವ ಉದ್ಧವ್ ಠಾಕ್ರೆ ನೇತೃತ್ವದ ಶಿವಸೇನಾ ಸಂಸದೆ ಪ್ರಿಯಾಂಕಾ ಚತುರ್ವೇದಿ ಕೂಡ ಲಾಲು ಹೇಳಿಕೆಯನ್ನು ಟೀಕಿಸಿದ್ದಾರೆ. ಇದು ಸೆಕ್ಸಿಸ್ಟ್ ಹೇಳಿಕೆ. ಅಂತಹ ಹೇಳಿಕೆಗಳನ್ನು ನೀಡುವುದರಿಂದ ದೂರ ಇರುವಂತೆ ಲಾಲು ಅವರ ಕುಟುಂಬದ ಸದಸ್ಯರು ಕೂಡ ಅವರಿಗೆ ಸಲಹೆ ನೀಡಬಹುದು ಎಂದಿದ್ದಾರೆ.

### ಮಮತಾಗೆ ಲಾಲು ಬೆಂಬಲ

ಐಎನ್‌ಡಿಐಎ ಬಣದಲ್ಲಿ ಉಂಟಾಗಿರುವ ನಾಯಕತ್ವ ಕುರಿತ ಸಂಘರ್ಷಕ್ಕೆ ಲಾಲು ಯಾದವ್ ಉತ್ತು ಸವರಿದ್ದಾರೆ. ನಾಯಕತ್ವ ಸ್ಥಾನಕ್ಕೆ ಪಶ್ಚಿಮ ಬಂಗಾಳ ಸಿಎಂ ಮಮತಾ ಬ್ಯಾನರ್ಜಿ ಅವರನ್ನು ಬೆಂಬಲಿಸುವ ಮೂಲಕ ಕಾಂಗ್ರೆಸ್‌ಗೆ ಸೆಡ್ಡು ಹೊಡೆದಿದ್ದಾರೆ. ಕಾಂಗ್ರೆಸ್ ಆಕ್ಷೇಪಕ್ಕೆ ಯಾವ ಅರ್ಥವೂ ಇಲ್ಲ, ನಾವು ಮಮತಾಗೆ ಬೆಂಬಲ ನೀಡುತ್ತೇವೆ. ಐಎನ್‌ಡಿಐಎ ಬ್ಲಾಕ್‌ನ ನಾಯಕತ್ವವನ್ನು ಮಮತಾ ಬ್ಯಾನರ್ಜಿ ಅವರಿಗೆ ನೀಡಬೇಕು ಎಂದು ಲಾಲು ಹೇಳಿದ್ದಾರೆ. ವಿರೋಧ ಪಕ್ಷಗಳ ಮೈತ್ರಿಕೂಟದ ನಾಯಕತ್ವವನ್ನು ದೀದಿಗೆ ವಹಿಸಬೇಕು ಎಂದು ತೃಣಮೂಲ ಕಾಂಗ್ರೆಸ್ ಪಟ್ಟು ಹಿಡಿದಿದೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ವಿರುದ್ಧದ ನಿರಂತರ ದಿಗ್ವಿಜಯಗಳು ಅವರ ರಾಜಕೀಯ ಶಕ್ತಿ ಹಾಗೂ ನಾಯಕತ್ವ ಸಾಮರ್ಥ್ಯಗಳಿಗೆ ಹಿಡಿದ ಕನ್ನಡಿ ಎಂದಿರುವ ಟಿಎಂಸಿ ಸಂಸದ ಕೀರ್ತಿ ಆಜಾದ್, ಈ ಹುದ್ದೆಗೆ ಮಮತಾ ಬ್ಯಾನರ್ಜಿ ಅತ್ಯಂತ ಸೂಕ್ತ ವ್ಯಕ್ತಿ ಎಂದಿದ್ದಾರೆ.

# ಸಿರಿಯಾ ಮಹಿಳೆಯರ ವಸ್ತ್ರ ನಿರ್ಬಂಧ ತೆರವು ಗೊಳಿಸುವುದಾಗಿ ಬಂಡುಕೋರರ ಘೋಷಣೆ



**ಡಮಾಸ್ಕಸ್:** ಸಿರಿಯಾದ ವಶಪಡಿಸಿಕೊಂಡಿರುವ ಬಂಡುಕೋರರು ಮಹಿಳೆಯರ ಡ್ರೆಸ್ ನಿರ್ಬಂಧವನ್ನು ತೆರವುಗೊಳಿಸುವ ಮತ್ತಷ್ಟು ಘೋಷಣೆ ಮಾಡಿದ್ದಾರೆ. ಸಿರಿಯಾದ ಅಧ್ಯಕ್ಷ ಬಶರ್ ಅಸ್ಸಾದ್ ದೇಶ ತೊರೆಯುತ್ತಿದ್ದಂತೆ ಮಧ್ಯಂತರ ಸರ್ಕಾರ ರಚನೆಗೆ ಮುಂದಾಗಿರುವ ಸಿರಿಯನ್ ಬಂಡುಕೋರರು ಇದೀಗ ಮಹಿಳೆಯರ ಡ್ರೆಸ್‌ಕೋಡ್ ಬಗ್ಗೆ ಮಹತ್ವದ ಘೋಷಣೆ ಮಾಡಿದ್ದಾರೆ. ಮಹಿಳೆಯರಿಗೆ ಯಾವುದೇ ಧಾರ್ಮಿಕ ಡ್ರೆಸ್ ಕೋಡ್ ವಿಧಿಸುವುದಿಲ್ಲ, ಎಲ್ಲರಿಗೂ ವೈಯಕ್ತಿಕ ಸ್ವಾತಂತ್ರ್ಯ ವಿರುತ್ತದೆ ಎಂದು ಹೇಳಿದ್ದಾರೆ.

ಮಹಿಳೆಯರ ಉಡುಪಿನ ಬಗ್ಗೆ ಯಾವುದೇ ಹಸ್ತಕ್ಷೇಪ ಮಾಡುವುದಿಲ್ಲ, ಅವರ ಉಡುಪು ಅಥವಾ ನೋಟಕ್ಕೆ ಸಂಬಂಧಿಸಿದಂತೆ ಯಾವುದೇ ಹೇರಿಕೆ ಇಲ್ಲ ಎಂದು ಬಂಡುಕೋರರು ಸ್ಪಷ್ಟಪಡಿಸಿದ್ದಾರೆ. ಜನರ ಹಕ್ಕುಗಳಿಗೆ ಗೌರವ ಕೊಟ್ಟಾಗ ಮಾತ್ರ ಉತ್ತಮ ರಾಷ್ಟ್ರ ನಿರ್ಮಾಣ ಸಾಧ್ಯ, ಎಲ್ಲಾ ಸಿರಿಯನ್ನರಿಗೆ ವೈಯಕ್ತಿಕ ಸ್ವಾತಂತ್ರ್ಯ ವನ್ನು ನೀಡಲಾಗುತ್ತಿದೆ ಎಂದು ಘೋಷಿಸಿದ್ದಾರೆ.

ಅರ್ಧ ಶತಮಾನದವರೆಗೆ ಅಸ್ಸಾದ್ ಕುಟುಂಬದ ಕಠಿಣ ನಿಯಂತ್ರಣವನ್ನು ಸಹಿಸಿಕೊಂಡ ನಂತರ, ಇಸ್ಲಾಮಿಸ್ಟ್ ಅಜೆಂಡಾದೊಂದಿಗೆ ಬಂಡುಕೋರರು ರಾಜಧಾನಿಗೆ ನುಗ್ಗಿ ವಶಪಡಿಸಿಕೊಂಡಿದೆ.

### 5 ದಶಕಗಳ ಆಳ್ವಿಕೆಗೆ ಸವಾಲು

ಕಳೆದ ಹಲವು ದಿನಗಳಿಂದ ಸಿರಿಯಾದಲ್ಲಿ ಬಂಡುಕೋರ ಗುಂಪುಗಳು, ಸೇನೆಯ ನಡುವೆ ಹೋರಾಟ ನಡೆಯುತ್ತಿತ್ತು. ಅಂತಿಮವಾಗಿ, ಇಸ್ಲಾಮಿ ಹಯಾತ್ ತಹ್ರೀರ್ ಅಲ್-ಶಾಮ್ ಗುಂಪು ಅಸ್ಸಾದ್ ಕುಟುಂಬದ ಐದು ದಶಕಗಳ ಆಳ್ವಿಕೆಗೆ ಸವಾಲು ಹಾಕಿದ 11 ದಿನಗಳ ನಂತರ ಸರ್ಕಾರವು ಪತನವಾಗಿದೆ.

# ಅದಾನಿ ಹಗರಣ ಚರ್ಚೆಗೆ ನಿರಾಕರಣೆ: ಸುಗಮ ಕಲಾಪಕ್ಕೆ ಬಿಜೆಪಿ ಅಡ್ಡಿ

**25 ಕೋಟಿ ಡಾಲರ್ ಗಳಷ್ಟು ಲಂಚ**

**ನವದೆಹಲಿ:** ಅದಾನಿ ಹಗರಣ ಸೇರಿದಂತೆ ಪ್ರಮುಖ ವಿಷಯಗಳ ಬಗ್ಗೆ ಚರ್ಚೆಗೆ ಆಡಳಿತ ಪಕ್ಷ ಅವಕಾಶ ಕಲ್ಪಿಸದ ಕಾರಣ, ಲೋಕಸಭೆಯ ಸುಗಮ ಕಲಾಪಕ್ಕೆ ಅಡ್ಡಿ ಪಡಿಸಲಾಗುತ್ತಿದೆ ಎಂದು ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಮಂಗಳವಾರ ಆರೋಪಿಸಿದ್ದಾರೆ. ಅದಾನಿ ವಿಷಯ ಪ್ರಸ್ತಾಪಿಸಲು ಮೊಂಡುತನ ಪ್ರದರ್ಶಿಸುತ್ತಿರುವ ಬಿಜೆಪಿ, ಸದನವನ್ನು ಬೇರೆಡೆ ಸೆಳೆಯಲು ತಂತ್ರದ ಭಾಗವಾಗಿ ಕಾಂಗ್ರೆಸ್ ಜಾರ್ಜ್ ಸೋರೊಸ್ ಅವರೊಂದಿಗೆ ಸಂಪರ್ಕದಲ್ಲಿದೆ ಎಂದು ಆರೋಪಿಸಿದೆ. ಆದರೆ ವಾಸ್ತವವಾಗಿ ಅತ್ಯಂತ ಹಾಸ್ಯಾಸ್ಪದ ವಿಷಯ ಎಂದು ಭಾವಿಸುತ್ತೇನೆ ಎಂದು ಪ್ರಿಯಾಂಕಾ ತಿರುಗೇಟು ನೀಡಿದರು.



ಶೂನ್ಯ ಅವಧಿಯಲ್ಲಿ ಮಾತನಾಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ವ್ಯಂಗ್ಯ ಚಿತ್ರಗಳಿರುವ ಮುಖವಾಡಗಳು ಮತ್ತು ಜಾಕೆಟ್‌ಗಳನ್ನು ಧರಿಸಿ ಸದನಕ್ಕೆ ಬರುವ ವಿರೋಧ ಪಕ್ಷಗಳು ಸಂಸತ್ತಿನ ಗೌರವದ ಮೇಲೆ ದಾಳಿ ನಡೆಸಿವೆ ಎಂದು ಹೇಳಿದ್ದಾರೆ. ಕಾಂಗ್ರೆಸ್ ನಾಯಕರು ಸಂಸತ್ತಿನಲ್ಲಿ ಗದ್ದಲ ಸೃಷ್ಟಿಸುತ್ತಿರುವುದರಿಂದ ಸದನದಲ್ಲಿ ಇತರೆ ಸದಸ್ಯರು ತಮ್ಮ ಕ್ಷೇತ್ರಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪ್ರಸ್ತಾಪಿಸುವುದರಿಂದ ವಂಚಿತರಾಗುತ್ತಿದ್ದಾರೆ ಎಂದು ರಿಜಿಜು ಬೇಸರ ವ್ಯಕ್ತಪಡಿಸಿದ್ದಾರೆ.

ಭಾರತದಲ್ಲಿ ಸೌರಶಕ್ತಿಯಿಂದ ವಿದ್ಯುತ್ ಉತ್ಪಾದಿಸುವ ಯೋಜನೆಗಳ ಗುತ್ತಿಗೆಯನ್ನು ಸುಲಭವಾಗಿ ಪಡೆಯಲು ಅಧಿಕಾರಿಗಳಿಗೆ 25 ಕೋಟಿ ಡಾಲರ್ ಗಳಷ್ಟು (ಅಂದಾಜು 2,100 ಕೋಟಿ) ಲಂಚ ನೀಡಿದ್ದಾರೆ ಇಲ್ಲವೆ ನೀಡಲು ಮುಂದಾಗಿದ್ದಾರೆ ಎಂದು ಗೌತಮ್ ಅದಾನಿ ಹಾಗೂ ಅವರ ಅಣ್ಣನ ಮಗ ಸಾಗರ್ ಅದಾನಿ ವಿರುದ್ಧ ಅಮೆರಿಕದ ಕೋರ್ಟ್‌ಗೆ ಆರೋಪಪಟ್ಟಿ ಸಲ್ಲಿಸಲಾಗಿದೆ. ಇದರ ಬೆನ್ನಲ್ಲೇ, ಅವರ ಬಂಧನಕ್ಕೆ ಕೋರ್ಟ್ ವಾರಂಟ್ ಹೊರಡಿಸಿದೆ. ಲಂಚದ ಆರೋಪದ ಮೇಲೆ ಗೌತಮ್ ಅದಾನಿ ಮತ್ತು ಇತರ ಕಂಪನಿಗಳ ಅಧಿಕಾರಿಗಳ ವಿರುದ್ಧ ಅಮೆರಿಕದ ನ್ಯಾಯಾಲಯದಲ್ಲಿ ಆರೋಪಪಟ್ಟಿ ದಾಖಲಾಗಿರುವ ಬಗ್ಗೆ ಜಂಟಿ ಸಂಸದೀಯ ಸಮಿತಿಯಿಂದ ತನಿಖೆ ನಡೆಸುವಂತೆ ಕಾಂಗ್ರೆಸ್ ಸೇರಿದಂತೆ ವಿರೋಧ ಪಕ್ಷಗಳು ಒತ್ತಾಯಿಸುತ್ತಿವೆ.

> ಸದನದಲ್ಲಿ ಕಲಾಪ ನಡೆಸಲು ಆಡಳಿತ ಪಕ್ಷಕ್ಕೆ ಇಷ್ಟವಿಲ್ಲ ಅಥವಾ ಅವರು ಸಾಮರ್ಥ್ಯ ಹೊಂದಿಲ್ಲ. ಆಡಳಿತ ಪಕ್ಷವು ವಿನಃ ಕಾರಣ ಕಲಾಪವನ್ನು ಮುಂದೂಡುತ್ತದೆ ಎಂದು ಕಿಡಿಕಾರಿದ್ದಾರೆ. ಇದು ವರೆಗೂ ಸದನಕ್ಕೆ ಪ್ರಧಾನಿ ನರೇಂದ್ರ ಮೋದಿ ಬರದೆ ಇರುವುದು ನೂತನ ಸಂಸದೆಯಾಗಿ ನನಗೆ ಆಶ್ಚರ್ಯವೆನಿಸುತ್ತದೆ. ಸದನದಲ್ಲಿ ಅದಾನಿ ವಿಷಯ ಪ್ರಸ್ತಾಪಿಸುವುದು ಅವಶ್ಯಕ. ಏಕೆಂದರೆ, ಈ ವಿಚಾರ ಅಮೆರಿಕದಲ್ಲಿ ಚರ್ಚೆಯಾಗಿದೆ
> -ಪಿಯಾಂಕಾ ಗಾಂಧಿ ವಾದ್ರಾ
> ಕಾಂಗ್ರೆಸ್ ಸಂಸದೆ

# ಆಂಧ್ರ ಸಚಿವ ಸಂಪುಟ ಸೇರಲಿದ್ದಾರೆ ಪವನ್ ಸಹೋದರ ನಾಗಬಾಬು

**ಅಮರಾವತಿ:** ಆಂಧ್ರಪ್ರದೇಶದ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರ ಸಹೋದರ ಕೆ.ನಾಗ ಬಾಬು ಅವರು ರಾಜ್ಯ ಸಚಿವ ಸಂಪುಟಕ್ಕೆ ಸೇರ್ಪಡೆಯಾಗಲಿದ್ದಾರೆ ಎಂದು ಮುಖ್ಯಮಂತ್ರಿ ಹಾಗೂ



ತೆಲುಗು ದೇಶಂ ಪಕ್ಷದ (ಟಿಡಿಪಿ) ಅಧ್ಯಕ್ಷ ಎನ್. ಚಂದ್ರಬಾಬು ನಾಯ್ಡು ಪ್ರಕಟಿಸಿದ್ದಾರೆ. ಪವನ್ ಕಲ್ಯಾಣ್ ಅವರ ಹಿರಿಯ ಸಹೋದರ ಮತ್ತು ಮೆಗಾ ಸ್ಟಾರ್ ಚಿರಂಜೀವಿ ಅವರ ಕಿರಿಯ ಸಹೋದರ ನಾಗಬಾಬು ಅವರು ನಟ ಮತ್ತು ಚಲನಚಿತ್ರ ನಿರ್ಮಾಪಕರೂ ಆಗಿದ್ದಾರೆ.

1 75 ಸದಸ್ಯರ ವಿಧಾನಸಭೆಯಲ್ಲಿ ಟಿಡಿಪಿ ನೇತೃತ್ವದ ಆಡಳಿತಾರೂಢ ರಾಷ್ಟ್ರೀಯ ಪ್ರಜಾಸತ್ತಾತಕ ಒಕ್ಕೂಟ (ಎನ್ಡಿಎ) 164 ಶಾಸಕರನ್ನು ಹೊಂದಿದೆ. ಟಿಡಿಪಿ 135 ಸದಸ್ಯರನ್ನು ಹೊಂದಿದ್ದರೆ, ಜನಸೇನೆ ಮತ್ತು ಬಿಜೆಪಿ ಕ್ರಮವಾಗಿ 21 ಮತ್ತು 8 ಸ್ಥಾನಗಳನ್ನು ಹೊಂದಿವೆ. ನಾಗೇಂದ್ರ ಬಾಬು ಎಂದೂ ಕರೆಯಲ್ಪಡುವ ನಾಗಬಾಬು ಅವರು ಜನಸೇನೆಯಿಂದ ನಾಲ್ಕನೇ ಸಚಿವರಾಗಲಿದ್ದಾರೆ. ನಾಗಬಾಬು ಅವರು ವಿಧಾನಸಭೆಯ ಸದಸ್ಯರಲ್ಲದ ಕಾರಣ, ರಾಜ್ಯ ಸಚಿವ ಸಂಪುಟಕ್ಕೆ ಸೇರ್ಪಡೆಗೊಳ್ಳಲು ಸಮಿಶ್ರವು ಅವರನ್ನು ವಿಧಾನ ಪರಿಷತ್ತಿಗೆ ನಾಮನಿರ್ದೇಶನ ಮಾಡುವ ಸಾಧ್ಯತೆಯಿದೆ.

ಪ್ರಸ್ತುತ, ಚಂದ್ರಬಾಬು ನಾಯ್ಡು ನೇತೃತ್ವದ ಸಂಪುಟದಲ್ಲಿ ಜನಸೇನೆಯಿಂದ ಜನಸೇನಾ ಅಧ್ಯಕ್ಷ ಪವನ್ ಕಲ್ಯಾಣ್, ನಾದೆಂಡ್ಲ ಮನೋಹರ್ ಮತ್ತು ಕಂದುಲ ದುರ್ಗೇಶ್ ಸಚಿವರಾಗಿದ್ದಾರೆ. ರಾಜ್ಯ ಸಚಿವ ಸಂಪುಟವು ಗರಿಷ್ಠ 25 ಸದಸ್ಯರನ್ನು ಹೊಂದಬಹುದು. ಚಂದ್ರಬಾಬು ನಾಯ್ಡು ಮತ್ತು 23 ಸಚಿವರು ಜೂನ್ 12 ರಂದು ಪ್ರಮಾಣ ವಚನ ಸ್ವೀಕರಿಸಿದ್ದರು. ಟಿಡಿಪಿ ಜನಸೇನೆಯಿಂದ ಮೂವರು ಮತ್ತು ಬಿಜೆಪಿಯಿಂದ ಒಬ್ಬರನ್ನು ಸಚಿವರನ್ನಾಗಿ ಸೇರಿಸಿಕೊಂಡಿತ್ತು. ಜನಸೇನೆಗೆ ಒಂದು ಸ್ಥಾನ ಖಾಲಿ ಉಳಿದಿತ್ತು.

### ಜನಸೇನೆಗೆ ಅವಕಾಶ

ಜನ ಸೇನೆಯ ಪ್ರಧಾನ ಕಾರ್ಯದರ್ಶಿಯಾಗಿ ಅವರು ಇತ್ತೀಚಿನ ಚುನಾವಣೆಯಲ್ಲಿ ಪಕ್ಷದ ಪರವಾಗಿ ಸಕ್ರಿಯವಾಗಿ ಪ್ರಚಾರ ಮಾಡಿದ್ದರು. ರಾಜ್ಯಸಭೆಗೆ ಉಪಚುನಾವಣೆಗಾಗಿ ಟಿಡಿಪಿ ಇಬ್ಬರು ಅಭ್ಯರ್ಥಿಗಳನ್ನು ಹೆಸರಿಸಿದ್ದರಿಂದ, ತನ್ನ ಮೈತ್ರಿ ಪಾಲುದಾರ ಬಿಜೆಪಿಗೆ ಒಂದು ಸ್ಥಾನವನ್ನು ಬಿಟ್ಟುಕೊಟ್ಟಿದ್ದರಿಂದ, ರಾಜ್ಯ ಸಚಿವ ಸಂಪುಟದಲ್ಲಿ ಮತ್ತೊಂದು ಪಾಲುದಾರ ಜನಸೇನೆಗೆ ಅವಕಾಶ ಕಲ್ಪಿಸಲು ನಿರ್ಧರಿಸಿದೆ.

# ಕುವೈತ್ ಬ್ಯಾಂಕ್‌ನಿಂದ 700 ಕೋಟಿ ಸಾಲ ಪಡೆದು ಪರಾರಿಯಾದ ಕೇರಳದ ನರ್ಸ್‌ಗಳು

**ತಿರುವನಂತಪುರ:** ಕುವೈತ್ ಬ್ಯಾಂಕ್‌ವೊಂದರಲ್ಲಿ 700 ಕೋಟಿಗೂ ಹೆಚ್ಚು ಸಾಲ ಪಡೆದು ಮರುಪಾವತಿ ಮಾಡದೆ ವಂಚಿಸಿದ ಆರೋಪದಡಿ ಕೇರಳದ ನರ್ಸ್‌ಗಳು ಸೇರಿದಂತೆ 1,400ಕ್ಕೂ ಹೆಚ್ಚು ಜನರ ವಿರುದ್ಧ ಪ್ರಕರಣ ದಾಖಲಾಗಿದೆ. ಆರೋಪ ಎದುರಿಸುತ್ತಿರುವವರಲ್ಲಿ ಬಹುತೇಕರು ಶುಶ್ರೂಷಕಿಯರು ಎಂಬುದು ವಿಶೇಷ. ಕುವೈತ್‌ನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಪಡೆದ 700 ಕೋಟಿಗೂ ಹೆಚ್ಚು ಸಾಲ ಪಡೆದು ವಂಚಿಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಬಹುತೇಕ ಸಾಲಗಾರರು ಕುವೈತ್‌ನಿಂದ ತಾಯ್ನಾಡಿಗೆ (ಕೇರಳ) ವಾಪಸ್ ಬಂದಿದ್ದಾರೆ. ಕೆಲವರು ಮತ್ತೆ ವಿದೇಶಗಳಿಗೂ ವಲಸೆ ಹೋಗಿದ್ದಾರೆ.

ಇದರಿಂದಾಗಿ ಕುವೈತ್ ಬ್ಯಾಂಕ್ ಕೆಎಸ್‌ಸಿಪಿ ಇತ್ತೀಚೆಗೆ ಕೇರಳ ಪೊಲೀಸರಿಗೆ ದೂರು ನೀಡಿದ್ದು, ಅದರನ್ವಯ ರಾಜ್ಯದಲ್ಲಿ 10 ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕೆಎಸ್‌ಸಿಪಿ ಬ್ಯಾಂಕ್‌ನ ಡೆಪ್ಯುಟಿ ಜನರಲ್ ಮ್ಯಾನೇಜರ್ ಮೊಹಮ್ಮದ್ ಅಬ್ದುಲ್ ವಸ್ತಿ ಕಮ್ರಾನ್ ಅವರ ದೂರಿನ ಆಧಾರದ ಮೇಲೆ ಎರ್ನಾಕುಲಂ ಗ್ರಾಮಾಂತರದಲ್ಲಿ ಎಂಟು, ಎರ್ನಾಕುಲಂ ನಗರದಲ್ಲಿ ಒಂದು, ಕೊಟ್ಟಾಯಂನಲ್ಲಿ ಒಂದು ಪ್ರಕರಣ ದಾಖಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. 406 ಮತ್ತು 420, 120-ಬಿ, 34 ಸೇರಿದಂತೆ ಐಪಿಸಿಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಹೆಚ್ಚಿನ ಪ್ರಕರಣಗಳು ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿವೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಇದೊಂದು ಸಾಮೂಹಿಕ ವಂಚನೆ ಪ್ರಕರಣವಾಗಿದೆ. 1,400ಕ್ಕೂ ಹೆಚ್ಚು ಜನರಿಂದ ಬ್ಯಾಂಕ್‌ಗೆ 700 ಕೋಟಿ ವಂಚಿಸಲಾಗಿದೆ. ಸಾಲಗಾರರು ತಲಾ 75 ಲಕ್ಷದಿಂದ 1 ಕೋಟಿವರೆಗೆ ಸಾಲ ಪಡೆದಿದ್ದಾರೆ ಎಂದು ವಕೀಲ ಥಾಮಸ್ ಮಾಹಿತಿ ನೀಡಿದ್ದಾರೆ. ಕುವೈತ್‌ನ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿದ್ದ ದಾದಿಯರು ಕೋವಿಡ್ ಸಂದರ್ಭದಲ್ಲಿ ಹೆಚ್ಚು ಸಾಲವನ್ನು ಪಡೆದಿದ್ದಾರೆ ಎಂದು ಥಾಮಸ್ 'ಪಿಟಿಐ'ಗೆ ತಿಳಿಸಿದ್ದಾರೆ.

# ಯುಪಿ: ಒತ್ತುವರಿ ಆರೋಪ; 185 ವರ್ಷ ಹಳೆಯ ಮಸೀದಿಯ ಪಾರ್ಶ್ವ ಕೆಡವಿದ ಅಧಿಕಾರಿಗಳು



**ಫತೇಪುರ:** ಅಕ್ರಮ ನಿರ್ಮಾಣ ಮತ್ತು ಹೆದ್ದಾರಿ ವಿಸ್ತರಣೆಗೆ ತಡೆಯಾಗಿದೆ ಎಂಬ ಕಾರಣ ನೀಡಿ ಉತ್ತರ ಪ್ರದೇಶದ ಫತೇಪುರ ಜಿಲ್ಲೆಯ 185 ವರ್ಷ ಹಳೆಯದಾದ ನೂರಿ ಮಸೀದಿಯ ಒಂದು ಭಾಗವನ್ನು ಕೆಡವಲಾಗಿದೆ. ಭಾರಿ ಭದ್ರತೆಯಲ್ಲಿ ಸ್ಥಳೀಯ ಅಧಿಕಾರಿಗಳು ಈ ಕಾರ್ಯಾಚರಣೆ ನಡೆಸಿದ್ದಾರೆ. 1839ರಲ್ಲಿ ಲಲೌಲಿ ಪಟ್ಟಣದಲ್ಲಿ ನೂರಿ ಮಸೀದಿ ನಿರ್ಮಾಣ ಆಗಿದೆ. ಅದರ ಸುತ್ತ 1956ರಲ್ಲಿ ರಸ್ತೆ ನಿರ್ಮಾಣ ಮಾಡಲಾಗಿದೆ.

ಈ ಸಂಬಂಧ ಅಲಹಾಬಾದ್ ಹೈಕೋರ್ಟ್ ಮೆಟ್ಟಿಲೇರಿದ್ದು, ಡಿಸೆಂಬರ್ 12ರಂದು ವಿಚಾರಣೆ ನಿಗದಿಪಡಿಸಲಾಗಿದೆ ಎಂದು ಮಸೀದಿ ನಿರ್ವಹಣಾ ಸಮಿತಿಯ ಮುಖ್ಯಸ್ಥರು ಹೇಳಿದ್ದಾರೆ. ಬಂಡ-ಬರ್ಹೈಚ್ ಹೆದ್ದಾರಿ ವಿಸ್ತರಣೆಯ ಭಾಗವಾಗಿ ಅಕ್ರಮವಾಗಿ ನಿರ್ಮಿಸಲಾಗಿರುವ ಮಸೀದಿಯ ಒಂದು ಭಾಗ ಕೆಡವಬೇಕೆಂದು ಲೋಕೋಪಯೋಗಿ ಇಲಾಖೆಯಿಂದ ನೋಟಿಸ್ ನೀಡಲಾಗಿತ್ತು. ಆದರೆ, ಮಸೀದಿ ನಿರ್ವಹಣಾ ಸಮಿತಿಯು ಇದನ್ನು ಪಾಲಿಸಿರಲಿಲ್ಲ ಎಂದು ವರದಿ ತಿಳಿಸಿದೆ.

ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಕಾರ್ಯಾಚರಣೆ ವೇಳೆ ಲಲೌಲಿ ಪಟ್ಟಣದಲ್ಲಿ ಭಾರಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು ಸಂಭಲ್ ಘಟನೆಯ ಹಿನ್ನೆಲೆಯಲ್ಲಿ ಮತ್ತೊಂದು ಅಹಿತಕರ ಘಟನೆ ನಡೆಯಬಾರದೆಂಬ ಕಾರಣಕ್ಕೆ ತೀವ್ರ ಕಟ್ಟೆಚ್ಚರ ವಹಿಸಲಾಗಿತ್ತು.

> ಹೆದ್ದಾರಿ ವಿಸ್ತರಣೆಗೆ ತೊಡಕಾಗಿದ್ದ ಮಸೀದಿಯ ಸುಮಾರು 20 ಮೀಟರ್ ಕಟ್ಟಡವನ್ನು ಬುಲ್ಡೋಜರ್ ಬಳಸಿ ಕೆಡವಲಾಗಿದೆ. ಸ್ಥಳೀಯ ಅಧಿಕಾರಿಗಳ ಉಪಸ್ಥಿತಿಯಲ್ಲಿ ಈ ಕಾರ್ಯಾಚರಣೆ ನಡೆದಿದೆ. ಅವಶೇಷದ ತೆರವು ಕಾರ್ಯ ನಡೆಯುತ್ತಿದೆ' ಎಂದು ಲಲೌಲಿ ಪೊಲೀಸ್ ಠಾಣೆಯ ಠಾಣಾಧಿಕಾರಿ ವೃಂದಾವನ ರಾಯ್ ಹೇಳಿದ್ದಾರೆ.

# ಪೆಟ್ರೋಲ್ ಬಂಕ್ ಸ್ಫೋಟ ಸಾವಿನ ಸಂಖ್ಯೆ 4ಕ್ಕೆ ಏರಿಕೆ



**ರೋಮ್:** ಇಟಲಿಯ ಟಸ್ಕನಿ ವಲಯದ ಪೆಟ್ರೋಲ್ ಬಂಕ್‌ವೊಂದರಲ್ಲಿ ಸಂಭವಿಸಿದ ಸ್ಫೋಟದಲ್ಲಿ ಮೃತಪಟ್ಟವರ ಸಂಖ್ಯೆ 4ಕ್ಕೆ ಏರಿಕೆಯಾಗಿದೆ. ರಕ್ಷಣಾ ಸಿಬ್ಬಂದಿಯು ಸ್ಫೋಟದ ಸ್ಥಳದಲ್ಲಿ ಕಾರ್ಯಾಚರಣೆ ಕೈಗೊಂಡಿದ್ದು, ಎರಡು ಮೃತದೇಹಗಳು ಮಂಗಳ ವಾರ ಪತ್ತೆಯಾಗಿವೆ. ಘಟನೆಯಲ್ಲಿ 14 ಮಂದಿ ಗಾಯ ಗೊಂಡಿದ್ದು, ಈ ಪೈಕಿ ಇಬ್ಬರ ಸ್ಥಿತಿ ಗಂಭೀರವಾಗಿದೆ ಎಂದು ಎಂದು ಟಸ್ಕನಿ ಗವರ್ನರ್ ಯುಗಿನಿಯೊ ಗಿಯಾನಿ ತಿಳಿಸಿದ್ದಾರೆ.

ಟಸ್ಕನಿಯ ಕಾಲೆಂಜಾನೊ ನಗರದಲ್ಲಿ ಇಎನ್‌ಐ ತೈಲ ಕಂಪನಿಯ ಪೆಟ್ರೋಲ್ ಬಂಕ್‌ನಲ್ಲಿ ಸೋಮವಾರ ಬೃಹತ್ ಪ್ರಮಾಣದ ಸ್ಫೋಟ ಸಂಭವಿಸಿತ್ತು. ಸ್ಫೋಟದ ತೀವ್ರತೆಗೆ ಬಂಕ್‌ನ ಪಕ್ಕದಲ್ಲಿದ್ದ ಕಟ್ಟಡವೂ ನೆಲಸಮಗೊಂಡಿದ್ದು, ಕಟ್ಟಡದ ಅವಶೇಷಗಳ ಅಡಿಯಲ್ಲಿ ವ್ಯಕ್ತಿ ಸಿಲುಕಿರುವ ಸಾಧ್ಯತೆ ಇದೆ ಎನ್ನಲಾಗಿದೆ. ಪೆಟ್ರೋಲ್ ಬಂಕ್ ಸ್ಫೋಟಗೊಳ್ಳಲು ಕಾರಣವೇನೆಂಬುದನ್ನು ಪತ್ತೆ ಹಚ್ಚಲು ತನಿಖೆ ಆರಂಭಿಸಲಾಗಿದೆ ಎಂದು ಇಎನ್‌ಐ ತೈಲ ಕಂಪನಿ ಪ್ರತಿಕ್ರಿಯಿಸಿದೆ.

# ಇವಿಎಂ ಬಗ್ಗೆ ಅನುಮಾನ: ಮತಪತ್ರ ಬಳಸಲು ನಿರ್ಣಯ ಅಂಗೀಕರಿಸಿದ ಗ್ರಾಮಸ್ಥರು



**ಪುಣೆ:** ಮುಂಬರುವ ಚುನಾವಣೆಗಳಲ್ಲಿ ಮತಪತ್ರಗಳನ್ನು ಬಳಸುವ ನಿರ್ಣಯವನ್ನು ಮಹಾರಾಷ್ಟ್ರದ ಸತಾರಾ ಜಿಲ್ಲೆಯ ಕೋಲೆವಾಡಿ ಗ್ರಾಮಸಭೆ ಮಂಗಳವಾರ ಅಂಗೀಕರಿಸಿದೆ.

ಇದರೊಂದಿಗೆ ವಿದ್ಯುನ್ಮಾನ ಮತಯಂತ್ರಗಳ ವಿರುದ್ಧ ನಿರ್ಣಯವನ್ನು ಅಂಗೀಕರಿಸಿದ ರಾಜ್ಯದ ಎರಡನೇ ಗ್ರಾಮ ಇದಾಗಿದೆ. ಕೋಲೆವಾಡಿ ಗ್ರಾಮವು ಕರಾಡ್ ವಿಧಾನಸಭೆ ಕ್ಷೇತ್ರದಲ್ಲಿ ಬರುತ್ತದೆ. ಈ ಕ್ಷೇತ್ರವನ್ನು ಮಾಜಿ ಮುಖ್ಯಮಂತ್ರಿ, ಹಿರಿಯ ಕಾಂಗ್ರೆಸ್ ನಾಯಕ ಪೃಥ್ವಿರಾಜ್ ಚೌಹಾಣ್ ಅವರು ಪ್ರತಿನಿಧಿಸುತ್ತಿದ್ದಾರೆ. ಇತ್ತೀಚೆಗೆ ನಡೆದ ವಿಧಾನಸಭೆ ಚುನಾವಣೆಯಲ್ಲಿ ಪೃಥ್ವಿರಾಜ್ ಅವರು ಬಿಜೆಪಿ ಅಭ್ಯರ್ಥಿ ಅತುಲ್ ಭೋಸೆ ವಿರುದ್ಧ 39,355 ಮತಗಳಿಂದ ಸೋತಿದ್ದರು. ಇವಿಎಂ ಮೂಲಕ ಚಲಾವಣೆಯಾದ ಮತಗಳ ಬಗ್ಗೆ ಕೋಲೆವಾಡಿ ಗ್ರಾಮಸ್ಥರು ಅನುಮಾನ ವ್ಯಕ್ತಪಡಿಸಿದ ಕಾರಣ ಮುಂಬರುವ ಚುನಾವಣೆಗಳಲ್ಲಿ ಮತಪತ್ರ ಬಳಸುವ ನಿರ್ಣಯವನ್ನು ಅಂಗೀಕರಿಸಲಾಗಿದೆ. ಕೆಲವು ದಿನಗಳ ಹಿಂದೆ ಸೊಲ್ಲಾಪುರದ ಮಲ್ಶಿರಸ್ ಕ್ಷೇತ್ರದ ಮರ್ಕಡವಾಡಿಯ ಗ್ರಾಮಸ್ಥರು ಇವಿಎಂಗಳ ವಿಶ್ವಾಸಾರ್ಹತೆಯ ಬಗ್ಗೆ ಅನುಮಾನ ವ್ಯಕ್ತಪಡಿಸಿ ಮತಪತ್ರ ಬಳಸಿ ಮರು ಮತದಾನ ನಡೆಸಲು ಪ್ರಯತ್ನಿಸಿದ್ದರು.

ಮುಂಬರುವ ಚುನಾವಣೆಗಳಲ್ಲಿ ಇವಿಎಂ ಇಲ್ಲದೆಯೇ ಮತಪತ್ರ ಮೂಲಕ ಮತದಾನ ನಡೆಸಬೇಕು ಎಂದು ಕೋಳೆವಾಡಿ ಗ್ರಾಮಸಭೆ ನಿರ್ಣಯ ಅಂಗೀಕರಿಸಿದೆ ಎಂದು ಗ್ರಾಮಸ್ಥರೊಬ್ಬರು ತಿಳಿಸಿದ್ದಾರೆ. ಸಾರ್ವಜನಿಕರ ಬೇಡಿಕೆ ಹಿನ್ನೆಲೆಯಲ್ಲಿ ಚುನಾವಣಾ ಆಯೋಗವು ಮತಪತ್ರ ಬಳಸಲು ಅನುಮತಿ ನೀಡಬೇಕು.

ಮತಪತ್ರ ಬಳಸಿದರೆ ಮಾತ್ರ ಕೋಲೆವಾಡಿಯ ಜನರು ಮತ ಹಾಕುತ್ತಾರೆ ಎಂದು ಸಂಕಲ್ಪ ಮಾಡಿದ್ದೇವೆ. ಮುಂದಿನ ಚುನಾವಣೆಯಲ್ಲಿ ಇವಿಎಂ ಬಳಸಿದರೆ ನಾವು ಮತ ಹಾಕುವುದಿಲ್ಲ ಎಂದು ಅವರು ಹೇಳಿದ್ದಾರೆ. ಮತಪತ್ರಗಳ ಮೂಲಕ ಮತದಾನ ಮಾಡಲು ನಮಗೆ ಅವಕಾಶ ನೀಡದಿದ್ದರೆ, ನಾವು ಚುನಾವಣೆಗಳನ್ನು ಬಹಿಷ್ಕರಿಸುತ್ತೇವೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

# ಜಗದೀಪ್ ಧನ್‌ಕರ್ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಿದ ವಿಪಕ್ಷಗಳು

## ಪ್ರತಿಪಕ್ಷಗಳ ವಿಚಾರದಲ್ಲಿ ಉದ್ದೇಶಪೂರ್ವಕವಾಗಿ ಪಕ್ಷಪಾತ ಧೋರಣೆ ತಳೆಯುತ್ತಿರುವ ಆರೋಪ



ವಜಾ ಗೊಳ್ತಾರಾ ರಾಜ್ಯಸಭೆ ಸಭಾಪತಿ?

**ಹೊಸದಿಲ್ಲಿ:** ಪ್ರತಿಪಕ್ಷಗಳ ವಿಚಾರದಲ್ಲಿ ಉದ್ದೇಶಪೂರ್ವಕವಾಗಿ ಪಕ್ಷಪಾತ, ಪ್ರತಿಪಕ್ಷ ನಾಯಕರು ಮಾತನಾಡಲು ನೀಡುವ ಸಮಯದ ವಿಷಯದಲ್ಲಿ ತಾರತಮ್ಯ ಮಾಡುತ್ತಿದ್ದಾರೆ ಎಂದು ಆರೋಪಿಸಿ ರಾಜ್ಯಸಭೆ ಸಭಾಪತಿ ಜಗದೀಪ್ ಧನ್‌ಕರ್ ವಿರುದ್ಧ ವಿಪಕ್ಷಗಳು ಅವಿಶ್ವಾಸ ನಿರ್ಣಯ ಮಂಡಿಸಿವೆ. ಕಲಾಪದಲ್ಲಿ ಸಭಾಪತಿ ನಡೆದುಕೊಂಡ ರೀತಿಗೆ ಆಕ್ಷೇಪಿಸಿದ್ದ ಪ್ರತಿಪಕ್ಷ ನಾಯಕರು, ಪ್ರಸಕ್ತ ಅಧಿವೇಶನದಲ್ಲೇ ಅವಿಶ್ವಾಸ ನಿರ್ಣಯ ಮಂಡಿಸಲು ನಿರ್ಧರಿಸಿದ್ದಾರೆ ಎಂದು ತಿಳಿದು ಬಂದಿತ್ತು. ಸಭಾಪತಿ ವಿರುದ್ಧ ಮಂಡಿಸಲಿರುವ ಅವಿಶ್ವಾಸ ನಿರ್ಣಯ ಪತ್ರಕ್ಕೆ 70 ಸಂಸದರು ಸಹಿ ಹಾಕಿದ್ದಾರೆ ಎನ್ನಲಾಗಿತ್ತು.

ಇದೀಗ ಕಾಂಗ್ರೆಸ್ ನೇತೃತ್ವದ ಐಎನ್‌ಡಿಐಎ ಸದಸ್ಯರು ಅವಿಶ್ವಾಸ ಗೊತ್ತುವಳಿ ಮಂಡಿಸಿದ್ದಾರೆ. ಇದಕ್ಕೆ ಕಾಂಗ್ರೆಸ್, ಪಶ್ಚಿಮ ಬಂಗಾಳದ ಆಡಳಿತಾರೂಢ ತೃಣ ಮೂಲ ಕಾಂಗ್ರೆಸ್, ಅರವಿಂದ್ ಕೇಜ್ರಿವಾಲ್ ಅವರ ಆಮ್ ಆದ್ಮಿ ಪಕ್ಷ, ಅಖಿಲೇಶ್ ಯಾದವ್ ಅವರ ಸಮಾಜವಾದಿ ಪಕ್ಷ, ತಮಿಳುನಾಡಿನ ದ್ರಾವಿಡ ಮುನ್ನೇತ್ರ ಕಳಗಂ ಮತ್ತು ಲಾಲು ಯಾದವ್ ಅವರ ರಾಷ್ಟ್ರೀಯ ಜನತಾ ದಳದ 50ಕ್ಕೂ ಹೆಚ್ಚು ಸಂಸದರು ಸಹಿ ಹಾಕಿದ್ದಾರೆ. ಸಹಿ ಹಾಕಿ ನೋಟಿಸ್ ಅನ್ನು ರಾಜ್ಯಸಭಾ ಕಾರ್ಯದರ್ಶಿ ಅವರಿಗೆ ಸಲ್ಲಿಸಿದ್ದಾರೆ.

ನಿಷ್ಪಕ್ಷಪಾತವಾಗಿ ನಡೆದುಕೊಳ್ಳಬೇಕಿರುವ ಸಭಾಪತಿ ಜಗದೀಪ್ ಧನಕರ್ ಅವರು ಆಡಳಿತ ಪಕ್ಷದ ಪರವಾಗಿ ನಿಂತಿದ್ದಾರೆ. ಪ್ರತಿಪಕ್ಷ ನಾಯಕರು ಮಾತನಾಡುವಾಗ ಪದೇ ಪದೇ ಅಡ್ಡಿಪಡಿಸುತ್ತಾರೆ. ಸದನದ ಸದಸ್ಯರ ನಡುವೆ ತಾರತಮ್ಯ ಮಾಡುತ್ತಿದ್ದಾರೆ ಎಂದು ಕಾಂಗ್ರೆಸ್, ಸಮಾಜವಾದಿ ಪಕ್ಷ ಹಾಗೂ ಆಪ್ ಸಂಸದರು ಹಲವು ಬಾರಿ ಆರೋಪಿಸಿದ್ದರು.

ಸಭಾಪತಿ ವಿರುದ್ಧದ ಅವಿಶ್ವಾಸ ನಿರ್ಣಯ ಮಂಡನೆಗೆ ಟಿಎಂಸಿ ನಾಯಕರನ್ನು ಕೂಡ ವಿಶ್ವಾಸಕ್ಕೆ ತೆಗೆದುಕೊಳ್ಳಲು ಕಾಂಗ್ರೆಸ್ ಪ್ರಯತ್ನಿಸಿತ್ತು. ಅದರಂತೆ ಟಿಎಂಸಿ ಸಂಸದರೂ ನಿರ್ಣಯಕ್ಕೆ ಸಹಿ ಹಾಕಿದ್ದಾರೆ.

ಹಾಗೆ ನೋಡಿದರೆ ಬಜೆಟ್ ಅಧಿವೇಶನದ ಸಮಯದಲ್ಲೂ ಜಗದೀಪ್ ಧನ್‌ಕರ್ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು ಪ್ರತಿಪಕ್ಷಗಳು ಮುಂದಾಗಿದ್ದವು. ಬಳಿಕಕೊನೆ ಕ್ಷಣದಲ್ಲಿ ನಿರ್ಧಾರ ಬದಲಿಸಿದ್ದವು.

> ವಿಪಕ್ಷಗಳು ರಾಜ್ಯಸಭೆ ಸಭಾಪತಿ ಜಗದೀಪ್ ಧನ್‌ಕರ್ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಿವೆ. ಪ್ರತಿಪಕ್ಷಗಳ ವಿಚಾರದಲ್ಲಿ ಉದ್ದೇಶಪೂರ್ವಕವಾಗಿ ಪಕ್ಷಪಾತ ಹಾಗೂ ಪ್ರತಿಪಕ್ಷ ನಾಯಕರು ಮಾತನಾಡಲು ನೀಡುವ ಸಮಯದ ವಿಷಯದಲ್ಲಿ ತಾರತಮ್ಯ ಮಾಡುತ್ತಿದ್ದಾರೆ ಎಂದು ಆರೋಪಿಸಿ ಈ ನಿರ್ಣಯ ಮಂಡಿಸಿವೆ. ಇದಕ್ಕೆ ಕಾಂಗ್ರೆಸ್ ಸೇರಿ ಐಎನ್‌ಡಿಐಎ ಪಕ್ಷದ ಸಂಸದರು ಸಹಿ ಹಾಕಿದ್ದಾರೆ.

- ಪ್ರತಿಪಕ್ಷ ನಾಯಕರು ಮಾತನಾಡಲು ನೀಡುವ ಸಮಯದ ವಿಷಯದಲ್ಲಿ ತಾರತಮ್ಯದ ದೂರು
- ಕಾಂಗ್ರೆಸ್ ಸೇರಿ ಐಎನ್‌ಡಿಐಎ ಪಕ್ಷದ 50ಕ್ಕೂ ಹೆಚ್ಚು ಸಂಸದರಿಂದ ನಿರ್ಣಯಕ್ಕೆ ಸಹಿ

**ವಜಾಗೊಳ್ತಾರಾ ಜಗದೀಪ್ ಧನ್‌ಕರ್:** ಜಗದೀಪ್ ಧನ್‌ಕರ್ ವಜಾಗೊಳ್ಳುವ ಸಾಧ್ಯತೆ ತೀರಾ ಕಡಿಮೆ. ಪ್ರತಿಪಕ್ಷಗಳಿಗೆ ರಾಜ್ಯಸಭೆಯಲ್ಲಿ ಬಹುಮತ ಇಲ್ಲ. ಲೋಕಸಭೆಯಲ್ಲಿ ಕೂಡ ಇದೇ ಪರಿಸ್ಥಿತಿ ಇದೆ. ಹೀಗಾಗಿ ನಿರ್ಣಯ ಅಗತ್ಯ ಬೆಂಬಲ ಗಳಿಸುವ ಸಾಧ್ಯತೆ ಇಲ್ಲ. ನಿಯಮಗಳ ಪ್ರಕಾರ ಜಗದೀಪ್ ಧನ್‌ಕರ್ ಅವರನ್ನು ತೆಗೆದುಹಾಕಬೇಕಿದ್ದರೆ ಅವಿಶ್ವಾಸ ನಿರ್ಣಯ ಪ್ರಸ್ತಾಪವನ್ನು ಸರಳ ಬಹುಮತದಿಂದ ಅಂಗೀಕರಿಸಬೇಕಾಗುತ್ತದೆ.

ಅಂದರೆ ಶೇ. 50ಕ್ಕಿಂತ ಕನಿಷ್ಠ ಒಂದಾದರೂ ಹೆಚ್ಚಿನ ಸಂಖ್ಯೆಯ ರಾಜ್ಯಸಭಾ ಸದಸ್ಯರು ಇದರ ಪರ ಮತ ಚಲಾಯಿಸಬೇಕು. ನಂತರ ಲೋಕಸಭೆಯಲ್ಲಿ ಕೂಡ ಇದೇ ಅಂತರದಿಂದ ನಿರ್ಣಯ ಪಾಸಾಗಬೇಕು. ಆದರೆ ಎರಡೂ ಮನೆಗಳಲ್ಲಿ ವಿರೋಧ ಪಕ್ಷಗಳಿಗೆ ಸ್ಪಷ್ಟ ಬಹುಮತ ಇಲ್ಲದ ಕಾರಣ ಜಗದೀಪ್ ಧನ್‌ಖರ್ ವಜಾಗೊಳ್ಳುವ ಸಾಧ್ಯತೆ ಇಲ್ಲ.



## ಮಿನಿ ನ್ಯೂಸ್

### ಮತ್ತಷ್ಟು ಉನ್ನತ ಅಧಿಕಾರಿಗಳ ವಿದೇಶ ಪ್ರವಾಸಕ್ಕೆ ನಿರ್ಬಂಧ

**ಸೋಲ್:** ವಿದೇಶಗಳಿಗೆ ಪ್ರವಾಸ ಕೈಗೊಳ್ಳದಂತೆ ದಕ್ಷಿಣ ಕೊರಿಯಾ ಸರ್ಕಾರ ಮತ್ತಷ್ಟು ಉನ್ನತ ಅಧಿಕಾರಿಗಳ ಮೇಲೆ ಮಂಗಳವಾರ ನಿಷೇಧ ಹೇರಿದೆ. ಕೊರಿಯಾದ ನ್ಯಾಷನಲ್ ಪೊಲೀಸ್ ಏಜೆನ್ಸಿಯ ಪ್ರಧಾನ ಕಮಿಷನರ್ ಚೋ ಜಿ-ಹೊ ಹಾಗೂ ಇತರ ಇಬ್ಬರು ಉನ್ನತ ಪೊಲೀಸ್ ಅಧಿಕಾರಿಗಳ ವಿದೇಶ ಪ್ರಯಾಣದ ಮೇಲೆ ನಿರ್ಬಂಧ ಹೇರಲಾಗಿದೆ.

ದೇಶದಲ್ಲಿ ಸೇನಾಡಳಿತ ಹೇರುವುದಕ್ಕೆ ಅಧ್ಯಕ್ಷ ಯೂನ್ ಸುಕ್ ಯೋಲ್ ನಡೆಸಿದ್ದ ಯತ್ನಗಳು ವಿಫಲಗೊಂಡಿದ್ದವು. ಈ ಬೆಳವಣಿಗೆಗಳ ನಂತರ, ಉನ್ನತ ಅಧಿಕಾರಿಗಳು ವಿದೇಶಗಳಿಗೆ ಭೇಟಿ ನೀಡುವುದನ್ನು ಸರ್ಕಾರ ನಿಷೇಧಿಸಿದೆ. ಕಮಾಂಡರ್ ಜನರಲ್ ಪಾರ್ಕ್ ಅನ್-ಸು ಸೇರಿದಂತೆ ಹಲವು ಉನ್ನತ ಅಧಿಕಾರಿಗಳನ್ನು ವಿಚಾರಣೆಗೆ ಒಳಪಡಿಸಲಾಗಿದೆ. ಅಲ್ಲದೇ, ಮಾಜಿ ರಕ್ಷಣಾ ಸಚಿವ ಹಾಗೂ ಇತರ ಮಂತ್ರಿಗಳ ವಿದೇಶ ಪ್ರವಾಸ ಕೈಗೊಳ್ಳದಂತೆ ಈಗಾಗಲೇ ನಿರ್ಬಂಧಿಸಲಾಗಿದೆ.

### ಚೀನಾ ಹಿತಾಸಕ್ತಿ ರಕ್ಷಣೆಗೆ ಬದ್ಧ ಟ್ರಂಪ್ ಹೇಳಿಕೆಗೆ ತಿರುಗೇಟು

**ಬೀಜಿಂಗ್:** ಚೀನಾದಿಂದ ಆಮದು ಮಾಡಿಕೊಳ್ಳುವ ಸರಕುಗಳ ಮೇಲೆ ಅಧಿಕ ಸುಂಕ ವಿಧಿಸುವ ಬಗ್ಗೆ ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಎಚ್ಚರಿಕೆಗೆ ಪ್ರತಿಕ್ರಿಯಿಸಿರುವ ಅಧ್ಯಕ್ಷ ಷಿ ಜಿನ್‌ಪಿಂಗ್, ತನ್ನ ಹಿತಾಸಕ್ತಿಗಳ ರಕ್ಷಣೆಗೆ ಚೀನಾ ಅಗತ್ಯ ಕ್ರಮ ಕೈಗೊಳ್ಳಲಿದೆ' ಎಂದು ಮಂಗಳವಾರ ತಿರುಗೇಟು ನೀಡಿದ್ದಾರೆ. 'ವಿವಿಧ ಉತ್ಪನ್ನಗಳ ಮೇಲೆ ಅಧಿಕ ದರ ಆಕರಣೆ ಹಾಗೂ ತಂತ್ರಜ್ಞಾನ ಮೂಲಕ ನಡೆಸುವ ಯುದ್ಧಗಳು ಹಿಂದಿನಿಂದಲೂ ಅನುಸರಿಸಿಕೊಂಡು ಬರುತ್ತಿರುವ ವ್ಯಾಪಾರ ನೀತಿಗಳು, ಆರ್ಥಿಕ ನಿಯಮಗಳಿಗೆ ವ್ಯತಿರಿಕ್ತವಾಗಲಿವೆ. ಇಂತಹ ಯುದ್ಧಗಳಲ್ಲಿ ಯಾರೂ ಗೆಲುವು ಸಾಧಿಸುವುದಿಲ್ಲ ಎಂದು ಷಿ ಜಿನ್‌ಪಿಂಗ್ ಹೇಳಿದ್ದಾರೆ.

ವಿಶ್ವಬ್ಯಾಂಕ್, ಐಎಂಎಫ್ ಹಾಗೂ ವಿಶ್ವ ವ್ಯಾಪಾರ ಸಂಘಟನೆ(ಡಬ್ಲ್ಯುಟಿಒ) ಸೇರಿ 10 ಅಂತರರಾಷ್ಟ್ರೀಯ ಮಟ್ಟದ ಪ್ರಮುಖ ಸಂಘಟನೆಗಳ ಮುಖ್ಯಸ್ಥರ ನಡೆದ ಸಭೆಯಲ್ಲಿ ಅವರು ಈ ಅಭಿಪ್ರಾಯ ಹೊರಹಾಕಿದ್ದಾರೆ. ಇತರ ದೇಶಗಳೊಂದಿಗೆ ವ್ಯವಹರಿಸುವಾಗ ತನ್ನ ಸಾರ್ವಭೌಮತೆ, ಭದ್ರತೆ, ಅಭಿವೃದ್ಧಿಗೆ ಸಂಬಂಧಿಸಿದ ವಿಚಾರಗಳಿಗೆ ಚೀನಾ ಹೆಚ್ಚು ಗಮನ ನೀಡುತ್ತದೆ. ತನ್ನ ಹಿತಾಸಕ್ತಿ ರಕ್ಷಣೆಗೆ ನಿರ್ಣಾಯಕ ಕ್ರಮ ಕೈಗೊಳ್ಳುತ್ತದೆ ಎಂಬುದಾಗಿ ಸಭೆಯಲ್ಲಿ ಷಿ ಜಿನ್‌ಪಿಂಗ್ ಹೇಳಿದರು ಎಂದು ಮಾಧ್ಯಮಗಳು ವರದಿ ಮಾಡಿವೆ.

### ಭಾರತಕ್ಕೆ ಭೇಟಿ ನೀಡಲಿರುವ ಶ್ರೀಲಂಕಾದ ಅಧ್ಯಕ್ಷ ದಿಸ್ಸನಾಯಕ

**ಕೊಲಂಬೊ:** ಶ್ರೀಲಂಕಾದ ಅಧ್ಯಕ್ಷ ಅನುರಾ ಕುಮಾರ ದಿಸ್ಸನಾಯಕ ಅವರು ಭಾರತಕ್ಕೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಅಧಿಕಾರ ವಹಿಸಿಕೊಂಡ ಬಳಿಕ ಅವರು ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ. ತಮ್ಮ ಭೇಟಿಯ ವೇಳೆ ದಿಸ್ಸನಾಯಕ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಲಿದ್ದಾರೆ ಎಂದು ಶ್ರೀಲಂಕಾ ಸಂಪುಟದ ವಕ್ತಾರ ನಲಿಂದಾ ಜಯತಿಸ್ಸ ತಿಳಿಸಿದ್ದಾರೆ. ದಿಸ್ತನಾಯಕ ಅವರೊಂದಿಗೆ ವಿದೇಶಾಂಗ ಸಚಿವ ವಿಜಿತಾ ಹೇ ರಾತ್, ಹಣಕಾಸು ಖಾತೆ ಉಪ ಸಚಿವ ಅನಿಲ್ ಜಯಂತ ಫ ರ್ನಾಂಡೋ ಅವರು ಆಗಮಿಸಲಿದ್ದಾರೆ ಎಂದು ಅವರು ಹೇಳಿದ್ದಾರೆ. ಡಿಸೆಂಬರ್ 15 ರಿಂದ 17ರವರೆಗೆ ದಿಸ್ಸನಾಯಕ ಅವರು ಭಾರತಕ್ಕೆ ಎರಡು ದಿನಗಳ ಭೇಟಿ ನೀಡಲಿದ್ದಾರೆ.

ಶ್ರೀಲಂಕಾದ ಅಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಅವರ ಮೊದಲ ವಿದೇಶಿ ಭೇಟಿ ಇದಾಗಿದೆ. ಶ್ರೀಲಂಕಾದ ಅಧ್ಯಕ್ಷೀಯ ಚುನಾವಣೆಯ ನಂತರ ದಿಸ್ಸನಾಯಕ ಅವರನ್ನು ಭೇಟಿ ಮಾಡಿದ್ದ ಭಾರತದ ವಿದೇಶ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಅವರು ದೆಹಲಿಗೆ ಭೇಟಿ ನೀಡುವಂತೆ ಅವರನ್ನು ಆಹ್ವಾನಿಸಿದ್ದರು.

### ಅಡ್ಡಾದಿಡ್ಡಿ ಚಲಿಸಿದ ಬಸ್ ಆರು ಮಂದಿ ಬಲಿ

**ಮುಂಬೈ:** ಇಲ್ಲಿನ ಕುರ್ಲಾ ಪ್ರದೇಶದಲ್ಲಿ ಪಾದಚಾರಿಗಳು ಮತ್ತು ವಾಹನಗಳಿಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಆರು ಮಂದಿ ಸಾವನ್ನಪ್ಪಿದ್ದು, 49 ಮಂದಿ ಗಾಯಗೊಂಡಿದ್ದಾರೆ. ಸೋಮವಾರ ರಾತ್ರಿ 9:45 ರ ಸುಮಾರಿಗೆ ಘಟನೆ ಸಂಭವಿಸಿದ್ದು, ಬಹನುಂಬೈ ವಿದ್ಯುತ್ ಸರಬರಾಜು ಮತ್ತು ಸಾರಿಗೆ ಸಂಸ್ಥೆ (ಬೆಸ್ಟ್) ಬಸ್ (ಮಾರ್ಗ 332) ಚಾಲಕನ ನಿಯಂತ್ರಣ ತಪ್ಪಿ, ಹಲವಾರು ವಾಹನಗಳು ಮತ್ತು ಪಾದಚಾರಿಗಳ ಮೇಲೆ ಹರಿದು ಹೌಸಿಂಗ್ ಸೊಸೈಟಿಯ ಗೋಡೆಗೆ ಡಿಕ್ಕಿ ಹೊಡೆದಿದೆ. ಘಟನೆ ನಡೆದಾಗ ಬಸ್ ಕುರ್ಲಾ ನಿಲ್ದಾಣದಿಂದ ಅಂಧೇರಿಗೆ ತೆರಳುತ್ತಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.

ದಾರಿಯಲ್ಲಿ ಬಸ ಜನರಿಕೆ ಡಿಕ್ಕಿ ಹೊಡೆಯಿತು ನಂತರ ಗೋಡೆಗೆ ಡಿಕ್ಕಿ ಹೊಡೆದು ನಿಂತಿತು. ಮತರನ್ನು ಕನ್ನಿಸ್ ಫಾತಿಮಾ ಅನ್ಸಾರಿ, ಶಿವಂ ಕಶ್ಯಪ್, ಅಫ್ರೀನ್ ಅಬ್ದುಲ್ ಸಲೀಂ ಶಾ, ಅನಮ್ ಶೇಖ್ ಎಂದು ಗುರುತಿಸಲಾಗಿದೆ. ಕುರ್ಲಾದಲ್ಲಿ, ಬೆಸ್ಟ್ ಬಸ್ ನಿಯಂತ್ರಣ ತಪ್ಪಿ ಕೆಲವು ವಾಹನಗಳನ್ನು ನುಜ್ಜುಗುಜ್ಜುಗೊಳಿಸಿದೆ. ಗಾಯಗೊಂಡವರನ್ನು ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಬಸ್ ಚಾಲಕನನ್ನು ವಶಕ್ಕೆ ತೆಗೆದುಕೊಳ್ಳಲಾಗಿದೆ. ವಿಚಾರಣೆ ನಡೆಯುತ್ತಿದೆ ಎಂದು ಉಪ ಪೊಲೀಸ್ ಆಯುಕ್ತ (ವಲಯ 5) ಗಣೇಶ್ ಗಾವ್ಡೆ ಅವರು ಸುದ್ದಿಗಾರರಿಗೆ ತಿಳಿಸಿದರು.

### ಅಕ್ರಮವಾಗಿ ನೆಲೆಸಿದ್ದ ಐವರು ಬಾಂಗ್ಲಾದೇಶದ ಮಹಿಳೆಯರ ಬಂಧನ

**ಠಾಣೆ:** ಮಹಾರಾಷ್ಟ್ರದ ಠಾಣೆ ಜಿಲ್ಲೆಯಲ್ಲಿ ಅಕ್ರಮವಾಗಿ ನೆಲೆಸಿದ್ದ ಆರೋಪದಡಿ ಬಾಂಗ್ಲಾದೇಶದ ಐವರು ಮಹಿಳೆಯರನ್ನು ಪೊಲೀಸರು ಮಂಗಳವಾರ ಬಂಧಿಸಿದ್ದಾರೆ. ಖಚಿತ ಮಾಹಿತಿ ಆಧರಿಸಿ ಪೊಲೀಸರು ಭಿವಂಡಿಯ ಚಾಲ್ ಪ್ರದೇಶದಲ್ಲಿ ದಾಳಿ ನಡೆಸಿದ್ದು, ಅಕ್ರಮವಾಗಿ ನೆಲೆಸಿದ್ದ ಐವರು ಬಾಂಗ್ಲಾದೇಶದ ಮಹಿಳೆಯರನ್ನು ಬಂಧಿಸಿದ್ದಾರೆ. ಬಂಧಿತ ಮಹಿಳೆಯರು 36ರಿಂದ 50 ವರ್ಷ ವಯಸ್ಸಿನವರು ಎಂದು ಗುರುತಿಸಲಾಗಿದೆ. ಭಾರತದಲ್ಲಿ ನೆಲೆಸಲು ಯಾವುದೇ ನಿರ್ದಿಷ್ಟ ದಾಖಲೆಗಳು ಇಲ್ಲದ ಕಾರಣ ಅವರನ್ನು ಬಂಧಿಸಲಾಗಿದೆ ಎಂದೂ ಪೊಲೀಸರು ತಿಳಿಸಿದ್ದಾರೆ. ವಿದೇಶಿ ಪ್ರಜೆಗಳ ಕಾಯಿದೆ, ಭಾರತೀಯ ಪಾಸ್‌ಪೋರ್ಟ್ ಕಾಯ್ದೆಯ ನಿಬಂಧನೆಗಳ ಅಡಿಯಲ್ಲಿ ಅವರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಮಹಿಳೆಯರಿಗೆ ಬಾಡಿಗೆ ಮನೆ ನೀಡಿದ್ದ ವ್ಯಕ್ತಿಯನ್ನೂ ಆರೋಪಿ ಎಂದು ಆತನ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.





# ರಿಷಿ ಅಭಿನಯದ ರುದ್ರ ಗರುಡ ಪುರಾಣ ಚಿತ್ರ ರಿಲೀಸ್ ಡೇಟ್ ಫಿಕ್ಸ್

ಆಪರೇಶನ್ ಅಲಮೇಲ್ಲಮ್ಮ, ಕವಲುದಾರಿ ಸೇರಿದಂತೆ ಅನೇಕ ಚಿತ್ರಗಳಲ್ಲಿ ನಟಿಸಿ, ಪ್ರೇಕ್ಷಕರ ಮನೆ ಗೆದ್ದಿರುವ ನಟ ರಿಷಿ ಅಭಿನಯದ ಬಹು ನಿರೀಕ್ಷಿತ ರುದ್ರ, ಗರುಡ ಪುರಾಣ ಚಿತ್ರ 2025 ರ ಜನವರಿ 24ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಈ ಹಿಂದೆ ಡಿಸೆಂಬರ್27 ಈ ಚಿತ್ರವನ್ನು ತೆರೆಗೆ ತರುವುದಾಗಿ ಚಿತ್ರತಂಡ ಹೇಳಿತ್ತು. ಇದೀಗ ಜನವರಿ 24ಕ್ಕೆ ಬಿಡುಗಡೆ ಮಾಡುವುದಾಗಿ ತಿಳಿಸಿವೆ. ಅಶ್ವಿನಿ ಆರ್ಟ್ಸ್ ಬ್ಯಾನರ್ ಅಡಿಯಲ್ಲಿ ಕೆಎಸ್ ನಂದೀಶ್ ನಿರ್ದೇಶನದ ಮತ್ತು ಲೋಹಿತ್ ನಿರ್ಮಾಣದ ಈ ಚಿತ್ರವು ಈಗಾಗಲೇ ತನ್ನ ಫಸ್ಟ್ ಲುಕ್, ಟೀಸರ್ ಮತ್ತು ಹಾಡುಗಳಿಂದ ಗಮನ ಸೆಳೆದಿದೆ.

25 ವರ್ಷದ ಹಿಂದೆ ಬಸ್ಸೊಂದು ಅಪಘಾತವಾಗಿ ಅದರಲ್ಲಿದ್ದ ಎಲ್ಲರೂ ಸಾವನ್ನಪ್ಪಿರುತ್ತಾರೆ. ಆದರೆ ಅದೇ ಬಸ್ಸು ಮತ್ತು ಅದರಲ್ಲಿದ್ದ ಜನಗಳು ಮತ್ತೆ ವಾಪಸ್ಸು ಬರುವ ರೋಚಕ ತಿರುವುಗಳನ್ನು ಅನ್ವೇಷಣೆ ಮಾಡುವ ಚಿತ್ರ ರುದ್ರ ಗರುಡ ಪುರಾಣವಾಗಿದೆ. ಸಿನಿಮಾದ ಟೀಸರ್ ಬಿಡುಗಡೆಗೊಂಡಾಗ ಕೆಲವರು ಇದು ತಮಿಳಿನ ಡೈರಿ ಸಿನಿಮಾದ ರಿಮೇಕ್ ಎಂದು ಹೇಳಿರುವ ಕುರಿತು ಪ್ರತಿಕ್ರಿಯೆ ನೀಡಿದ ನಿರ್ದೇಶಕ ನಂದೀಶ್ ಅವರು, ಪ್ಯಾನ್ ಆಮ್ ಫ್ಲೈಟ್ 914 ರ ಪ್ರಕರಣದಿಂದ ಸ್ಫೂರ್ತಿ ಪಡೆಯಲಾಗಿದೆ. ಡೌಗ್ಲಾಸ್ ವಿಮಾನವು 1955ರಲ್ಲಿ ಕಣ್ಮರೆಯಾಗಿತ್ತು. 30 ವರ್ಷಗಳ ನಂತರ ಪತ್ತೆಯಾಗಿತ್ತು. ಇದರಿಂದ ಸ್ಫೂರ್ತಿ ಪಡೆದು ಸಿನಿಮಾ ಮಾಡಲಾಗಿದೆ. ನಾನು ಆ ಚಿತ್ರ ನೋಡಿಲ್ಲ.

ಆದರೆ, ಕುತೂಹಲದಿಂದ ಚೆನ್ನೈನಲ್ಲಿ ಕೆಲಸ ಮಾಡುತ್ತಿರುವ ನಮ್ಮ ಮ್ಯೂಸಿಕ್ ಡೈರೆಕ್ಟರ್'ನ್ನು ಕೇಳಿದಾಗ ಅದಕ್ಕೂ ನಮ್ಮ ಸಿನಿಮಾ ಯಾವುದೇ ಸಾಮ್ಯತೆ ಇರುವುದಿಲ್ಲ. ಟೀಸರ್ ನಲ್ಲಿ ಬಸ್ ಅಪಘಾತ ಇರುವುದರಿಂದ ಅದಕ್ಕೆ ಹೋಲಿಸಿಕೊಂಡಿದ್ದಾರೆ ಎಂದು ಹೇಳಿದರು ಅದರೂ ನಮಗೆ ಬರುವ ಯೋಚನೆ ಬೇರೆಯವರಿಗೆ ಬರಬಾರದು ಎಂಬುದು ಇಲ್ಲ. ಆದ್ದರಿಂದ ಚಿತ್ರ ಹುಡುಕಿ ನೋಡಿದಾಗ ತಮಿಳು ಚಿತ್ರಕ್ಕೂ ನಮಗೂ ಯಾವುದೇ ಚಿಕ್ಕ ಸಂಬಂಧವೂ ಇಲ್ಲ ಎಂಬುದು ತಿಳಿಯಿತು.



# ದಿನಕರ್ ತೂಗುದೀಪ ನಿರ್ದೇಶನದ ರಾಯಲ್ ಚಿತ್ರ ಹೊಸ ವರ್ಷಕ್ಕೆ ತೆರೆಗೆ

ಜಯಣ್ಣ ಫಿಲಂಸ್ ಜಯಣ್ಣ ಮತ್ತು ಭೋಗೇಂದ್ರ ರಾಯಲ್ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದು, ಚಿತ್ರಕ್ಕೆ ಚರಣ್ ರಾಜ್ ಸಂಗೀತ ಸಂಯೋಜನೆ ಮಾಡಿದ್ದಾರೆ.

6 ವರ್ಷಗಳ ಬ್ರೇಕ್ ಬಳಿಕ ನಿರ್ದೇಶಕ ದಿನಕರ್ ತೂಗುದೀಪ ಅವರು ರಾಯಲ್ ಚಿತ್ರದ ಮೂಲಕ ಸ್ಯಾಂಡಲ್ ವುಡ್ ವಾಪಸ್ಸಾಗುತ್ತಿದ್ದು, ಚಿತ್ರವು 2025ರ ಜನವರಿ 24 ರಂದು ತೆರೆಗೆ ಬರಲು ಸಜ್ಜಾಗಿದೆ.

ಜಯಣ್ಣ ಫಿಲಂಸ್ (ಜಯಣ್ಣ ಮತ್ತು ಭೋಗೇಂದ್ರ) ರಾಯಲ್ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದು, ಚಿತ್ರಕ್ಕೆ ಚರಣ್ ರಾಜ್ ಸಂಗೀತ ಸಂಯೋಜನೆ ಮಾಡಿದ್ದಾರೆ. ಈಗಾಗೇ ಚಿತ್ರದ ಲಾ ಓ ಮೇರಿ ಲೈಲಾ' ಹಾಡು ವೈರಲ್ ಆಗಿದ್ದು, ಪ್ರೇಕ್ಷಕರ ಗಮನ ಸೆಳೆದಿದೆ.


ಯೂತ್‌ಫುಲ್ ಕಮರ್ಷಿಯಲ್ ಎಂಟರ್‌ಟೈನರ್ ಚಿತ್ರ ಇದಾಗಿದ್ದು, ಭಾವನಾತ್ಮಕತೆ, ಹಾಸ್ಯ ಮತ್ತು ಆಯಕ್ಷನ್‌ಗಳ ಮಿಶ್ರಣ ಸಂದೇಶವನ್ನು ಒಳಗೊಂಡಿದೆ. ಚಿತ್ರದ ನಾಯಕನಾಗಿ ವಿರಾಟ್ ಅಭಿನಯಿಸಿದ್ದು, ವಿರಾಟ್'ಗೆ ಜೋಡಿಯಾಗಿ ಸಂಜನಾ ಆನಂದ್ ಕಾಣಿಸಿ ಕೊಂಡಿದ್ದಾರೆ.



ಇನ್ನುಳಿದಂತೆ ರಘು ಮುಖರ್ಜಿ, ಛಾಯಾ ಸಿಂಗ್, ಅಚ್ಯುತ್ ಕುಮಾರ್, ರಂಗಾಯಣ ರಘು, ಪ್ರಮೋದ್ ಶೆಟ್ಟಿ, ಅಭಿಲಾಷ್, ಮತ್ತು ಗೌರವ್ ಶೆಟ್ಟಿ ಮುಂತಾದ ತಾರಾಬಳಗ ಚಿತ್ರಕ್ಕಿದೆ. ಚಿತ್ರದ ಛಾಯಾಗ್ರಹಣವನ್ನು ಸಂಕೇತ್ ಮೈಸೂರು ನಿರ್ವಹಿಸಿದ್ದಾರೆ. ಕಿಸ್ ಚಿತ್ರದಲ್ಲಿ ನಟಿಸಿದ್ದ ವಿರಾಟ್ ಅವರಿಗೆ ರಾಯಲ್ ಎರಡನೇ ಚಿತ್ರವಾಗಿದೆ.

ಇನ್ನು ತೆಲುಗು ಸಿನಿಮಾಗಳಲ್ಲಿ ಬಿಝಿಯಾಗಿದ್ದ ಸಂಜನಾ ಅವರು ವಿಂಡೋಸೀಟ್ ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ವಾಪಸ್ಸಾಗಿದ್ದು, ರಾಯಲ್ ಚಿತ್ರದಲ್ಲಿ ನಟಿಸಿದ್ದಾರೆ.

# ಮದುವೆಯ ಬಳಿಕ ಕಾಕ್‌ಟೈಲ್ ಪಾರ್ಟಿಯಲ್ಲಿ ಮಿಂಚಿದ ನಾಗಚೈತನ್ಯ ಪತ್ನಿ



ಟಾಲಿವುಡ್ ನಟ ನಾಗಚೈತನ್ಯ ಜೊತೆ ಶೋಭಿತಾ ಧುಲಿಪಾಲ ಮದುವೆ ಇತ್ತೀಚೆಗೆ ಅದ್ದೂರಿಯಾಗಿ ನೆರವೇರಿತು. ಈ ಬೆನ್ನಲ್ಲೇ ನವ ಜೋಡಿ ಕಾಕ್‌ಟೈಲ್ ಪಾರ್ಟಿ ಆಯೋಜಿಸಿದ್ದಾರೆ. ಈ ಪಾರ್ಟಿಯಲ್ಲಿ ಶೋಭಿತಾ ಸ್ಟೈಲೀಶ್ ಆಗಿ ಕಾಣಿಸಿಕೊಂಡಿದ್ದಾರೆ. ಲೈಟ್ ಬಣ್ಣದ ಧಿರಿಸಿನಲ್ಲಿ ಸಖತ್ ಹಾಟ್ ಆಗಿ ಶೋಭಿತಾ ಕಾಣಿಸಿಕೊಂಡಿದ್ದಾರೆ. ನಟಿಯ ಲುಕ್‌ಗೆ ಅಭಿಮಾನಿಗಳಿಂದ ಪ್ರಶಂಸೆ ವ್ಯಕ್ತವಾಗಿದೆ. ಅನ್ನಪೂರ್ಣ ಸ್ಟುಡಿಯೋದಲ್ಲಿ ಡಿ.4ರಂದು ರಾತ್ರಿ 8:15ಕ್ಕೆ ಶೋಭಿತಾ ಮತ್ತು ನಾಗಚೈತನ್ಯ ಹಸೆಮಣೆ ಏರಿದರು. ಖುಷಿ ಖುಷಿಯಾಗಿ ಇಬ್ಬರೂ ಮದುವೆಯಾಗಿದ್ದಾರೆ. ಮದುವೆಯಲ್ಲಿ ಶೋಭಿತಾ ಮತ್ತು ನಾಗಚೈತನ್ಯ ಬಿಳಿ ಬಣ್ಣದ ಉಡುಗೆಯಲ್ಲಿ ಕಂಗೊಳಿಸಿದ್ದಾರೆ. ಮತ್ತೊಂದು ಫೋಟೋದಲ್ಲಿ ನಟಿ ಗೋಲ್ಡನ್ ಸೀರೆಯಲ್ಲಿ ಮಿಂಚಿದ್ದಾರೆ. ಇನ್ನೂ ಶೋಭಿತಾ ಮತ್ತು ನಾಗಚೈತನ್ಯ ಕಾಲೇಜು ದಿನಗಳಿಂದ ಪರಿಚಿತರು. ಸಮಂತಾ ಜೊತೆಗಿನ ದಾಂಪತ್ಯಕ್ಕೆ ಪೂರ್ಣ ವಿರಾಮ ಬಿದ್ಮೇಲೆ ಶೋಭಿತಾ ಎಂಟ್ರಿ ಕೊಟ್ಟರು.ಎರಡೂವರೆ ವರ್ಷಗಳ ಡೇಟಿಂಗ್ ನಂತರ ಗುರುಹಿರಿಯರ ಸಮ್ಮತಿ ಪಡೆದು ಹೊಸ ಬಾಳಿಗೆ ನಾಗಚೈತನ್ಯ ಮತ್ತು ಶೋಭಿತಾ ಕಾಲಿಟ್ಟಿದ್ದಾರೆ.

# ವಿಜಯ್ ಸೇತುಪತಿಗೆ ರುಕ್ಮಿಣಿ ವಸಂತ್ ನಾಯಕಿ

ಪಡ್ಡೆಹುಡುಗರ ಕ್ರಶ್ ರುಕ್ಮಿಣಿ ವಸಂತ್ ಅವರು ಕಾಲಿವುಡ್‌ನತ್ತ ಮುಖ ಮಾಡಿದ್ದಾರೆ. ಕೆಲ ತಿಂಗಳುಗಳ ಹಿಂದೆಯೇ ವಿಜಯ್ ಸೇತುಪತಿಗೆ ರುಕ್ಮಿಣಿ ನಾಯಕಿಯಾಗಿರುವ ವಿಚಾರ ಅನೌನ್ಸ್ ಆಗಿದೆ. ಇದೀಗ ರುಕ್ಮಿಣಿ ಹುಟ್ಟುಹಬ್ಬದ ಹಿನ್ನೆಲೆ ಅವರ ಪಾತ್ರದ ಗ್ಲಿಂಪ್ಸ್ ಅನ್ನು ಚಿತ್ರತಂಡ ರಿವೀಲ್ ಮಾಡಿದೆ.

ವಿಜಯ್ ಸೇತುಪತಿಗೆ ಜೋಡಿಯಾಗಿ ಸಿನಿಮಾದಲ್ಲಿ ರುಕ್ಕು ಎಂಬ ಪಾತ್ರದಲ್ಲಿ ರುಕ್ಮಿಣಿ ನಟಿಸಿದ್ದಾರೆ. ಚಿತ್ರದ ಗ್ಲಿಂಪ್ಸನಲ್ಲೂ ನಟಿ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಇನ್ನೂ ಸದ್ಯ ಹುಟ್ಟುಹಬ್ಬಕ್ಕೆ ನಟಿಗೆ ಅಭಿಮಾನಿಗಳಿಂದ ಶುಭಾಶಯಗಳ ಮಹಾಪೂರವೇ ಹರಿದು ಬರುತ್ತಿದೆ.

ಇನ್ನೂ ಬೀರಬಲ್, ಸಪ್ತಸಾಗರದಾಚೆ ಎಲ್ಲೋ, ಬಾನದಾರಿಯಲಿ, ಬಘೀರ, ಭೈರತಿ ರಣಗಲ್ ಸಿನಿಮಾದಲ್ಲಿ ನಟಿಸಿ ಸೈ ಎನಿಸಿಕೊಂಡಿದ್ದಾರೆ.





# ಬಿಳಿಚುಕ್ಕಿ ಹಳ್ಳಿಹಕ್ಕಿಗೆ ಕಾಜಲ್‌ಕುಂದರ್ ಎಂಟ್ರಿ

ಸುತ್ತಾ ಜರುಗುವ, ಪಕ್ಕಾ ಕಮರ್ಶಿಯಲ್ ದಾಟಿಯ ಈ ಸಿನಿಮಾ ಭಾರತೀಯ ಚಿತ್ರರಂಗದಲ್ಲೇ ಮೊದಲೆಂಬ ಹೆಗ್ಗಳಿಕೆಯನ್ನೂ ಹೊಂದಿದೆ. ಪೆಪೆ ಮತ್ತು ಮೇಘಾ ಚಿತ್ರದಲ್ಲಿನ ಅಭಿನಯದಿಂದ ಮೆಚ್ಚಿಗೆ ಗಳಿಸಿರುವ ನಟಿ ಕಾಜಲ್ ಕುಂದರ್ ಅವರು ಬಿಳಿಚುಕ್ಕಿ ಹಳ್ಳಿಹಕ್ಕಿಯಲ್ಲಿ ನಾಯಕಿ ನಟಿಯಾಗಿ ನಟಿಸುತ್ತಿದ್ದಾರೆ. ಮಹೇಶ್ ಗೌಡ ಅವರು ನಟಿಸಿ, ನಿರ್ಮಾಣ ಮಾಡಿ, ನಿರ್ದೇಶಿಸಿರುವ ಈ ಸಿನಿಮಾ ಚರ್ಮದ ಕಾಯಿಲೆ ತೊನ್ನು ಬಗೆಗಿನ ಕಥಾ ಹಂದರವನ್ನೊಳಗೊಂಡಿದೆ. ಸುತ್ತಾ ಜರುಗುವ, ಪಕ್ಕಾ ಕಮರ್ಶಿಯಲ್ ದಾಟಿಯ ಈ ಸಿನಿಮಾ ಭಾರತೀಯ ಚಿತ್ರರಂಗದಲ್ಲೇ ಮೊದಲೆಂಬ ಹೆಗ್ಗಳಿಕೆಯನ್ನೂ ಹೊಂದಿದೆ. ಚಿತ್ರದ ನಾಯಕಿ ಪಾತ್ರದಲ್ಲಿ ವೈಷ್ಣವಿ ಗೌಡ ನಟಿಸಲಿದ್ದಾರೆಂದು ಹೇಳಲಾಗಿತ್ತು. ಇದೀಗ ಪಾತ್ರಕ್ಕೆ ಕಾಜಲ್ ಕುಂದರ್ ಎಂಟ್ರಿ ಕೊಟ್ಟಿದ್ದು, ಪೋಸ್ಟರ್ ಅನ್ನು ಚಿತ್ರ ತಂಡ ಬಿಡುಗಡೆಗೊಳಿಸಿದೆ. ಪಾತ್ರಕ್ಕೆ ಕಾಜಲ್ ಅವರು ಜೀವ ತುಂಬಿದ್ದಾರೆ. ಕಥೆಯಲ್ಲಿ ನಿರ್ಣಾಯಕ ಪಾತ್ರವನ್ನು ನಿರ್ವಹಿಸಿದ್ದಾರೆ. ಇಂತಹ ನಟಿ ಕನ್ನಡ ಚಿತ್ರರಂಗದಲ್ಲಿ ಸಕ್ರಿಯರಾಗಬೇಕು, ಇನ್ನೂ ಒಂದಷ್ಟು ಸವಾಲಿನ ಪಾತ್ರಗಳಿಗೆ ಜೀವ ತುಂಬಬೇಕು ಎಂಬುದು ನನ್ನ ಆಶಯ ಎಂದು ನಿರ್ದೇಶಕ ಮಹೇಶ್ ಗೌಡ ಅವರು ಹೇಳಿದ್ದಾರೆ. ಹೊನುಡಿ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗಿರುವ ಈ ಚಿತ್ರಕ್ಕೆ ರಿಯೋ ಆಂಟೋನಿ ಅವರ ಸಂಗೀತ ಮತ್ತು ಕಿರಣ್ ಸಿಎಚ್ಎಂ ಅವರ ಛಾಯಾಗ್ರಹಣವಿದೆ. ಸದ್ಯ ಪೋಸ್ಟ್ ಪ್ರೊಡಕ್ಷನ್ ಹಂತದಲ್ಲಿರುವ ಚಿತ್ರತಂಡ ಶೀಘ್ರದಲ್ಲೇ ಬಿಡುಗಡೆ ದಿನಾಂಕವನ್ನು ಘೋಷಿಸಲು ಸಿದ್ಧತೆ ನಡೆಸಿದೆ.

# ಟೀಂ ಇಂಡಿಯಾ ಪರ 3 ಪಂದ್ಯಗಳನ್ನಾಡಿದ್ದ ಆಟಗಾರನಿಗೆ ಶ್ರೀಲಂಕಾದಲ್ಲಿ ಒಲಿದ ನಾಯಕತ್ವ

## ಆರ್‌ಸಿಬಿ ಪರ ಆಡಿದ್ದ ಸೌರಭ್

**ರಾಷ್ಟ್ರೀಯ ತಂಡದಲ್ಲಿ ಸೌರಭ್ ತಿವಾರಿಗೆ ಹೆಚ್ಚಿನ ಅವಕಾಶಗಳು ಸಿಗದಿದ್ದರೂ, ಈ ಆಟಗಾರ 2008 ರಲ್ಲಿ ಭಾರತಕ್ಕೆ ಅಂಡರ್-19 ವಿಶ್ವಕಪ್ ಗೆದ್ದ ತಂಡದ ಭಾಗವಾಗಿದ್ದರು. ಇದಲ್ಲದೇ ಸೌರಭ್ ತಿವಾರಿ ಐಪಿಎಲ್‌ನಲ್ಲಿ 93 ಪಂದ್ಯಗಳನ್ನು ಆಡಿದ್ದು, ಈ ಅವಧಿಯಲ್ಲಿ ಅವರು 1494 ರನ್ ಗಳಿಸಿದ್ದಾರೆ. ಇದೀಗ ತಮ್ಮ ನಾಯಕತ್ವದಲ್ಲಿ ನುವಾರಾ ಎಲಿಯಾ ಕಿಂಗ್ಸ್ ತಂಡವನ್ನು ಮುನ್ನಡೆಸುತ್ತಿರುವ ಸೌರಭ್ ತಿವಾರಿ ಮೊದಲ ದಿನವೇ ನಾಯಕನಾಗಿ ಅಖಾಡಕ್ಕಿಳಿಯಲಿದ್ದಾರೆ.**


ಚೊಚ್ಚಲ ಆವೃತ್ತಿಯ ಲಂಕಾ ಟಿ10 ಸೂಪರ್ ಲೀಗ್ ಡಿಸೆಂಬರ್ 11 ರಿಂದ ಶ್ರೀ ಲಂಕಾದಲ್ಲಿ ಆರಂಭವಾಗಲಿದೆ. ಈ ಲೀಗ್‌ನಲ್ಲಿ ತಲಾ 10 ಓವರ್‌ಗಳ ಪಂದ್ಯಗಳು ನಡೆಯಲಿದ್ದು, ಇದರಲ್ಲಿ ಒಟ್ಟು 6 ತಂಡಗಳು ಭಾಗವಹಿಸಲಿವೆ. ಈ ಲೀಗ್‌ನ ಎಲ್ಲಾ ಪಂದ್ಯಗಳು ಕ್ಯಾಂಡಿಯ ಪಲ್ಲೆಕೆಲೆ ಅಂತರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆಯಲಿವೆ. ಅಚ್ಚರಿಯ ವಿಷಯವೆಂದರೆ ಈ ಆರು ಫ್ರಾಂಚೈಸಿಗಳ ಪೈಕಿ ಒಬ್ಬ ಭಾರತೀಯ ಆಟಗಾರನಿಗೂ ತಂಡದ ನಾಯಕತ್ವ ಸಿಕ್ಕಿದೆ. ಆ ಆಟಗಾರ ಬೇರ್ಯಾರು ಅಲ್ಲ, ಟೀಂ ಇಂಡಿಯಾ ಪರ ಮೂರು ಪಂದ್ಯಗಳನ್ನಾಡಿದ್ದ ಸೌರಭ್ ತಿವಾರಿ. ಈ ವರ್ಷದ ಆರಂಭದಲ್ಲಿ ಎಲ್ಲಾ ಮಾದರಿಯ ಕ್ರಿಕೆಟ್‌ನಿಂದ ನಿವೃತ್ತರಾಗಿದ್ದ ಸೌರಭ್ ತಿವಾರಿ ಐಪಿಎಲ್‌ನಲ್ಲಿ ಆರ್‌ಸಿಬಿ ಪರವೂ ಆಡಿದ್ದರು. ಇದೀಗ ಅವರಿಗೆ ಲಂಕಾ ಟಿ10 ಸೂಪರ್ ಲೀಗ್‌ನಲ್ಲಿ ತಂಡದ ನಾಯಕತ್ವ ಸಿಕ್ಕಿದೆ.

**ಕಿಂಗ್ಸ್ ತಂಡಕ್ಕೆ ಸೌರಭ್ ನಾಯಕ:** ಲಂಕಾ ಟಿ10 ಸೂಪರ್ ಲೀಗ್‌ನಲ್ಲಿ ಆಡುತ್ತಿರುವ ಆರು ತಂಡಗಳಲ್ಲಿ ನುವಾರ ಎಲಿಯಾ ಕಿಂಗ್ಸ್ ಕೂಡ ಒಂದಾಗಿದೆ. ಇದೀಗ ಈ ತಂಡದ ನಾಯಕತ್ವವನ್ನು ಭಾರತದ ಮಾಜಿ ಆಟಗಾರ ಸೌರಭ್ ತಿವಾರಿಗೆ ನೀಡಲಾಗಿದೆ. ಸೌರಭ್ ತಿವಾರಿ ಈ ವರ್ಷದ ಆರಂಭದಲ್ಲಿ ಎಲ್ಲಾ ಮಾದರಿಯ ಕ್ರಿಕೆಟ್‌ನಿಂದ ನಿವೃತ್ತರಾಗಿದ್ದರು. ಟೀಂ ಇಂಡಿಯಾ ಪರ ಕೇವಲ 3 ಪಂದ್ಯಗಳನ್ನು ಆಡಿದ್ದ ತಿವಾರಿ, 2010ರಲ್ಲಿ ಆಸ್ಟ್ರೇಲಿಯ ವಿರುದ್ಧ ಏಕದಿನ ಕ್ರಿಕೆಟ್‌ಗೆ ಪದಾರ್ಪಣೆ ಮಾಡಿದ್ದರು. ಅದೇ ವರ್ಷ ನ್ಯೂಜಿಲೆಂಡ್ ವಿರುದ್ಧ ಕೊನೆಯ ಏಕದಿನ ಪಂದ್ಯವನ್ನು ಆಡಿದ್ದರು. ಇದಾದ ನಂತರ ಭಾರತ ತಂಡದಲ್ಲಿ ಅವರಿಗೆ ಸ್ಥಾನ ಸಿಗಲಿಲ್ಲ. ಪಂದ್ಯಾವಳಿಯ ಆರಂಭಿಕ ದಿನದಂದು ಒಟ್ಟು ಮೂರು ಪಂದ್ಯಗಳು ನಡೆಯಲ್ಲಿವೆ. ಮೊದಲ ಪಂದ್ಯ ಜಾಫ್ನಾ ಟೈಟಾನ್ಸ್ ಟೂರ್ನಮೆಂಟ್ ಮತ್ತು ಹಂಬನ್ತೋಟ ಬಾಂಗ್ಲಾ ಟೈಗರ್ಸ್ ನಡುವೆ ನಡೆಯಲಿದೆ. ಇದರ ನಂತರ ನುವಾರಾ ಎಲಿಯಾ ಕಿಂಗ್ಸ್ ಕೊಲಂಬೊ ಜಾಗ್ವಾರ್ಸ್ ತಂಡವನ್ನು ಎದುರಿಸಲಿದೆ. ದಿನದ ಕೊನೆಯ ಪಂದ್ಯದಲ್ಲಿ ಕ್ಯಾಂಡಿ ಬೋಲ್ಟ್ಸ್ ಮತ್ತು ಗಾಲೆ ಮಾರ್ವೆಲ್ಸ್ ನಡುವೆ ಹಣಾಹಣಿ ನಡೆಯಲಿದೆ.



ಎಲ್ಲಾ 6 ತಂಡಗಳು ಹೀಗಿವೆ ಕೊಲಂಬೊ ಜಾಗ್ವಾರ್ಸ್: ಏಂಜೆಲೊ ಮ್ಯಾಥ್ಯೂಸ್ (ನಾಯಕ), ಡಾನ್ ಲಾರೆನ್ಸ್, ಮಥೀಶ ಪತಿರಾನ, ಕಮಿಂದು ಮೆಂಡಿಸ್, ಆಸಿಫ್ ಅಲಿ, ಜೇಸನ್ ರಾಯ್, ಅಕಿಲಾ ಧನಂಜಯ್, ಏಂಜೆಲೊ ಪೆರೆರಾ, ನಜಿಬುಲ್ಲಾ ಜದ್ರಾನ್, ಅಲಿ ಖಾನ್, ಇಸಿತಾ ವಿಜೆಸುಂದರ, ರಮೇಶ್ ಮೆಂಡಿಸ್, ರೋನಿ ಕಾಮರಮತ್ನೆ, ಅಸಿತ ಫರ್ನಾಂಡೋ, ದಿಲ್ಶನ್ ಮಧುಶಂಕರ, ಗರುಕ ಸಿಗ್ನಲ್. ಗಾಲೆ ಮಾರ್ವೆಲ್ಸ್: ಮಹೇಶ್ ತೀಕ್ಷಣ (ನಾಯಕ), ಶಕೀಬ್ ಅಲ್ ಹಸನ್, ಭಾನುಕಾ ರಾಜಪಕ್ಸೆ, ಬಿನುರಾ ಫರ್ನಾಂಡೋ, ಅಲೆಕ್ಸ್ ಹೇಲ್ಸ್, ಲ್ಯೂಕ್ ವುಡ್, ಚಮಿಂದು ವಿಕ್ರಮಸಿಂಘೆ, ಜೆಫ್ರಿ ವಾಂಡರ್ಸೆ, ಆಂಡ್ರೆ ಫ್ಲೆಚರ್, ಜಹೂರ್ ಖಾನ್, ಸಂದುನ್ ವೀರಕ್ಕೋಡಿ, ಪ್ರಭಾತ್ ಜಯಸೂರ್ಯ, ಡುಮಿನ್ ಸಿಡು ವಿಲ್‌ಶಿವ, ಕೆಸ್ರಿಕ್‌ಡು ವಿಲ್‌ಶಿಯ ರಾಜಪಕ್ಸೆ.

**ಹಂಬಂಟೋಟ ಬಾಂಗ್ಲಾ ಟೈಗರ್ಸ್:** ದಸುನ್ ಶನಕ, ಶೆವೊನ್ ಡೇನಿಯಲ್, ಕುಸಲ್ ಜೆನಿತ್ ಪೆರೇರಾ, ದುಷ್ಮಂತ ಚಮೀರ, ಹಜರತುಲ್ಲಾ ಝುಜೈ, ರಿಚರ್ಡ್ ಗ್ಲೀಸನ್, ಇಸುರು ಉದಾನ, ತರಿಂದು ರತ್ನಾಯಕೆ, ಕರೀಂ ಜನತ್, ಮೊಹಮ್ಮದ್ ಶಹಜಾದ್, ಧನಂಜಯ್ ಲಕ್ಷಣ್, ನಿಶಾನ್ ಪೆರಿಚುಗೆಸ್, ಚಮತ್ ಪೆರಿಚುಗೆಸ್.



# ಆಟಗಾರರನ್ನೊಳಗೊಂಡ ಈ ಶತಮಾನದ ಶ್ರೇಷ್ಠ ಟೆಸ್ಟ್ ತಂಡ ಪ್ರಕಟಿಸಿದ ಕ್ಲಾರ್ಕ್

ಮೈಕೆಲ್ ಕ್ಲಾರ್ಕ್ ಅವರು ಭಾರತ ಮತ್ತು ಆಸ್ಟ್ರೇಲಿಯಾ ಕ್ರಿಕೆಟ್ ದಿಗ್ಗಜರನ್ನು ಒಳಗೊಂಡ ಡ್ರೀಮ್ ಟೆಸ್ಟ್ ತಂಡವನ್ನು ಆಯ್ಕೆ ಮಾಡಿದ್ದಾರೆ. ಮ್ಯಾಥ್ಯೂ ಹೇಡನ್ ಮತ್ತು ವೀರೇಂದ್ರ ಸೆಹ್ವಾಗ್ ಆರಂಭಿಕರಾಗಿದ್ದರೆ, ಸಚಿನ್ ತೆಂಡೂಲ್ಕರ್ ಮತ್ತು ವಿರಾಟ್ ಕೊಹ್ಲಿ ಮಧ್ಯಮ ಕ್ರಮಾಂಕದಲ್ಲಿದ್ದಾರೆ. ಎಂ.ಎಸ್. ಧೋನಿ ಮತ್ತು ಆಡಮ್ ಗಿಲ್‌ಕ್ರಿಸ್ಟ್ ವಿಕೆಟ್ ಕೀಪರ್ ಆಗಿ ಆಯ್ಕೆಯಾಗಿದ್ದಾರೆ. ಶೇನ್ ವಾರ್ನ್, ಜಸ್ಪ್ರೀತ್ ಬುಮ್ರಾ ಸೇರಿದಂತೆ ಅತ್ಯುತ್ತಮ ಬೌಲರ್‌ಗಳನ್ನು ಕ್ಲಾರ್ಕ್ ಆಯ್ಕೆ ಮಾಡಿದ್ದಾರೆ. ಭಾರತ ಮತ್ತು ಆಸ್ಟ್ರೇಲಿಯಾ ನಡುವೆ ನಡೆಯುತ್ತಿರುವ 5 ಟೆಸ್ಟ್ ಪಂದ್ಯಗಳ ಬಾರ್ಡರ್-ಗವಾಸ್ಕರ್ ಟ್ರೋಫಿ ರೋಚಕ ಘಟ್ಟ ತಲುಪಿದೆ. ಉಭಯ ತಂಡಗಳು ಇಲ್ಲಿಯವರೆಗೆ ತಲಾ ಒಂದೊಂದು ಪಂದ್ಯಗಳನ್ನು ಗೆದ್ದಿರುವುದರಿಂದ ಸರಣಿಯ ಉಳಿದ ಪಂದ್ಯಗಳು ಬಹಳ ಮಹತ್ವದ್ದಾಗಿವೆ.

ಏತನ್ಮಧ್ಯೆ, ಆಸ್ಟ್ರೇಲಿಯಾದ ಮಾಜಿ ನಾಯಕ ಮೈಕೆಲ್ ಕ್ಲಾರ್ಕ್ ಅವರು ಭಾರತ ಮತ್ತು ಆಸ್ಟ್ರೇಲಿಯಾದ ಆಟಗಾರರನ್ನು ಒಳಗೊಂಡ ಈ ಶತಮಾನದ ಬೆಸ್ಟ್ ಟೆಸ್ಟ್ ತಂಡವನ್ನು ಆಯ್ಕೆ ಮಾಡಿದ್ದಾರೆ. ಮೈಕಲ್ ಕ್ಲಾರ್ಕ್ ಆಯ್ಕೆ ಮಾಡಿರುವ 11 ಆಟಗಾರರ ಬೆಸ್ಟ್ ಟೆಸ್ಟ್ ತಂಡದಲ್ಲಿ ಸ್ಫೋಟಕ ಬ್ಯಾಟ್ಸ್‌ಮನ್‌ಗಳಾದ ಮ್ಯಾಥ್ಯೂ ಹೇಡನ್ ಮತ್ತು ವೀರೇಂದ್ರ ಸೆಹ್ವಾಗ್ ಅವರನ್ನು ಆರಂಭಿಕರಾಗಿ ಆಯ್ಕೆ ಮಾಡಿದ್ದಾರೆ. ಬಾರ್ಡರ್-ಗವಾಸ್ಕರ್ ಟ್ರೋಫಿಯಲ್ಲಿ ಈ ಇಬ್ಬರೂ ಆಟಗಾರರ ಅಂಕಿಅಂಶಗಳು ಅತ್ಯುತ್ತಮವಾಗಿವೆ. ಸೆಹ್ವಾಗ್ ಟೆಸ್ಟ್ ಕ್ರಿಕೆಟ್‌ನಲ್ಲಿ 49.34 ಸರಾಸರಿಯಲ್ಲಿ 8586 ರನ್ ಗಳಿಸಿದ್ದರೆ, ಹೇಡನ್ 50.74 ಸರಾಸರಿಯಲ್ಲಿ 8625 ರನ್ ಗಳಿಸಿದ್ದಾರೆ. ಭಾರತದ ವಿರುದ್ಧ ಆಸ್ಟ್ರೇಲಿಯಾದ ಅತ್ಯಂತ ಯಶಸ್ವಿ ಬ್ಯಾಟ್ಸ್‌ಮನ್‌ಗಳಲ್ಲಿ ರಿಕಿ ಪಾಂಟಿಂಗ್ ಕೂಡ ಒಬ್ಬರು. ಹೀಗಾಗಿ ರಿಕಿ ಪಾಂಟಿಂಗ್‌ಗೆ ಕ್ಲಾರ್ಕ್ ಮೂರನೇ ಕ್ರಮಾಂಕ ನೀಡಿದ್ದಾರೆ. ಇದಲ್ಲದೇ ಆಸ್ಟ್ರೇಲಿಯಾವನ್ನು ಅವರ ನೆಲದಲ್ಲೇ ಹೈರಾಣಾಗಿಸಿರುವ ಸಚಿನ್ ತೆಂಡೂಲ್ಕರ್ ಅವರನ್ನು ನಾಲ್ಕನೇ ಕ್ರಮಾಂಕದಲ್ಲಿ ಮತ್ತು ವಿರಾಟ್ ಕೊಹ್ಲಿಯನ್ನು ಐದನೇ ಕ್ರಮಾಂಕದಲ್ಲಿ ಇರಿಸಿದ್ದಾರೆ. ಆರನೇ ಕ್ರಮಾಂಕದಲ್ಲಿ ಸ್ಟೀವ್ ಸ್ಮಿತ್ ಆಯ್ಕೆಯಾಗಿದ್ದಾರೆ ಅದೇ ಸಮಯದಲ್ಲಿ, ಮೈಕೆಲ್ ಕ್ಲಾರ್ಕ್ ತನ್ನ ತಂಡದಲ್ಲಿ ಎರಡೂ ದೇಶಗಳ ತಲಾ ಒಬ್ಬ ಆಟಗಾರನನ್ನು ವಿಕೆಟ್ ಕೀಪರ್ ಆಗಿ ಆಯ್ಕೆ ಮಾಡಿದ್ದಾರೆ. ಈ ಇಬ್ಬರು ವಿಕೆಟ್ ಕೀಪರ್‌ಗಳಲ್ಲಿ ಎಂಎಸ್ ಧೋನಿ ಮತ್ತು ಆಡಮ್ ಗಿಲ್‌ಕ್ರಿಸ್ಟ್ ಸೇರಿದ್ದಾರೆ. ಇನ್ನು ಬೌಲಿಂಗ್ ವಿಭಾಗದಲ್ಲಿ ಕ್ಲಾರ್ಕ್ ಒಟ್ಟು 4 ಬೌಲರ್‌ಗಳನ್ನು ಆಯ್ಕೆ ಮಾಡಿದ್ದಾರೆ. ಅದರಲ್ಲಿ ಶೇನ್ ವಾರ್ನ್ ಮಾತ್ರ ತಂಡದಲ್ಲಿರುವ ಏಕೈಕ ಸ್ಪಿನ್ನರ್ ಆಗಿದ್ದಾರೆ.



# ಅಭ್ಯಾಸದ ವೇಳೆ ಗಾಯಗೊಂಡ ಗಾಬಾ ಹೀರೋ ರಿಷಬ್ ಪಂತ್

ಭಾರತ ತಂಡದ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ರಿಷಭ್ ಪಂತ್ ಅವರು ಬ್ರಿಸ್ಬೇನ್‌ನಲ್ಲಿ ನಡೆಯಲಿರುವ ಮೂರನೇ ಟೆಸ್ಟ್ ಪಂದ್ಯಕ್ಕೂ ಮುನ್ನ ನೆಟ್ಸ್ ಅಭ್ಯಾಸದ ವೇಳೆ ಗಾಯಗೊಂಡಿದ್ದಾರೆ. ಥ್ರೋಡೌನ್ ಸ್ಪೆಷಲಿಸ್ಟ್ ರಘು ಅವರು ಎಸೆದ ಚೆಂಡು ಪಂತ್ ಅವರ ಹೆಲ್ಮೆಟ್‌ಗೆ ಬಡಿದಿದೆ. ಆದರೆ ಗಾಯ ಗಂಭೀರವಾಗಿಲ್ಲ ಎಂದು ವರದಿಯಾಗಿದೆ. ಸ್ವಲ್ಪ ವಿರಾಮದ ನಂತರ ಪಂತ್ ಮತ್ತೆ ಅಭ್ಯಾಸ ಆರಂಭಿಸಿದ್ದಾರೆ. ಅಡಿಲೇಡ್ ಟೆಸ್ಟ್‌ನಲ್ಲಿ 10 ವಿಕೆಟ್‌ಗಳ ಸೋಲನ್ನು ಎದುರಿಸಿದ ಟೀಂ ಇಂಡಿಯಾ ಪ್ರಸ್ತುತ ಬ್ರಿಸ್ಬೇನ್ ಟೆಸ್ಟ್‌ಗೆ ತಯಾರಿ ನಡೆಸುತ್ತಿದೆ. ಬಾರ್ಡರ್ ಗವಾಸ್ಕರ್ ಟ್ರೋಫಿಯ ಮೂರನೇ ಟೆಸ್ಟ್‌ಗೆ ಟೀಂ ಇಂಡಿಯಾದ ಎಲ್ಲಾ ಆಟಗಾರರು ತಯಾರಿ ನಡೆಸುತ್ತಿದ್ದಾರೆ. ಈ ಅವಧಿಯಲ್ಲಿ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ರಿಷಭ್ ಪಂತ್ ಕೂಡ ಬ್ಯಾಟಿಂಗ್ ಅಭ್ಯಾಸ ನಡೆಸುತ್ತಿದ್ದರು.

ಆದರೆ, ಥ್ರೋಡೌನ್ ಸ್ಪೆಷಲಿಸ್ಟ್ ರಘು ಅವರು ಎಸೆದ ಎಸೆತ ರಿಷಬ್ ಪಂತ್ ಗಾಯಗೊಳ್ಳುವಂತೆ ಮಾಡಿದೆ. ಬ್ರಿಸ್ಬೇನ್‌ನ ಗಾಬಾದಲ್ಲಿ ನಡೆಯಲಿರುವ ಟೆಸ್ಟ್‌ಗೆ ತಯಾರಿ ನಡೆಸುತ್ತಿದ್ದಾಗ ಪಂತ್ ಗಾಯಗೊಂಡಿದ್ದಾರೆ.

ಆದರೆ ಅದೃಷ್ಟವಶಾತ್ ಪಂತ್ ಅವರ ಗಾಯ ಅಷ್ಟು ಗಂಭೀರವಾಗಿಲ್ಲ. ಹೀಗಾಗಿ ಸ್ವಲ್ಪ ಸಮಯ ವಿರಾಮ ತೆಗೆದುಕೊಂಡಿದ್ದ ಪಂತ್, ಆ ಬಳಿಕ ಮತ್ತೆ ಬ್ಯಾಟಿಂಗ್ ಅಭ್ಯಾಸ ಮಾಡಿದ್ದಾರೆ. ಥ್ರೋಡೌನ್ ಸ್ಪೆಷಲಿಸ್ಟ್ ರಘು ಅವರು ರಿಷಬ್ ಪಂತ್‌ಗೆ ನೆಟ್ಸ್‌ನಲ್ಲಿ ಬೌಲಿಂಗ್ ಮಾಡುತ್ತಿದ್ದರು. ರಘು ಅವರು ಸೈಡ್ ಆರ್ಮ್ ಬೌಲಿಂಗ್ ಮಾಡುವ ಮೂಲಕ ಅಭ್ಯಾಸದಲ್ಲಿ ಪಂತ್‌ಗೆ ಸಹಾಯ ಮಾಡುತ್ತಿದ್ದರು. ಈ ವೇಳೆ ರಘು ಎಸೆದ ಚೆಂಡು ನೇರವಾಗಿ ಪಂತ್ ಅವರ ಹೆಲ್ಮೆಟ್‌ಗೆ ಬಡಿಯಿತು. ಹೀಗಾಗಿ ಪಂತ್ ಗಾಯಗೊಂಡರು. ರಿಷಬ್ ಪಂತ್ ಗಾಯಗೊಂಡ ನಂತರ ಬ್ಯಾಟಿಂಗ್ ಅಭ್ಯಾಸವನ್ನು ನಿಲ್ಲಿಸಿದರು. ಕೂಡಲೇ ವೈದ್ಯಕೀಯ ಸಿಬ್ಬಂದಿ, ಭಾರತದ ಫೀಲ್ಡಿಂಗ್ ಕೋಚ್ ಟಿ ದಿಲೀಪ್ ಮತ್ತು ಸಹಾಯಕ ಕೋಚ್ ರಿಯಾನ್ ಟೆನ್ ಡೋಸ್ಚೇಟ್ ಪಂತ್ ಬಳಿಗೆ ಬಂದು ಅವರನ್ನು ಪರಿಶೀಲಿಸಿದರು.

# ಸಹಾಯಕ ಕೋಚ್‌ಗೆ 6 ವರ್ಷ ಕ್ರಿಕೆಟ್‌ನಿಂದ ನಿಷೇಧ

ಯುಎಇಯಲ್ಲಿನಡೆಯುವ ಅಬುಧಾಬಿ ಟಿ-10 ಲೀಗ್ ಮತ್ತೊಮ್ಮೆ ಮ್ಯಾಚ್ ಫಿಕ್ಸಿಂಗ್ ಆರೋಪದಿಂದಾಗಿ ಸುದ್ದಿಯಲ್ಲಿದೆ. ಇತ್ತೀಚೆಗಷ್ಟೇ ಈ ಲೀಗ್‌ನ 8ನೇ ಸೀಸನ್ ನಡೆದಿದ್ದು, ಈ ಸಂದರ್ಭದಲ್ಲೂ ಮ್ಯಾಚ್ ಫಿಕ್ಸಿಂಗ್ ಬಗ್ಗೆ ಸಾಕಷ್ಟು ಚರ್ಚೆಗಳಾಗಿದ್ದವು. ಅಭಿಮಾನಿಗಳು ಕೂಡ ಈ ಲೀಗ್‌ನಲ್ಲಿ ಮುಕ್ತವಾಗಿಯೇ ಮ್ಯಾಚ್ ಫಿಕ್ಸಿಂಗ್ ನಡೆಯುತ್ತಿದೆ ಎಂದು ಆರೋಪಿಸಿದ್ದರು. ಈ ನಡುವೆ ಐಸಿಸಿ, ಮ್ಯಾಚ್ ಫಿಕ್ಸಿಂಗ್ ಆರೋಪದಡಿಯಲ್ಲಿ ತಂಡವೊಂದರ ಮಾಜಿ ಸಹಾಯಕ ಕೋಚ್‌ಗೆ 6 ವರ್ಷಗಳ ಕಾಲ ಎಲ್ಲಾ ಸ್ವರೂಪಗಳ ಕ್ರಿಕೆಟ್‌ನಿಂದ ನಿಷೇಧ ಹೇರಿದೆ. ಧಿಲ್ಲೋನ್‌ಗೆ 6 ವರ್ಷಗಳ ಕಾಲ ನಿಷೇಧ ಅಬುಧಾಬಿ ಟಿ10 ಲೀಗ್‌ನಲ್ಲಿ ಫ್ರಾಂಚೈಸಿಯ ಮಾಜಿ ಸಹಾಯಕ ಕೋಚ್ ಆಗಿರುವ ಸನ್ನಿ ಧಿಲ್ಲೋನ್ ಅವರನ್ನು ಪಂದ್ಯಗಳನ್ನು ಫಿಕ್ಸ್ ಮಾಡಲು ಪ್ರಯತ್ನಿಸಿದ್ದಕ್ಕಾಗಿ ಕ್ರಿಕೆಟ್‌ನ ಎಲ್ಲಾ ಸ್ವರೂಪಗಳಿಂದ ಆರು ವರ್ಷಗಳ ಕಾಲ ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ ನಿಷೇಧಿಸಿದೆ. ಕಳೆದ ವರ್ಷ ಧಿಲ್ಲೋನ್ ವಿರುದ್ಧ ಈ ಆರೋಪ ಹೊರಿಸಲಾಗಿತ್ತು. ಇದೀಗ 13 ಸೆಪ್ಟೆಂಬರ್ 2023 ರಿಂದ ಜಾರಿಗೆ ಬರುವಂತೆ ಧಿಲ್ಲೋನ್ ಅವರನ್ನು 6 ವರ್ಷಗಳ ಕಾಲ ಕ್ರಿಕೆಟ್‌ನಿಂದ ನಿಷೇಧಿಸಲಾಗಿದೆ.



**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**